ಸಂಪುಟ: 06 ಸಂಚಿಕೆ: 169 ಪುಟಗಳು: 08 ಸೋಮವಾರ 31 ಆಗಸ್ಟ್ 2026 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಗೆಲುವಿಗೆ ಮೊದಲ ಮೆಟ್ಟಿಲೆಂದರೆ ನಾವು ಮಾಡಬೇಕಾದ ಕೆಲಸವನ್ನು ಪ್ರೀತಿಸಬೇಕು. ಶ್ರದ್ಧೆಯೇ ಎರಡನೇ ಹಂತ. ಅಲ್ಲಿಂದ ಗೆಲುವು ದೂರವಿಲ್ಲ.

# ವಿವಿಧತೆಯಲ್ಲಿ ಏಕತೆ ಪ್ರತಿಪಾದನೆ: ಮೋಹನ್ ಭಾಗವತ್

• ಉದಯವಾಹಿನಿ, ಬೆಂಗಳೂರು

ಭಾರತದಲ್ಲಿ ಮುಸ್ಲಿಮರಿಗೆ ಸ್ಥಾನವಿಲ್ಲ ಎಂದು ಭಾವಿಸುವ ಯಾವುದೇ ಹಿಂದೂ, ಹಿಂದೂವಾಗಿ ಉಳಿಯಲ್ಲ ಎಂದು ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್ ಹೇಳಿದ್ದಾರೆ. ನ್ಯೂಯಾರ್ಕ್‌ನಲ್ಲಿ ನಡೆದ 'ಒಂದು ಪ್ರಪಂಚ ಒಂದು ಮಾನವೀಯತೆ' ಕಾರ್ಯಕ್ರಮದಲ್ಲಿ ಆರ್‌ಎಸ್‌ಎಸ್ ಮುಖ್ಯಸ್ಥರು ಮಾತನಾಡಿದರು. ಮನುಷ್ಯರ ನಡುವೆ ಯಾವುದೇ ವ್ಯತ್ಯಾಸವಿಲ್ಲ. ವಿವಿಧ ಧಾರ್ಮಿಕ ಮಾರ್ಗಗಳು ಒಂದೇ ಗುರಿಯತ್ತ ಕರೆದೊಯ್ಯುತ್ತವೆ. ಸಹಬಾಳ್ವೆ ಹಿಂದೂ ಧರ್ಮದ ತಳಹದಿ. ಭಾರತದಲ್ಲಿ ಮುಸ್ಲಿಮರು ಇರಬಾರದು ಎಂದು ಭಾವಿಸುವ ಹಿಂದೂ, ಆತ ಹಿಂದೂ ಆಗಿಯೇ ಉಳಿಯಲ್ಲ ಎಂದಿದ್ದಾರೆ.

ನೀವು ನಿಮ್ಮನ್ನು ಹಿಂದೂ ಎಂದು ಕರೆದುಕೊಳ್ಳಲು ಬಯಸಿದರೆ, ಎಲ್ಲಾ ಮಾರ್ಗಗಳು ಒಂದೇ ಗುರಿಯತ್ತ ಕೊಂಡೊಯ್ಯುತ್ತವೆ ಮತ್ತು ಪ್ರತಿಯೊಬ್ಬರಿಗೂ ಘನತೆ ಇದೆ ಎಂದು ನಂಬಬೇಕು ಎಂದು ಹೇಳಿದರು. ರಾಜಕೀಯವು ಈಗ ಸ್ವಾರ್ಥದ ಆಟವಾಗಿದೆ. ಆದರೆ ಸಂಘವು ಏನನ್ನೂ ಬಯಸದೇ ಎಲ್ಲವನ್ನೂ ಸಮರ್ಪಿಸುತ್ತಿದೆ. ಏನನ್ನಾದರೂ ಪಡೆಯಲು ಸಂಘಕ್ಕೆ ಬರಬೇಡಿ ಎಂದು





ನಾನು ಹೇಳುತ್ತೇನೆ. ಸಂಘ ಏನನ್ನೂ ಕೇಳಲ್ಲ. ಅದು ನೀಡುತ್ತದೆ. ನಮಗೆ ಏನೂ ಬೇಡ. ಅದಕ್ಕಾಗಿ ಪ್ರಚಾರ ವಿಷಯದಲ್ಲಿ ನಾವು ಹಿಂದಿದ್ದೇವೆ ಎಂದು ಭಾಗವತ್ ತಿಳಿಸಿದರು. ಇಂದು ಏನೇ ಮಾಡಲು ನಿರ್ಧರಿಸಿದರೂ, ಅದನ್ನು ಮೊದಲು ನಮ್ಮದೇ ದೇಶದಿಂದ ಪ್ರಾರಂಭಿಸಬೇಕು. ನಿಸ್ವಾರ್ಥ ಸೇವೆ ಹಾಗೂ ಒಗ್ಗಟ್ಟಿನ ವಾತಾವರಣ ಹೊಂದಿರುವ ಸಣ್ಣ ಸಣ್ಣ ವಲಯಗಳನ್ನು ಸೃಷ್ಟಿಸಬೇಕು. ಬಳಿಕ ಸಂವಾದದ ಮೂಲಕವೇ ಒಂದಾಗುತ್ತಾ ನಾವು ಬೆಳೆಯಬೇಕು ಎಂದು ಅಭಿಪ್ರಾಯಪಟ್ಟರು. ಇದೇ ವೇಳೆ 1996ರ ಚಾರ್ಖಿ ದಾದ್ರಿ ವಿಮಾನ ಅಪಘಾತದ ಸಂದರ್ಭದಲ್ಲಿ ಆರ್‌ಎಸ್‌ಎಸ್ ಸ್ವಯಂಸೇವಕರ ಸೇವೆಯನ್ನು ಭಾಗವತ್ ಸ್ಮರಿಸಿದರು. ಭಾರತದ ಹರಿಯಾಣದ ದಾದ್ರಿ ಬಳಿ ಅರಬ್ ದೇಶದ ಎರಡು ವಿಮಾನಗಳು ಪರಸ್ಪರ ಡಿಕ್ಕಿ ಹೊಡೆದಿದ್ದವು. ಈ ವಿಮಾನಗಳಲ್ಲಿ ಹೆಚ್ಚಿನ ಪ್ರಯಾಣಿಕರು ಮುಸ್ಲಿಮರಾಗಿದ್ದರು. ಅಪಘಾತ ನಡೆದ ತಕ್ಷಣ, ನಮ್ಮ ಸ್ವಯಂಸೇವಕರು ಎಲ್ಲರಿಗಿಂತ ಮೊದಲು ಸ್ಥಳಕ್ಕೆ ತಲುಪಿ ಸೇವೆ ಮಾಡಿದರು.

ಗಾಯಗೊಂಡವರ ಚಿಕಿತ್ಸೆ ನೆರವು ನೀಡಿದರು. ಇನ್ನು ಮೃತರ ಶವಗಳನ್ನು ಹೊರತೆಗೆದು, ಶವ ಸಂಸ್ಕಾರಕ್ಕೆ ವ್ಯವಸ್ಥೆ ಮತ್ತು ಮೃತರ ಗುರುತು ಪತ್ತೆಹಚ್ಚುವಲ್ಲಿ ನೆರವಾಗಿದ್ದರು. ಆ ಸಮಯದಲ್ಲಿ ಇವರೆಲ್ಲರೂ ಮುಸ್ಲಿಮರು ಎಂದು ನಾವು ಎಂದಿಗೂ ಯೋಚಿಸಲಿಲ್ಲ ಎಂದು ಭಾಗವತ್ ತಿಳಿಸಿದರು. ನಮ್ಮ ಮಹಾನ್ ನಾಯಕರು ಕಾಲದಲ್ಲೂ ಇದನ್ನೇ ಒತ್ತಿ ಹೇಳಿದ್ದಾರೆ. ನಮ್ಮ ಸಂವಿಧಾನ ಕೂಡ ಇದನ್ನೇ ಹೇಳುತ್ತದೆ, ಆದರೆ ಅದು ಪ್ರಾಯೋಗಿಕವಾಗಿ ನಡೆಯುತ್ತಿಲ್ಲ. ಎಲ್ಲಿ ನಾನು ಮತ್ತು ನನ್ನದು ಇರುತ್ತದೆಯೋ ಅಲ್ಲಿ ಯಾವುದೇ ಪರಿಹಾರ ಇರುವುದಿಲ್ಲ. ಭಾರತದ 'ವಸುಧೈವ ಕುಟುಂಬಕಂ ತತ್ವವನ್ನು ಪರೋಕ್ಷವಾಗಿ ಪ್ರಸ್ತಾಪಿಸಿದ ಭಾಗವತ್ ಅವರು, ಧರ್ಮಗಳು ಬೇರೆ ಇರಬಹುದು. ಆದರೆ ಮಾನವೀಯತೆ ಒಂದೇ ಎಂದು ಸಾಂಪ್ರದಾಯಿಕವಾಗಿ ನಂಬುವ ಸಮಾಜದಲ್ಲಿ ತಾವು ಕೆಲಸ ಮಾಡುತ್ತಿದ್ದೇವೆ. ಸತ್ಯವು ಒಂದೇ ಮತ್ತು ಅದನ್ನು ಜನರು ವಿವಿಧ ರೀತಿಯಲ್ಲಿ ವಿವರಿಸಬಹುದು ಎಂದು ಆರ್‌ಎಸ್‌ಎಸ್ ಮುಖ್ಯಸ್ಥರು ಅಭಿಪ್ರಾಯಪಟ್ಟರು.

### ಯಾವುದೇ ಪ್ರತಿಫಲದ ಅಪೇಕ್ಷೆಯಿಲ್ಲ

**ನಾವು ರಾಜಕೀಯದಲ್ಲಿ ಇಲ್ಲದೇ ಇರುವುದರಿಂದ ನಮಗೆ ಈ ಕೆಲಸ ಮಾಡಲು ಸಾಧ್ಯವಾಯಿತು. ಮತ್ತು ನಾವು ಈ ವಿಷಯಗಳನ್ನು ಪ್ರಚಾರ ಮಾಡಲು ಹೋಗುವುದಿಲ್ಲ, ಏಕೆಂದರೆ ನಮಗೆ ಇದರಿಂದ ಏನೂ ಬೇಕಾಗಿಲ್ಲ. ಯಾವುದೇ ಪ್ರತಿಫಲದ ಅಪೇಕ್ಷೆಯಿಲ್ಲ. ತಪ್ಪು ನಿರೂಪಣೆಗಳಿಂದಾಗಿ ನಮ್ಮ ಬಗ್ಗೆ ಅನೇಕ ತಪ್ಪು ಗ್ರಹಿಕೆಗಳನ್ನು ಸೃಷ್ಟಿಸಲಾಗಿದೆ. ಆದರೆ ನೀವೇ ಖುದ್ದು ಬಂದು ನೋಡಿದಾಗ ಸತ್ಯದ ಅರಿವಾಗುತ್ತದೆ ಎಂದರು. ಸಮಾಜದಲ್ಲಿ ಸಕಾರಾತ್ಮಕ ಬದಲಾವಣೆಗಳನ್ನು ತರಲು ಕೆಲಸ ಮಾಡುವ ಅಗತ್ಯವಿದೆ. ಮಾನವೀಯತೆಯ ಏಕತೆಯೇ ಭಾರತದ ಸಾಂಪ್ರದಾಯಿಕ ಚಿಂತನೆಯಾಗಿದೆ.**



**ಭಾವಪೂರ್ಣ ಶ್ರದ್ಧಾಂಜಲಿ**

ಗೋಪಾಲ್ ಜಿ.(ಗೋಪಣ್ಣ) ಸಮಾಜ ಸೇವಕರು ಗೆಳೆಯರ ಬಳಗ ಮಹಾಲಕ್ಷ್ಮೀಪುರಂ ಬೆಂಗಳೂರು.
ನಿಧನ -30-08-2026 ಅಂತ್ಯಕ್ರಿಯೆ 31-08-2026
ಅಂತಿಮ ದರ್ಶನ ಬೆಳಗ್ಗೆ 10 ಗಂಟೆ ಸ್ಥಳ: ಸುಂಗನಹಳ್ಳಿ ರುದ್ರ ಭೂಮಿ (ಎಲೆಕ್ಟ್ರಿಕ್ ಬರ್ನಿಂಗ್)
ದುಃಖ ತಪ್ತರು: ಪತ್ನಿ, ಮಕ್ಕಳು, ಸೊಸೆಯಂದಿರು, ಅಳಿಯಂದಿರು, ಮೊಮ್ಮಕ್ಕಳು, ಮುಮ್ಮಕ್ಕಳು, ಕುಟುಂಬದವರು.
ಮತ್ತು ಸಂಪಾದಕರು ಉದಯವಾಹಿನಿ ಕನ್ನಡ ದಿನ ಪತ್ರಿಕೆ



**ಭಾರತ ಮತ್ತು ಉಜ್ಬೇಕಿಸ್ತಾನವು ಜಾಗತಿಕ ದಕ್ಷಿಣದ ಪರವಾಗಿ ಒಗ್ಗಟ್ಟಿನ ಧ್ವನಿಯಾಗಿ ಕಾರ್ಯನಿರ್ವಹಿಸಲಿವೆ ಎಂದು ಮೋದಿ ಹೇಳಿದರು. ಜಾಗತಿಕ ದಕ್ಷಿಣದ ಕಲ್ಯಾಣ ಮತ್ತು ಸಮಸ್ತ ಮಾನವಕುಲದ ಒಳಿತಿಗಾಗಿ ಪ್ರಯತ್ನಗಳನ್ನು ಮಾಡುವುದಾಗಿ ಅವರು ತಿಳಿಸಿದರು. ನಮ್ಮ ಎರಡೂ ದೇಶಗಳು ಸಂಪೂರ್ಣ ಸಮರ್ಪಣೆಯೊಂದಿಗೆ ಜಾಗತಿಕ ದಕ್ಷಿಣದ ಪರವಾಗಿ ಒಗ್ಗಟ್ಟಿನ ಧ್ವನಿಯಾಗಲಿವೆ ಎಂದು ಮೋದಿ ಹೇಳಿದರು. ಜಾಗತಿಕ ದಕ್ಷಿಣದ ಹಾಗೂ ಸಮಸ್ತ ಮಾನವಕುಲದ ಕಲ್ಯಾಣಕ್ಕಾಗಿ ಎರಡೂ ದೇಶಗಳು ಒಟ್ಟಾಗಿ ಕಾರ್ಯನಿರ್ವಹಿಸಲಿವೆ ಎಂದರು. ಮುನ್ನ ಪ್ರಧಾನಿ ಮೋದಿ ಅವರು ಅಧ್ಯಕ್ಷ ಮಿರ್ಜಿಯೋಯೆವ್ ಅವರೊಂದಿಗೆ ಮಾತುಕತೆ ನಡೆಸಿದರು. ಬಳಿಕ ಭಾರತ ಮತ್ತು ಉಜ್ಬೇಕಿಸ್ತಾನ ತಮ್ಮ ಸಂಬಂಧಗಳನ್ನು ಸಮಗ್ರ ಕಾರ್ಯತಂತ್ರದ ಪಾಲುದಾರಿಕೆ ಮಟ್ಟಕ್ಕೆ ಏರಿಸಲು ಒಪ್ಪಿಕೊಂಡವು. ವ್ಯಾಪಾರ, ಶುದ್ಧ ಇಂಧನ ಮತ್ತು ಸಂಪರ್ಕ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸಹಕಾರ ಬಲಪಡಿಸುವುದು ಮೋದಿ ಅವರ ಪ್ರವಾಸದ ಪ್ರಮುಖ ಉದ್ದೇಶವಾಗಿದೆ. ಆ.31 ಮತ್ತು ಸೆ. 1ರಂದು ನಡೆಯಲಿರುವ 26ನೇ ಶಾಂಘೈ ಸಹಕಾರ ಸಂಘಟನೆ ಶೃಂಗಸಭೆಯಲ್ಲಿ ಭಾಗವಹಿಸಲು ಮೋದಿ ತಾಷ್ಕೆಂಟ್‌ನಿಂದ ಕಿರ್ಗಿಸ್ತಾನಕ್ಕೆ ತೆರಳಲಿದ್ದಾರೆ.**

# ಜಗತ್ತಿಗೆ ಭಾರತ ಶಾಂತಿ ದೂತ



ಆತ್ಮೀಯ ಸ್ವಾಗತ

**ಭಾರತ ಬಲಿಷ್ಟ ರಾಷ್ಟ್ರ**

**1** ಭಾರತ ಮತ್ತು ಉಜ್ಬೇಕಿಸ್ತಾನ್‌ದ ನಡುವೆ ಮಹತ್ವದ ಯುರೇನಿಯಂ ಒಪ್ಪಂದ.

**2** ಯುರೇನಿಯಂ ಪೂರೈಕೆ ವ್ಯವಸ್ಥೆ ಸ್ಥಾಪನೆಗೆ ಉಭಯ ದೇಶಗಳ ನಡುವೆ ಸಮ್ಮತಿ.

**3** ಪ್ರಧಾನಿ ಮೋದಿ ಅವರಿಗೆ ಉಜ್ಬೇಕಿಸ್ತಾನ್ ಅತ್ಯುನ್ನತ ನಾಗರಿಕ ಪ್ರಶಸ್ತಿ ಪ್ರದಾನ.

ಉಜ್ಬೇಕಿಸ್ತಾನದ ಅಧ್ಯಕ್ಷ ಶವ್ಕತ್ ಮಿರ್ಜಿಯೋಯೆವ್ ಅವರು ಭಾನುವಾರ ಪ್ರಧಾನಿ ಮೋದಿ ಅವರಿಗೆ ದೇಶದ ಅತ್ಯುನ್ನತ ರಾಜ್ಯ ಗೌರವವಾದ 'ಆರ್ಡರ್ ಆಫ್ ಓಲಿ ದರಾಜಲಿ ದೂಸ್ತಿ ್ಲಕ್' ಪ್ರದಾನ ಮಾಡಿದರು. ಈ ಗೌರವವನ್ನು ಭಾರತ ಮತ್ತು ಉಜ್ಬೇಕಿಸ್ತಾನ ನಡುವಿನ ಶತಮಾನಗಳಷ್ಟು ಹಳೆಯ ಸ್ನೇಹ ಹಾಗೂ ಹಂಚಿಕೊಂಡಿರುವ ಪರಂಪರೆಗೆ ಪ್ರಧಾನಿ ಮೋದಿ ಸಮರ್ಪಿಸಿದರು. ಎರಡು ದಿನಗಳ ಪ್ರವಾಸಕ್ಕಾಗಿ ಉಜ್ಬೇಕಿಸ್ತಾನಕ್ಕೆ ತೆರಳಿರುವ ಪ್ರಧಾನಿ ಮೋದಿ, ಗೌರವ ಪ್ರದಾನ ಮಾಡಿದ್ದಕ್ಕಾಗಿ ಅಧ್ಯಕ್ಷ ಮಿರ್ಜಿಯೋಯೆವ್ ಅವರಿಗೆ ಧನ್ಯವಾದ ಅರ್ಪಿಸಿದರು. ತಮ್ಮ, ನಿಯೋಗದ ಸದಸ್ಯರಿಗೆ ನೀಡಿದ ಆತ್ಮೀಯ ಸ್ವಾಗತವನ್ನು ಶ್ಲಾಘಿಸಿದ ಅವರು, ಈ ಪ್ರವಾಸ ಸದಾ ಸ್ಮರಣೀಯವಾಗಿರಲಿದೆ ಎಂದರು. ನನ್ನ ಸ್ನೇಹಿತ, ಉಜ್ಬೇಕಿಸ್ತಾನದ ಆರ್ಥಿಕ ಕ್ರಾಂತಿಯ ಹರಿಕಾರ ಹಾಗೂ ಇಡೀ ಈ ಪ್ರದೇಶದಲ್ಲಿ ಅಭಿವೃದ್ಧಿಯ ಹೊಸ ಎತ್ತರಗಳನ್ನು ತಲುಪುವಲ್ಲಿ ಮಾದರಿಯಾಗಿರುವ ನಾಯಕ ಮಿರ್ಜಿಯೋಯೆವ್ ಅವರೊಂದಿಗಿನ ಈ ಎರಡು ದಿನಗಳ ಭೇಟಿ ಸದಾ ನೆನಪಿನಲ್ಲಿ ಉಳಿಯಲಿದೆ ಎಂದು ಮೋದಿ ಹೇಳಿದರು. ನನ್ನ ಹಾಗೂ ನನ್ನ ನಿಯೋಗವನ್ನು ಆತ್ಮೀಯವಾಗಿ ಸ್ವಾಗತಿಸಿದ ರೀತಿ ನಮಗೆ ನಮ್ಮ ಮನೆಯಲ್ಲಿರುವ ಅನುಭವವನ್ನು ನೀಡಿತು. ಇದಕ್ಕಾಗಿ ಅಧ್ಯಕ್ಷರಿಗೆ ನನ್ನ ಹೃದಯಪೂರ್ವಕ ಕೃತಜ್ಞತೆಗಳನ್ನು ಸಲ್ಲಿಸುತ್ತೇನೆ ಎಂದು ಅವರು ಹೇಳಿದರು. ತಮಗೆ ನೀಡಲಾದ ಗೌರವದ ಕುರಿತು ಮಾತನಾಡಿದ ಮೋದಿ, ಅಧ್ಯಕ್ಷ ಮಿರ್ಜಿಯೋಯೆವ್ ಅವರ ಮಾತುಗಳು ಭಾರತದ ಸಾವಿರಾರು ವರ್ಷಗಳ ಪರಂಪರೆ, ಸಾರ್ವತ್ರಿಕ ಸಹೋದರತ್ವದ ಮನೋಭಾವವಾದ ವಿಶ್ವಬಂಧುತ್ವ' ಹಾಗೂ 140 ಕೋಟಿ ಭಾರತೀಯರ ಉದ್ಯಮಶೀಲತೆ ಮತ್ತು ಪರಿಶ್ರಮವನ್ನು ಪ್ರತಿಬಿಂಬಿಸಿವೆ ಎಂದರು. ನಿಮ್ಮ ಮಾತುಗಳಿಗೆ ನಾನು ಕೇವಲ ಮಾಧ್ಯಮವಾಗಿರಬಹುದು. ಆದರೆ ಈ ಗೌರವದ ನಿಜವಾದ ಸ್ವೀಕೃತರು ಸಾವಿರಾರು ವರ್ಷಗಳಷ್ಟು ಹಳೆಯ ಭಾರತದ ಪರಂಪರೆ ಹಾಗೂ 140 ಕೋಟಿ ದೇಶವಾಸಿಗಳ ಪರಿಶ್ರಮ ಮತ್ತು ಛಲ. ಈ ಗೌರವಕ್ಕೆ ನಿಜವಾದ ಅರ್ಹರು ಅವರೇ ಎಂದು ಮೋದಿ ಹೇಳಿದರು. ಈ ಗೌರವವನ್ನು ಅತ್ಯಂತ ಹೆಮ್ಮೆಯ ಕ್ಷಣ ಎಂದು ಬಣ್ಣಿಸಿದ ಮೋದಿ, ದೂಸ್ತಿ ್ಲಕ್ ಎಂಬ ಪದದ ಅರ್ಥ ಸ್ನೇಹ ಎಂಬುದಾಗಿದ್ದು, ಇದು ಭಾರತ-ಉಜ್ಬೇಕಿಸ್ತಾನ ಸಂಬಂಧಗಳ ಮೂಲದಲ್ಲಿರುವ ಭಾವನೆಯನ್ನು ಪ್ರತಿಬಿಂಬಿಸುತ್ತದೆ ಎಂದರು. ಈ ಗೌರವ ಕೇವಲ ಒಬ್ಬ ವ್ಯಕ್ತಿಗೆ ಸೇರಿದ್ದಲ್ಲ, ಇದು ಭಾರತದ 140 ಕೋಟಿ ಜನರಿಗೆ ಸಲ್ಲುತ್ತದೆ ಎಂದು ಅವರು ಹೇಳಿದರು. ಗೌರವಕ್ಕಾಗಿ ಉಜ್ಬೇಕಿಸ್ತಾನದ ಜನತೆ, ಸರ್ಕಾರ ಹಾಗೂ ಅಧ್ಯಕ್ಷ ಮಿರ್ಜಿಯೋಯೆವ್ ಅವರಿಗೆ ಧನ್ಯವಾದ ಅರ್ಪಿಸಿದರು. ಅತ್ಯಂತ ವಿನಮ್ರತೆಯಿಂದ ಈ ಗೌರವವನ್ನು ಸ್ವೀಕರಿಸುತ್ತಿರುವುದಾಗಿ ತಿಳಿಸಿದ ಮೋದಿ, ಭಾರತ ಮತ್ತು ಉಜ್ಬೇಕಿಸ್ತಾನ ನಡುವಿನ ದೀರ್ಘಕಾಲದ ಸ್ನೇಹ ಹಾಗೂ ಹಂಚಿಕೊಂಡ ಪರಂಪರೆಗೆ ಈ ಗೌರವವನ್ನು ಸಮರ್ಪಿಸುವುದಾಗಿ ಹೇಳಿದರು. ಮಿರ್ಜಿಯೋಯೆವ್ ಅವರ ದೂರದೃಷ್ಟಿಯ ನಾಯಕತ್ವ ಮತ್ತು ಭಾರತದೊಂದಿಗಿನ ಸ್ನೇಹವು ಉಭಯ ದೇಶಗಳ ದ್ವಿಪಕ್ಷೀಯ ಸಂಬಂಧಗಳ ನಿರಂತರ ಬಲವರ್ಧನೆಗೆ ಕಾರಣವಾಗಿದೆ ಎಂದು ಮೋದಿ ಹೇಳಿದರು. ಈ ಸಂಬಂಧಗಳು ಇದೀಗ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆ ಮಟ್ಟಕ್ಕೆ ಏರಿಕೆಯಾಗಿವೆ ಎಂದರು. ಈ ಗೌರವವು ಹೆಚ್ಚಿನ ಜವಾಬ್ದಾರಿಯನ್ನೂ ಹೊತ್ತುತಂದಿದೆ ಎಂದು ಪ್ರಧಾನಿ ಹೇಳಿದರು. ಭಾರತವು ಉಜ್ಬೇಕಿಸ್ತಾನದೊಂದಿಗಿನ ಸ್ನೇಹಕ್ಕೆ ಸದಾ ಬದ್ಧವಾಗಿರಲಿದೆ ಎಂದು ಅಲ್ಲಿನ ಜನತೆಗೆ ಭರವಸೆ ನೀಡಿದರು. ಗೌರವವು ಖಂಡಿತವಾಗಿಯೂ ಹೆಮ್ಮೆ ಮತ್ತು ಪ್ರತಿಷ್ಠೆಯನ್ನು ತರುತ್ತದೆ. ಆದರೆ ಗೌರವದೊಂದಿಗೆ ದೊಡ್ಡ ಜವಾಬ್ದಾರಿಯೂ ಬರುತ್ತದೆ ಎಂಬುದು ನನಗೆ ಚೆನ್ನಾಗಿ ತಿಳಿದಿದೆ ಎಂದು ಮೋದಿ ಹೇಳಿದರು. ಭಾರತವು ಈ ಸ್ನೇಹವನ್ನು ಗೌರವಿಸಲಿದೆ ಎಂದು ತಿಳಿಸಿದರು.

### ಪ್ರಧಾನಿ ಮೋದಿಗೆ ಗೌರವ

ತಾಷ್ಕೆಂಟ್‌ನಲ್ಲಿ ಅಧ್ಯಕ್ಷ ಶವ್ಕತ್ ಮಿರ್ಜಿಯೊಯೆವ್ ಪ್ರಧಾನಿ ಮೋದಿ ಅವರಿಗೆ ಉಜ್ಬೇಕಿಸ್ತಾನ್‌ದ ಅತ್ಯುನ್ನತ ನಾಗರಿಕ ಪ್ರಶಸ್ತಿ ನೀಡಿ ಗೌರವಿಸಿದರು.

ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ಪ್ರಧಾನಿ ಮೋದಿ, ಭಾರತ-ಉಜ್ಬೇಕಿಸ್ತಾನ್ ಸ್ನೇಹವು ಸಮೃದ್ಧವಾಗಿ ಬೆಳೆಯಲಿ! ವಿವಿಧ ಕ್ಷೇತ್ರಗಳಲ್ಲಿ ನಮ್ಮ ದ್ವಿಪಕ್ಷೀಯ ಪಾಲುದಾರಿಕೆಯು ಪ್ರಗತಿ ಕಾಣಲಿ ಮತ್ತು ನಮ್ಮ ಜನರು ಸಮೃದ್ಧಿಯನ್ನು ಹೊಂದಲಿ ಎಂದು ಶುಭಹಾರೈಸಿದರು. ಭಾರತವನ್ನು ವಿಶ್ವಾಸಾರ್ಹ ಕಾರ್ಯತಂತ್ರದ ಪಾಲುದಾರ ರಾಷ್ಟ್ರ ಎಂದು ಬಣ್ಣಿಸಿದ ಉಜ್ಬೇಕಿಸ್ತಾನ್ ಅಧ್ಯಕ್ಷ ಶವ್ಕತ್ ಮಿರ್ಜಿಯೊಯೆವ್, ದ್ವಿಪಕ್ಷೀಯ ವ್ಯಾಪಾರವು ಕಳೆದ ವರ್ಷ ಮೊದಲ ಬಾರಿಗೆ 1 ಬಿಲಿಯನ್ ಅಮೆರಿಕನ್ ಡಾಲರ್ ಗಡಿಯನ್ನು ದಾಟಿದೆ. ಕೆಲವು ವರ್ಷಗಳ ಹಿಂದಿನದಕ್ಕೆ ಹೋಲಿಸಿದರೆ ಜಂಟಿ ಉದ್ಯಮಗಳು ಏಳು ಪಟ್ಟು ಹೆಚ್ಚಾಗಿವೆ ಎಂದು ಹೇಳಿದರು. ಒಟ್ಟಿನಲ್ಲಿ ಪ್ರಧಾನಿ ಮೋದಿ ಅವರ ಉಜ್ಬೇಕಿಸ್ತಾನ್ ಪ್ರವಾಸ, ದ್ವಿಪಕ್ಷೀಯ ಸಂಬಂಧ ಗಟ್ಟಿಗೊಳಿಸಿದೆ ಎಂದು ಹೇಳಬಹುದು.

- ಭಾರತ ಮತ್ತು ಉಜ್ಬೇಕಿಸ್ತಾನ್‌ದ ನಡುವೆ ಮಹತ್ವದ ಯುರೇನಿಯಂ ಒಪ್ಪಂದ
- ಯುರೇನಿಯಂ ಪೂರೈಕೆ ವ್ಯವಸ್ಥೆ ಸ್ಥಾಪನೆ
- ಉಭಯ ದೇಶಗಳ ನಡುವೆ ಸಮ್ಮತಿ.
- ಪ್ರಧಾನಿ ಮೋದಿ ಅವರಿಗೆ ಉಜ್ಬೇಕಿಸ್ತಾನ್ ಅತ್ಯುನ್ನತ ನಾಗರಿಕ ಪ್ರಶಸ್ತಿ ಪ್ರದಾನ



### ಸಾಂಸ್ಕೃತಿಕ ಬಾಂಧವ್ಯ

ಭಾರತದ ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿ ಅವರು ತಾಷ್ಕೆಂಟ್‌ನಲ್ಲೇ ನಿಧನರಾಗಿದ್ದರು. ಅವರ ನೆನಪಿಗಾಗಿ ಅಲ್ಲಿರುವ ಸಾಂಸ್ಕೃತಿಕ ಕೇಂದ್ರ ಮತ್ತು ಮಹಾತ್ಮಗಾಂಧಿ ಅಧ್ಯಯನ ಕೇಂದ್ರಗಳು ಭಾರತದ ಸಂಸ್ಕೃತಿಯನ್ನು ಅಲ್ಲಿ ಪಸರಿಸುತ್ತಿವೆ. ಅಲ್ಲಿನ ಜನರಲ್ಲಿ ಯೋಗ ಕೂಡ ತುಂಬಾ ಜನಪ್ರಿಯವಾಗಿದ್ದು, ಅದಕ್ಕಾಗಿಯೇ ಒಂದು ರಾಷ್ಟ್ರೀಯ ಒಕ್ಕೂಟ ಕೆಲಸ ಮಾಡುತ್ತಿದೆ. ಇಂದು ತಮ್ಮ ತಾಲ್ಕೆಂಟ್ ಪ್ರವಾಸ ಮುಗಿಸಿರುವ ಪ್ರಧಾನಿ ಮೋದಿ ಅವರು, ಮುಂದಿನ ಎಸ್‌ಸಿಒ ಶೃಂಗಸಭೆಗಾಗಿ ಕಿರ್ಗಿಸ್ತಾನ್‌ನ ಬಿಷ್ಕೆಕ್‌ಗೆ ಪ್ರಯಾಣ ಬೆಳೆಸಲಿದ್ದಾರೆ ಎಂದು ತಿಳಿದು ಬಂದಿದೆ. ಕಳೆದ ಕೆಲವು ವರ್ಷಗಳಿಗೆ ಹೋಲಿಸಿದರೆ ಭಾರತ ಮತ್ತು ಉಜ್ಜಿಕಿಸ್ತಾನ್ ನಡುವಿನ ಜಂಟಿ ಉದ್ಯಮಗಳು 7 ಪಟ್ಟು ಹೆಚ್ಚಾಗಿವೆ. ಒಟ್ಟು ವ್ಯಾಪಾರವು ಮೊದಲ ಬಾರಿಗೆ ಸುಮಾರು 8,400 ಕೋಟಿ ರೂ ದಾಟಿದೆ. ಈಗ ವಾರಕ್ಕೆ 14 ನೇರ ವಿಮಾನಗಳಿರುವುದರಿಂದ ಉಭಯ ದೇಶಗಳ ನಡುವಿನ ಪ್ರಯಾಣ ಇನ್ನು ಸುಲಭವಾಗಲಿದೆ.

## ಬೆಂಗಳೂರಿಗೆ ಆಗಮಿಸಿದ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್




• ಉದಯವಾಹಿನಿ, ಬೆಂಗಳೂರು

ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್ ಬೆಂಗಳೂರಿಗೆ ಆಗಮಿಸಿದ್ದಾರೆ. ದೆಹಲಿಯಿಂದ ಇಂಡಿಗೋ ವಿಮಾನದ ಮೂಲಕ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ನಿತಿನ್ ನಬಿನ್ ಆಗಮಿಸಿದರು. ಕುಟುಂಬ ಸಮೇತರಾಗಿ ಬೆಂಗಳೂರಿಗೆ ಆಗಮಿಸಿದ ನಿತಿನ್ ನಬಿನ್ ಅವರನ್ನ ದೇವನಹಳ್ಳಿ ಭಾಗದ ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು ಕೆಂಪೇಗೌಡ ವಿಮಾನ ನಿಲ್ದಾಣದಲ್ಲಿ ಆತ್ಮೀಯವಾಗಿ ಸ್ವಾಗತಿಸಿದರು. ನಿತಿನ್ ನಬಿನ್ ಅವರು ಬೆಂಗಳೂರಿನಲ್ಲಿ ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸುವ ಹಿನ್ನೆಲೆಯಲ್ಲಿ ನಗರಕ್ಕೆ ಆಗಮಿಸಿದ್ದಾರೆ. ದೇವನಹಳ್ಳಿ ಬಳಿಯ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರ ಉಪಸ್ಥಿತಿಯಲ್ಲಿ ಸ್ವಾಗತಿಸಲಾಯಿತು.

## ಪಾರ್ಕ್ ಉಳಿಸೋದು ಕ್ರೈಂ ಅಂದ್ರೆ ಪ್ರತಿದಿನ ಈ ಕ್ರೈಮ್ ಮಾಡಲು ಸಿದ್ಧ: ತೇಜಸ್ವಿ ಸೂರ್ಯ

• ಉದಯವಾಹಿನಿ, ಬೆಂಗಳೂರು

ಪಾರ್ಕ್ ಉಳಿಸೋದು ಕ್ರೈಂ ಅಂದ್ರೆ, ಪ್ರತಿದಿನ ಈ ಕ್ರೈಮ್ ಮಾಡಲು ಸಿದ್ಧ ಎಂದು ಬಿಜೆಪಿ ಸಂಸದ ತೇಜಸ್ವಿ ಸೂರ್ಯ ಹೇಳಿದ್ದಾರೆ. ಲಾಲ್‌ಬಾಗ್‌ನಲ್ಲಿ ನಡೆದ ವಾಕಿಂಗ್ ಅಭಿಯಾನದಲ್ಲಿ ಭಾಗವಹಿಸಿದ್ದವರಿಗೆ ಪೊಲೀಸರು ನೋಟಿಸ್ ನೀಡಿರುವುದನ್ನು ಖಂಡಿಸಿ, ತೇಜಸ್ವಿ ಸೂರ್ಯ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಪಾರ್ಕ್‌ಗಳನ್ನು ಉಳಿಸುವುದು ಅಪರಾಧವಲ್ಲ. ಪರಿಸರ ಸಂರಕ್ಷಣೆಗೆ ಕಾನೂನು ಇದೆ. ಆ ಕಾನೂನನ್ನು ಉಲ್ಲಂಘಿಸುವವರೇ ಕ್ರಿಮಿನಲ್‌ಗಳು ಎಂದು ಕಿಡಿಕಾರಿದರು. ಟನಲ್ ಯೋಜನೆ ಕೈಬಿಡಬೇಕು. ಯೋಜನೆ ಮುಂದುವರಿಸಿದರೆ ಪ್ರತಿವಾರ ಬೆಂಗಳೂರಿನ ಬೇರೆ ಬೇರೆ ಉದ್ಯಾನವನಗಳಲ್ಲಿ ಪ್ರತಿಭಟನೆ ನಡೆಸುವುತ್ತೇವೆ. ಮುಂದಿನ ಭಾನುವಾರವೂ ಪ್ರತಿಭಟನೆ ನಡೆಸುವುದಾಗಿ ಘೋಷಿಸಿದರು. ವಿಧಾನಸೌಧ ಚಲೋ ಸೇರಿದಂತೆ ಹಂತ ಹಂತವಾಗಿ ಹೋರಾಟ ನಡೆಸುತ್ತೇವೆ ಎಂದು ಸರ್ಕಾರಕ್ಕೆ ಎಚ್ಚರಿಕೆ ನೀಡಿದರು. ಮುಖ್ಯಮಂತ್ರಿಗಳೇ, ಇಲ್ಲಿರುವ ಜನರೇ ಹಣ ಕೊಡಲು ಸಿದ್ಧರಿದ್ದಾರೆ. ಭೂಮಿ ತಾಯಿಯನ್ನು ಕೊಲೆ ಮಾಡಿ ಹಣ ಮಾಡಬೇಡಿ ಎಂದು ತೇಜಸ್ವಿ ಸೂರ್ಯ ಸರ್ಕಾರಕ್ಕೆ ಮನವಿ ಮಾಡಿದರು.



## ಸಿಎಂಗೆ ಶೋಭಾ ಕರಂದ್ಲಾಜೆ ಟಾಂಗ್

• ಉದಯವಾಹಿನಿ, ಬೆಂಗಳೂರು

'WALK IN LALBAGH, WALK FOR LALBAGH' ' ಎಂಬ ಘೋಷಣೆಯೊಂದಿಗೆ ಇಂದು ಲಾಲ್‌ಬಾಗ್‌ನಲ್ಲಿ ನಡೆಯುತ್ತಿದ್ದ ಬೃಹತ್ ವಾಕಿಂಗ್ ಅಭಿಯಾನ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಕೈಜೋಡಿಸಿದರು. ಇದೇ ವೇಳೆ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಯಾವುದೇ ಚರ್ಚೆ ಇಲ್ಲದೇ 8 ಬಿಲ್‌ಗಳನ್ನು ಸರ್ಕಾರ ಪಾಸ್ ಮಾಡಿದೆ ಎಂದು ಸರ್ಕಾರದ ವಿರುದ್ಧ ಆಕ್ರೋಶ ಹೊರಹಾಕಿದ್ರು. 1975ರಲ್ಲಿ ಕರ್ನಾಟಕದ ಪಾರ್ಕ್‌ಗಳ ) ಉಳಿವಿಗಾಗಿ ಪಾಸ್ ಆದ ಬಿಲ್‌ಗೆ ತಿದ್ದುಪಡಿ ತಂದಿದ್ದಾರೆ. ಈ ಬಿಲ್‌ನ ಪ್ರಕಾರ ಶೇ.5ರಷ್ಟು ಜಾಗದಲ್ಲಿ ಏನು ಬೇಕಾದರೂ ಮಾಡಬಹುದು. ಬೆಂಗಳೂರಿನ 1.5 ಕೋಟಿ ಜನರಿಗೆ 30 ಸಾವಿರ ಎಕ್ರೆ ಪಾರ್ಕ್‌ಗಳು ಬೇಕು. ಈ ಸರ್ಕಾರ ಕರ್ನಾಟಕದ ಎಲ್ಲಾ ಪಾರ್ಕ್‌ಗಳ ಶೇ.5ರಷ್ಟು ಜಾಗ ಪಡೆಯಲು ಹೊರಟಿದೆ ಎಂದು ಆರೋಪಿಸಿದರು. ರಿಯಲ್ ಎಸ್ಟೇಟ್ ಏಜೆಂಟ್ ಸರ್ಕಾರದ ಚುಕ್ಕಾಣಿ ಹಿಡಿದರೆ ಏನಾಗುತ್ತದೆ ಎಂಬುದಕ್ಕೆ ಇದು ಉದಾಹರಣೆ. ಹೆಬ್ಬಾಳ ಕೆರೆ ಒತ್ತುವರಿ ಮಾಡಿದ್ದಾರೆ.

## ಬೀದಿ ದೀಪ ಲೋಪ: ಸಚಿವರ ಸೂಚನೆಗೂ ಡೋಂಟ್ ಕೇರ್; ಅಧಿಕಾರಿಗಳ ವಿರುದ್ಧ ಕಟ್ಟುನಿಟ್ಟಿನ ಕ್ರಮಕ್ಕೆ ಮುಂದಾದ ಕೃಷ್ಣಬೈರೇಗೌಡ

• ಉದಯವಾಹಿನಿ, ಬೆಂಗಳೂರು

ಜಿಬಿಎ ವ್ಯಾಪ್ತಿಯಲ್ಲಿ ವಿದ್ಯುತ್ ಬೀದಿ ದೀಪಗಳ ನಿರ್ವಹಣೆ ಕುರಿತಂತೆ ಈಗಾಗಲೇ ಎರಡು ಬಾರಿ ಸಭೆ ಮಾಡಿ ಸೂಚನೆ ನೀಡಿದರೂ ನಗರದ ಪ್ರಮುಖ ರಸ್ತೆಗಳಲ್ಲಿ ವಿದ್ಯುತ್ ಬೀದಿ ದೀಪಗಳು ಕಾರ್ಯನಿರ್ವಹಿಸದಿರುವುದು ಕಂಡು ಬಂದಿದೆ. ಹೀಗಾಗಿ ಕರ್ತವ್ಯ ಲೋಪ ಎಸಗಿರುವವರ ವಿರುದ್ಧ ಕಠಿಣ ಶಿಸ್ತು ಕ್ರಮ ಜರುಗಿಸುವಂತೆ ಅಧಿಕಾರಿಗಳಿಗೆ ನಗರಾಭಿವೃದ್ಧಿ ಸಚಿವ ಕೃಷ್ಣಬೈರೇಗೌಡ ಖಡಕ್ ಸೂಚನೆ ನೀಡಿದ್ದಾರೆ. ಈ ಕುರಿತಾಗಿ ಸಚಿವ ಕೃಷ್ಣಬೈರೇಗೌಡ ಟ್ವೀಟ್ ಮಾಡಿದ್ದಾರೆ. ಆ.28ರ ಸಂಜೆ ನಾನು ಹಡ್ಸನ್ ವೃತ್ತದಿಂದ ಚಾಲುಕ್ಯ ವೃತ್ತದವರೆಗೆ ರಸ್ತೆಯಲ್ಲಿ ಖುದ್ದಾಗಿ ವಿದ್ಯುತ್ ಬೀದಿ ದೀಪಗಳ ಪರಿವೀಕ್ಷಣೆ ಮಾಡುವ ಸಂದರ್ಭದಲ್ಲಿ ಒಟ್ಟು 222 ಪೈಕಿ 140 ವಿದ್ಯುತ್ ಕಂಬಗಳಲ್ಲಿನ ದೀಪಗಳು ಕಾರ್ಯನಿರ್ವಹಿಸದಿರುವುದು ಕಂಡುಬಂದಿದೆ.

ಜಿಬಿಎ ವ್ಯಾಪ್ತಿಯ ವಿದ್ಯುತ್ ಬೀದಿ ದೀಪಗಳ ನಿರ್ವಹಣೆ ಕುರಿತಂತೆ ಈಗಾಗಲೇ ಎರಡು ಬಾರಿ ಸಭೆಯನ್ನು ನಡೆಸಿ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಆ.04ರಂದು ಈ ಕುರಿತು ನಡೆದ ಸಭೆಯಲ್ಲಿ ಹಾಜರಾಗಿದ್ದ ಅಧಿಕಾರಿಗಳು ಹಾಗೂ ಗುತ್ತಿಗೆದಾರರಿಗೂ ಸಹ ಬೀದಿ ದೀಪಗಳ ನಿರ್ವಹಣೆಯಲ್ಲಿ ಯಾವುದೇ ಲೋಪಗಳು ಉಂಟಾಗದಂತೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿತ್ತು. ಹಡ್ಸನ್‌ರಸ್ತೆಯು ಬೆಂಗಳೂರು ನಗರದ ಹೃದಯ ಪ್ರಮುಖ ರಸ್ತೆಯಾಗಿದ್ದು, ಕೆಂಪೇಗೌಡ ಬಸ್ ನಿಲ್ದಾಣಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಯಾಗಿದೆ.

## ಐಸಿಸ್ ಜೊತೆ ಸೇರಿ ಭಯೋತ್ಪಾದಕ ಕೃತ್ಯಕ್ಕೆ ಸಂಚು: ಬೆಂಗಳೂರಿನ ಸೂತ್ರಧಾರಿಗೆ 7 ವರ್ಷ ಜೈಲು ಶಿಕ್ಷೆ

• ಉದಯವಾಹಿನಿ, ಬೆಂಗಳೂರು

ಉಗ್ರ ಸಂಘಟನೆ ಐಸಿಸ್ ಜೊತೆ ಸೇರಿ ಭಯೋತ್ಪಾದಕ ಕೃತ್ಯಕ್ಕೆ ಸಂಚು ರೂಪಿಸಿದ್ದ ಪ್ರಕರಣದ ಸೂತ್ರಧಾರಿ ಸೈಯದ್ ಫಸಿಯುರ್ ರೆಹಮಾನ್‌ಗೆ ಬೆಂಗಳೂರಿನ ರಾಷ್ಟ್ರೀಯ ತನಿಖಾ ಸಂಸ್ಥೆ ವಿಶೇಷ ನ್ಯಾಯಾಲಯ 7 ವರ್ಷಗಳ ಜೈಲು ಶಿಕ್ಷೆ ಹಾಗೂ 48 ಸಾವಿರ ರೂಪಾಯಿ ದಂಡ ವಿಧಿಸಿ ತೀರ್ಪು ನೀಡಿದೆ. 2020ರ ಜನವರಿ 10ರಂದು ಬೆಂಗಳೂರು ಪೊಲೀಸರು ರೆಹಮಾನ್ ವಿರುದ್ಧ ಮೊದಲು ಪ್ರಕರಣ ದಾಖಲಿಸಿದ್ದರು. . 'ಅಲ್-ಹಿಂದ್ ಐಸಿಸ್' ಸಂಚಿಗೆ ಸಂಬಂಧಿಸಿದಂತೆ ಎನ್‌ಐಎ ತೀವ್ರ ವಿಚಾರಣೆ ನಡೆಸಿ, ಇದುವರೆಗೆ ಒಟ್ಟು 20 ಆರೋಪಿಗಳ ವಿರುದ್ಧ 3 ಚಾರ್ಜ್‌ಶೀಟ್‌ಗಳನ್ನು ನ್ಯಾಯಾಲಯಕ್ಕೆ ಸಲ್ಲಿಸಲಾಗಿದೆ. ಈ ಪ್ರಕರಣದ ಮತ್ತೊಬ್ಬ ಆರೋಪಿ ಹನೀಫ್ ಖಾನ್ ಈಗಾಗಲೇ ತನ್ನ ತಪ್ಪನ್ನು ಒಪ್ಪಿಕೊಂಡಿದ್ದಾನೆ. ಈ ಭಯೋತ್ಪಾದಕ ಜಾಲದ ಮುಖ್ಯ ಸೂತ್ರಧಾರಿಯಾಗಿದ್ದ ಮೆಹಬೂಬ್ ಪಾಷಾಗೂ ಶಿಕ್ಷೆಯಾಗಿದೆ. ಬೆಂಗಳೂರಿನ ಗುರುಪ್ಪನಪಾಳ್ಯದಲ್ಲಿದ್ದ ತನ್ನ ನಿವಾಸದಲ್ಲಿಯೇ ಮೆಹಬೂಬ್ ಪಾಷಾ ಹಲವು ಸಭೆಗಳನ್ನು ಮಾಡಿದ್ದ.

ಕೋಮು ಗಲಭೆಗಳನ್ನು ಪ್ರಚೋದಿಸುವುದು ಹಾಗೂ ನಿರ್ದಿಷ್ಟ ವ್ಯಕ್ತಿಗಳನ್ನು ಗುರಿಯಾಗಿಸಿಕೊಂಡು 'ಟಾರ್ಗೆಟ್ ಕಿಲ್ಲಿಂಗ್ಸ್' ನಡೆಸಲು ಯೋಜನೆ ರೂಪಿಸಲಾಗಿತ್ತು. ಮೆಹಬೂಬ್ ಪಾಷಾ ನಡೆಸುತ್ತಿದ್ದ ಈ ಸಂಚಿನ ಸಭೆಗಳಲ್ಲಿ ಸೈಯದ್ ಫಸಿಯುರ್ ರೆಹಮಾನ್ ಸಕ್ರಿಯವಾಗಿ ಭಾಗವಹಿಸುತ್ತಿದ್ದ.

ಇದಕ್ಕಾಗಿ ಸ್ಪೋರ್ಟ್ಸ್ ಶೋರೂಮ್‌ಗೆ ತೆರಳಿ ಟೆಂಟ್‌ಗಳು ಹಾಗೂ ಚಾಕುಗಳನ್ನು ಖರೀದಿಸಿ ತಂದುಕೊಟ್ಟಿದ್ದ ಎಂಬುದು ತನಿಖೆಯಲ್ಲಿ ದೃಢಪಟ್ಟಿದೆ.

# ಸೆ.1 ರಿಂದ ನಮ್ಮ ಪಾದಯಾತ್ರೆ ಲಿಂಗಸುಗೂರಿನಿಂದ ಪ್ರಾರಂಭವಾಗಲಿದೆ: ಬಿವೈವಿ

## ಪಾದಯಾತ್ರೆ ವಿಷಯದಲ್ಲಿ ಗೊಂದಲ ಇಲ್ಲ ಎಂದ ಬಿಜೆಪಿ ರಾಜ್ಯಾಧ್ಯಕ್ಷ ; ತನಿಖೆ ನಡೆದು ಸತ್ಯಾಸತ್ಯತೆ ಹೊರಕ್ಕೆ ಬರಲಿ

• ಉದಯವಾಹಿನಿ, ಬೆಂಗಳೂರು

ಪಾದಯಾತ್ರೆ ಸಂಬಂಧ ನಾನೇ ಸ್ವತಃ ಹೆಚ್.ಡಿ.ಕುಮಾರಸ್ವಾಮಿ ಅವರ ಜೊತೆ ಮಾತನಾಡಿದ್ದೇನೆ. ವಿಪಕ್ಷ ನಾಯಕ ಆರ್.ಅಶೋಕ್ ಅವರು ಇದ್ದಾಗ ಒಟ್ಟಾಗಿ ಮಾತನಾಡಿದ್ದೇವೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ತಿಳಿಸಿದರು.

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಮಾಧ್ಯಮಗಳ ಜೊತೆ ಮಾತನಾಡಿದ ಅವರು, ನಾಗೇಂದ್ರರು ರಾಜೀನಾಮೆ ಕೊಟ್ಟಿದ್ದು, ಮತ್ಯಾಕೆ ಪಾದಯಾತ್ರೆ ಎಂದು ನಮ್ಮ ಹಲವು ಮುಖಂಡರು ಸೇರಿ ಕೆಲವರಲ್ಲಿ ಗೊಂದಲ ಇತ್ತು. ನಾನು ನಮ್ಮ ರಾಷ್ಟ್ರೀಯ ನಾಯಕರ ಜೊತೆ ಚರ್ಚೆ ಮಾಡಿದ್ದೇನೆ ಎಂದು ವಿವರಿಸಿದರು. ಅವರ ಅನುಮತಿಯನ್ನೂ ಪಡೆದುಕೊಂಡಿದ್ದೇನೆ ಎಂದರು.

ನಮ್ಮ ಪಾದಯಾತ್ರೆಗೆ ನಾಗೇಂದ್ರರ ರಾಜೀನಾಮೆ ಹಲವು ವಿಷಯಗಳಲ್ಲಿ ಒಂದು. 8-10 ವಿಷಯಗಳೊಂದಿಗೆ ಪಾದಯಾತ್ರೆ ಮಾಡುತ್ತಿದ್ದೇವೆ. ಗೊಂದಲಕ್ಕೆ ಅವಕಾಶವೇ ಇಲ್ಲ. ಎಚ್.ಡಿ.ಕುಮಾರಸ್ವಾಮಿ ಅವರ ಜೊತೆ ಮತ್ತೆ ಮಾತನಾಡುವೆ. ಅವರಲ್ಲಿ ತಪ್ಪು ಕಲ್ಪನೆ ಆಗಿರಬಹುದು. 10 ಹಲವು ವಿಚಾರ ಇಟ್ಟುಕೊಂಡು ಪಾದಯಾತ್ರೆ ನಡೆಯಲಿದೆ ಎಂದು ಪ್ರಶ್ನೆಗೆ ಉತ್ತರಿಸಿದರು. ಕೆಪಿಎಸ್ಸಿಯ ಐಎಎಸ್ ಅಧಿಕಾರಿ ಬಂಧನ ಕುರಿತು



ಪ್ರಶ್ನಿಸಿದಾಗ, ಗೃಹ ಸಚಿವ ಪ್ರಿಯಾಂಕ್ ಖರ್ಗೆಯವರು ಒಂದು ವಾರದ ಹಿಂದೆ ಉತ್ತರ ಪ್ರದೇಶದ ಅವರ ಗ್ರಾಮಕ್ಕೆ ತೆರಳಿದ್ದಾರೆ. ಅಲ್ಲಿ ಪೊಲೀಸರು ತೆರಳಿದ್ದು, ಅಲ್ಲಿಯೂ ಇರಲಿಲ್ಲ. ಈಗ ತನಿಖೆಗೆ ಹಾಜರಾಗಿದ್ದಾರೆ. ತನಿಖೆ ನಡೆದು ಸತ್ಯಾಸತ್ಯತೆ ಹೊರಕ್ಕೆ ಬರಲಿ. ಯಾರೇ ದೊಡ್ಡ ವ್ಯಕ್ತಿಗಳಿದ್ದರೂ ಸತ್ಯ ಬಹಿರಂಗ ಆಗಬೇಕು ಎಂದು ಒತ್ತಾಯಿಸಿದರು. ದಲಿತರನ್ನು ಕಂಡರೆ ಬಿಜೆಪಿಯವರಿಗೆ ಆಗುವುದಿಲ್ಲ ಎಂದು ಕಾಂಗ್ರೆಸ್‌ನ ಕೆಲವು ನಾಯಕರು ಮಾತನಾಡುತ್ತಿದ್ದರು.

**ರಾಷ್ಟ್ರೀಯ ನಾಯಕರ ಜೊತೆ ಚರ್ಚೆ**

ಮಾನ್ಯ ಮುಖ್ಯಮಂತ್ರಿಗಳೇ, ಹಿಂದೆ ಕೆ.ಎನ್.ರಾಜಣ್ಣ ಅವರು ರಾಹುಲ್ ಗಾಂಧಿಯವರ ಮತಗಳ್ಳತನ ಸಂಬಂಧ ಪ್ರಶ್ನೆ ಎತ್ತಿದ್ದಕ್ಕಾಗಿ 24 ಗಂಟೆಯೊಳಗೆ ಅವರ ರಾಜೀನಾಮೆ ಪಡೆದಿರಲ್ಲವೇ? ಅವತ್ತು ರಾಜಣ್ಣ ಅವರು ದಲಿತರು, ಪರಿಶಿಷ್ಟ ಪಂಗಡದವರೆಂದು ಕಾಂಗ್ರೆಸ್‌ನವರಿಗೆ ಅನಿಸಲಿಲ್ಲವೇ? ದಲಿತರ ಹಣ ಕೊಳ್ಳೆ ಹೊಡೆಯುವಾಗ ಡಿ.ಕೆ.ಶಿವಕುಮಾರರಿಗೆ ಏನೂ ಅನಿಸಲಿಲ್ಲವೇ? ಎಸ್‌ಇಪಿ, ಟಿಎಸ್‌ಪಿ ಹಣವನ್ನು ದುರ್ಬಳಕೆ ಮಾಡಿಕೊಂಡಾಗ, ಆ ಸಮುದಾಯಕ್ಕೆ ಅನ್ಯಾಯ ಆಗುತ್ತಿದೆ ಎಂದು ಮುಖ್ಯಮಂತ್ರಿಗಳಿಗೆ ಅನಿಸಲಿಲ್ಲವೇ ಎಂದು ಕೇಳಿದರು ಹಿಂದೆ ಬಸವರಾಜ ಬೊಮ್ಮಾಯಿಯವರ ನೇತೃತ್ವದ ಬಿಜೆಪಿ ಸರ್ಕಾರ ಇದ್ದಾಗ ಪರಿಶಿಷ್ಟ ಪಂಗಡ, ಪರಿಶಿಷ್ಟ ಜಾತಿಯ ಮೀಸಲಾತಿ ಪ್ರಮಾಣ ಹೆಚ್ಚಿಸಿದ್ದರು.

ನಿಮ್ಮ ಕಾಂಗ್ರೆಸ್ ಸರ್ಕಾರ ಬಂದ ಬಳಿಕ ಅದಕ್ಕೂ ಮಣ್ಣು ಹಾಕುವ ಕೆಲಸ ಮಾಡಿದ್ದೀರಲ್ಲವೇ? ಅವತ್ತು ನಿಮಗೆ ದಲಿತರ ಕಾಳಜಿ ನೆನಪಾಗಲಿಲ್ಲವೇ? ಸತ್ಯ ಏನೆಂದು ರಾಜ್ಯದ ಜನರಿಗೆ ಗೊತ್ತಿದೆ. ಶೋಷಿತ-ಪೀಡಿತ ಸಮುದಾಯಗಳಿಗೂ ಗೊತ್ತಿದೆ. ಸೆ.1ರಿಂದ ನಮ್ಮ ಪಾದಯಾತ್ರೆ ಲಿಂಗಸುಗೂರಿನಿಂದ ಪ್ರಾರಂಭವಾಗಲಿದೆ ಎಂದು ಹೇಳಿದರು.

### ಸಮಾನಾಂತರ ಜಲಾಶಯ ನಿರ್ಮಿಸಿ

**ದುರ್ಬಳಕೆ ಆದ ವಾಲ್ಮೀಕಿ ಅಭಿವೃದ್ಧಿ ನಿಗಮದ 185 ಕೋಟಿ ಹಣ ವಾಪಸ್ ಆ ನಿಗಮಕ್ಕೆ ಜಮಾ ಆಗಬೇಕು. ಕೊಪ್ಪಳ ಭಾಗದಲ್ಲಿ ಹೊಸಪೇಟೆ ಸಮಾನಾಂತರ ಜಲಾಶಯ ವಿಚಾರ ನೀರಿನಲ್ಲಿ ಹೋಮವಾಗಿದೆ. ಅದನ್ನು ಜಾರಿಗೊಳಿಸಬೇಕು. ನೀಡಿದ್ದ ಭರವಸೆಯಂತೆ 2.5 ಲಕ್ಷ ಯುವಜನರಿಗೆ ಉದ್ಯೋಗ ಕೊಡಿ ಎಂದು ಒತ್ತಾಯಿಸಿದರು. ಕಾಂಗ್ರೆಸ್ ಸರ್ಕಾರವು ಒಂದು ಉದ್ಯೋಗವನ್ನೂ ಸೃಷ್ಟಿಸಿಲ್ಲ. ಎಸ್ ಇಪಿ, ಟಿಎಸ್‌ಪಿ, ಮೀಸಲಾತಿ, ಬರಗಾಲ, ಉತ್ತರ ಕರ್ನಾಟಕದ ಅಭಿವೃದ್ಧಿ ಆಗದೇ ಇರುವುದು- ಇವೆಲ್ಲ ವಿಚಾರಗಳನ್ನು ಮುಂದಿಟ್ಟು ಬಿಜೆಪಿ ಸೆ.1ರಿಂದ ಪಾದಯಾತ್ರೆ ಶುರು ಮಾಡಲಿದೆ ಎಂದು ಪ್ರಕಟಿಸಿದರು.**

**ಈ ದಿನದ ದರ** ಪೆಟ್ರೋಲ್: 112.02₹/L ಡೀಸೆಲ್ : 100.00₹/L ಬಂಗಾರ: ₹ 15,824 /Gram 24ct ₹ 14,505 /Gram 22ct ಬೆಳ್ಳಿ: ₹235.00/

## ಪ್ರಿಯಾಂಕ್ ಖರ್ಗೆ ಪ್ರಬುದ್ಧತೆಯಿಲ್ಲದ ಮಕ್ಕಳಂತೆ ಮಾತನಾಡುತ್ತಿದ್ದಾರೆ': ಹೆಚ್.ಡಿ. ಕುಮಾರಸ್ವಾಮಿ ವಾಗ್ದಾಳಿ

• ಉದಯವಾಹಿನಿ, ಬೆಂಗಳೂರು

ಸಚಿವ ಪ್ರಿಯಾಂಕ್ ಖರ್ಗೆ ಅವರ ಹೇಳಿಕೆ ಮಕ್ಕಳಾಟದ ಮತ್ತು ಪ್ರಬುದ್ಧತೆಯಿಲ್ಲದ ಹೇಳಿಕೆಗಳು ಎಂದು ಟೀಕಿಸಿರುವ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಸೂಚನೆಯ ಮೇರೆಗೆ ಪ್ರಿಯಾಂಕ್ ಖರ್ಗೆಯವರನ್ನು ಗುರಿಯಾಗಿಸಿ ಹೇಳಿಕೆ ನೀಡುತ್ತಿದ್ದೇನೆ ಎಂಬ ಆರೋಪವನ್ನು ತಳ್ಳಿಹಾಕಿದರು. ಕರ್ನಾಟಕ ಲೋಕಸೇವಾ ಆಯೋಗ ಮೂಲಕ ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ಗಳ ನೇಮಕಾತಿಯಲ್ಲಿ ನಡೆದಿವೆ ಎನ್ನಲಾದ ಅಕ್ರಮಗಳಿಗೆ ಸಂಬಂಧಿಸಿದಂತೆ ತಾವು ನಿರ್ದಿಷ್ಟ ಪ್ರಶ್ನೆಗಳನ್ನು ಕೇಳಿದ್ದು, ಅವುಗಳಿಗೆ ಪೂರಕವಾಗಿ ದಾಖಲೆಗಳನ್ನೂ ಒದಗಿಸಿದ್ದೇನೆ ಎಂದು ಕುಮಾರಸ್ವಾಮಿ ಹೇಳಿದರು. ನಾನು ಎತ್ತಿರುವ ಪ್ರಶ್ನೆಗಳಿಗೆ ಪ್ರಿಯಾಂಕ ಖರ್ಗೆ ಉತ್ತರಿಸಿಲ್ಲ. ನಾನು ಪ್ರಸ್ತಾಪಿಸಿದ ಯಾವುದೇ


ಉದಯವಾಹಿನಿ ಚಿತ್ರ

ಅಂಶಕ್ಕೂ ಅವರು ಉತ್ತರ ನೀಡಿಲ್ಲ. ವಾಸ್ತವ ಪರಿಸ್ಥಿತಿಯನ್ನು ಅವರು ತಪ್ಪಿಸಿಕೊಂಡಿದ್ದಾರೆ.

ಅಕ್ರಮವಾಗಿ ಆಯ್ಕೆಯಾದವರನ್ನು ಹೇಗೆ ರಕ್ಷಿಸಲಾಗುತ್ತಿದೆ ಎಂಬುದೇ ನಾನು ಎತ್ತಿರುವ ಪ್ರಮುಖ ಪ್ರಶ್ನೆ ಎಂದು ಕುಮಾರಸ್ವಾಮಿ ಹೇಳಿದರು. ಅಕ್ರಮವಾಗಿ ನೇಮಕಗೊಂಡ ಅಭ್ಯರ್ಥಿಗಳನ್ನು ರಕ್ಷಿಸುವ ಉದ್ದೇಶದಿಂದ ರಾಜ್ಯ ಸರ್ಕಾರ ಉದ್ದೇಶಪೂರ್ವಕವಾಗಿ ನ್ಯಾಯಾಲಯದ ವಿಚಾರಣಾ ಪ್ರಕ್ರಿಯೆಯನ್ನು ವಿಳಂಬಗೊಳಿಸುತ್ತಿದೆ ಎಂದು ಅವರು ಮತ್ತಷ್ಟು ಆರೋಪಿಸಿದರು. ಇಂದೂ ಕೂಡ ನನ್ನ ಬಳಿ ಇನ್ನಷ್ಟು ದಾಖಲೆಗಳಿವೆ.

ಅಕ್ರಮವಾಗಿ ನೇಮಕಗೊಂಡಿರುವ ಸಹಾಯಕ ಕಾರ್ಯಪಾಲಕ ಎಂಜಿನಿಯರ್‌ಗಳ ಹಿತಾಸಕ್ತಿಗಳನ್ನು ರಕ್ಷಿಸಲು ಈ ಸರ್ಕಾರ ನ್ಯಾಯಾಲಯದಲ್ಲಿ ಯಾವುದೇ ಆಕ್ಷೇಪಣೆ ಸಲ್ಲಿಸದೆ ಕಾಲಹರಣ ಮಾಡುತ್ತಿದೆ.

ಪ್ರತಿ ಬಾರಿಯೂ ಸಮಯಾವಕಾಶ ಕೇಳುತ್ತಿದ್ದಾರೆ. ಇದು ನಿರಂತರವಾಗಿ ನಡೆಯುತ್ತಿದೆ.

ಈ ಕಾರಣಕ್ಕಾಗಿಯೇ ಈ ಸರ್ಕಾರ ಅಕ್ರಮ ಚಟುವಟಿಕೆಗಳನ್ನು ರಕ್ಷಿಸಲು ಬಯಸುತ್ತಿದೆ. ಈ ವಿಚಾರದಲ್ಲಿ ನಾನು ಹಲವು ಪ್ರಶ್ನೆಗಳನ್ನು ಎತ್ತಿದ್ದೇನೆ ಎಂದು ಹೇಳಿದರು.

## ಸಿದ್ಧಾರೂಢ ಮಿಷನ್ ಗ್ರಂಥಾಲಯಕ್ಕೆ ಅಭಿನಂದನೆ

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ದಕ್ಷಿಣ ತಾಲ್ಲೂಕಿನ ರಾಮೋಹಳ್ಳಿಯ ಶ್ರೀ ಸಿದ್ಧಾರೂಢ ಮಿಷನ್ ಆಶ್ರಮದಲ್ಲಿ ಡಾ. ಆರೂಢಭಾರತೀ ಸ್ವಾಮೀಜಿ ರೂಪಿಸಿರುವ ಗ್ರಂಥಾಲಯಕ್ಕೆ ಕರ್ನಾಟಕ ಸರ್ಕಾರದ ಕನ್ನಡ ಪುಸ್ತಕ ಪ್ರಾಧಿಕಾರ ಮನೆಗೊಂದು ಗ್ರಂಥಾಲಯ ಯೋಜನೆಯಡಿ ಅಭಿನಂದನೆ ಸಲ್ಲಿಸಿದೆ.

ಪ್ರಾಧಿಕಾರದ ಅಧ್ಯಕ್ಷ ಡಾ. ಮಾನಸ ಆಶ್ರಮಕ್ಕೆ ಆಗಮಿಸಿ ಡಾ. ಆರೂಢಭಾರತೀ ಸ್ವಾಮೀಜಿಯವರಿಗೆ ಅಭಿನಂದನಾ ಪತ್ರ ನೀಡಿ ಸನ್ಮಾನಿಸಿದರು. ಲಕ್ಷಕ್ಕೂ ಅಧಿಕ ಗ್ರಂಥಗಳಿರುವ ಈ ಗ್ರಂಥಾಲಯವನ್ನು ಶ್ಲಾಘಿಸಿ, ಜನ ಪುಸ್ತಕಪ್ರಿಯರಾಗಬೇಕು, ಮನೆ ಮನೆಗೊಂದು ಗ್ರಂಥಾಲಯವಿರಬೇಕು, ಜನ ಓದುಗರಾಗಿ ಇಂಥ ಗ್ರಂಥಾಲಯಗಳ ಸದುಪಯೋಗ ಪಡೆಯಬೇಕು ಎಂದು ಕರೆ ನೀಡಿದರು. ಸನ್ಮಾನ ಸ್ವೀಕರಿಸಿ ಮಾತನಾಡಿದ ಸ್ವಾಮೀಜಿ, ಅಸಂಖ್ಯ ಕಾರ್ಯಕ್ರಮಗಳಿಗೆ


ಉದಯವಾಹಿನಿ ಚಿತ್ರ

ಹೋಗಿ ಸಾವಿರಾರು ಜನರಿಗೆ ಸನ್ಮಾನಿಸಿದ್ದು ಸನ್ಮಾನಿಸಿಕೊಂಡಿದ್ದು ಉಂಟು. ಆದರೆ ಇಂದು ಸರ್ಕಾರದ ಪ್ರಾಧಿಕಾರವೇ ಬಾಗಿಲಿಗೆ ಬಂದು ಸನ್ಮಾನಿಸಿದಾಗ ಭಾವುಕನಾದೆ ಎಂದರು. ಧಾರವಾಡದ ಶ್ರೀ ವೀರೇಶ್ವರ ಸ್ವಾಮೀಜಿ ಪ್ರಾಧಿಕಾರದ ಸದಸ್ಯ ಡಾ. ಶಂಕರ ಬೈಚಬಾಳ ಶ್ರೀಮತಿ ಸುಜ್ಞಾನೀ ಪಾಟೇಲ್ ಸಾಹಿತಿ ಸಿದ್ಧರಾಮ ಬಿರಾದಾರ ಸಂಗೀತ ವಿದ್ವಾನ್ ಬಾಬು ಹನುಮಂತ ಬುಸಾರಿ ಕೆ. ಜಿ. ನರಸಿಂಹಮೂರ್ತಿ ಲೀಲಾವತಿ ಅನಿತಾ ಕೃಷ್ಣಮೂರ್ತಿ ಮುಂತಾದವರಿದ್ದರು.

## ಹಿಂದೂ ಕಾರ್ಯಕರ್ತನ ಬಂಧನ ಸಂಬಂಧ ACP, DCP ವಿರುದ್ಧ ಜಡ್ಜ್

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನ ವೈಟ್‌ಫೀಲ್ಡ್‌ನಲ್ಲಿ ಆಯೋಜನೆಗೊಂಡಿದ್ದ ಸ್ಟ್ಯಾಂಡ್‌ಅಪ್ ಕಾಮಿಡಿಯನ್ ಕುನಾಲ್ ಕಾಮ್ರಾ ಶೋ ರದ್ದು ಮಾಡುವಂತೆ ಹಿಂದೂ ಕಾರ್ಯಕರ್ತ ಮೋಹನ್ ಗೌಡ ಎಂಬುವರು ಪೊಲೀಸ್ ಠಾಣೆಗೆ ಮನವಿ ಮಾಡಿದ್ದರು. ನಂತರ ಕುನಾಲ್ ಕಾಮ್ರಾ ಶೋ ರದ್ದು ಮಾಡಲಾಗಿತ್ತು. ಮೋಹನ್ ಗೌಡ ಟ್ವೀಟ್ ಮಾಡಿ ಖುಷಿ ಹಂಚಿಕೊಂಡಿದ್ದರು. ಟ್ವೀಟ್ ಆಧರಿಸಿ ಸಾರ್ವಜನಿಕರಿಗೆ ತಪ್ಪು ಮಾಹಿತಿ ನೀಡಿದ ಆರೋಪದಲ್ಲಿ ಎಫ್‌ಐಆರ್ ದಾಖಲಿಸಿದ್ದ


ಉದಯವಾಹಿನಿ ಚಿತ್ರ

ಪೊಲೀಸರು ಮೋಹನ್ ಗೌಡರನ್ನು ಬಂಧಿಸಿ ನಂತರ ವಿಚಾರಣೆಗೆ ಹಾಜರಾಗುವಂತೆ ನೋಟಿಸ್ ನೀಡಿದ್ದಕ್ಕೆ ಹೈಕೋರ್ಟ್ ನ್ಯಾಯಮೂರ್ತಿ ನಾಗಪ್ರಸನ್ನ ಅವರಿದ್ದ ಪೀಠ ವೈಟ್‌ಫೀಲ್ಡ್ ಪೊಲೀಸರ ವಿರುದ್ಧ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ವೈಟ್‌ಫೀಲ್ಡ್ ಪೊಲೀಸರು ತಡರಾತ್ರಿ 2 ಗಂಟೆಗೆ ಎಫ್‌ಐಆರ್ ದಾಖಲಿಸಿ, ಅದೇ ದಿನ ಬೆಳಗ್ಗೆ ಉಡುಪಿಯಲ್ಲಿ ಮೋಹನ್ ಗೌಡರನ್ನು ವಶಕ್ಕೆ ಪಡೆದಿದ್ದು ನಂತರ ಬೆಂಗಳೂರಿಗೆ ಕರೆತಂದು ವಿಚಾರಣೆಗೆ ಹಾಜರಾಗುವಂತೆ ನೋಟಿಸ್ ನೀಡಿದ್ದಾರೆ. ಈ ಪ್ರಕರಣ ರದ್ದು ಕೋರಿ ಮೋಹನ್ ಗೌಡ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ವಿಚಾರಣೆ ನಡೆಸಿದ ಹೈಕೋರ್ಟ್ ನ್ಯಾಯಾಧೀಶರಾದ ನಾಗಪ್ರಸನ್ನ ಅವರಿದ್ದ ಪೀಠ, ವೈಟ್‌ಫೀಲ್ಡ್ ಪೊಲೀಸರು ಪದೇಪದೇ ಕಾನೂನು ಉಲ್ಲಂಘಿಸುತ್ತಿದ್ದಾರೆ. ವೈಟ್‌ಫೀಲ್ಡ್ ಠಾಣೆ ಬದಲು ಡಾರ್ಕ್ ಫೀಲ್ಡ್ ಠಾಣೆ ಎಂದು ಬದಲಾಯಿಸಬೇಕು ಎಂದು ನ್ಯಾಯಧೀಶರು ಕಿಡಿಕಾರಿದರು. ವಿಚಾರಣೆ ವೇಳೆ ಡಿಸಿಪಿ ಖುದ್ದು ಹಾಜರಾಗಿದ್ದರು. ಖಾಕಿ ಸಮವಸ್ತ್ರ ಧರಿಸಿದ ತಕ್ಷಣವೇ ಸಂವಿಧಾನಕ್ಕಿಂತ ಮೀರಿದ ಅಧಿಕಾರ ಅಥವಾ ರಕ್ಷಣೆ ಸಿಗುವುದಿಲ್ಲ. ನಾವು ಪ್ರಜಾಪ್ರಭುತ್ವ ಮತ್ತು ಕಾನೂನಿನ ಆಡಳಿತ ವ್ಯವಸ್ಥೆಯಲ್ಲಿದ್ದೇವೆ. ಇದು ಯಾವುದೋ ವ್ಯಕ್ತಿಗಳ ಆಡಳಿತವಲ್ಲ, ಬಂಧಿಸುವ ಅಧಿಕಾರವು ದಬ್ಬಾಳಿಕೆಯ ಅಸ್ತ್ರವಾಗಬಾರದು ಎಂದು ಪೀಠ ಹೇಳಿದೆ.

# ಐಎಎಸ್ ಅಧಿಕಾರಿಯನ್ನು ದೇವನಹಳ್ಳಿಗೆ ಕರೆತಂದು ರೆಸಾರ್ಟ್‌ನಲ್ಲಿ 3 ದಿನ ಕೂರಿಸಿದ್ದರು

## ಜೆಡಿಎಸ್ ಕಚೇರಿಯಲ್ಲಿ ಭಾನುವಾರ ಮಾಧ್ಯಮಗೋಷ್ಠಿ ನಡೆಸಿದ ಅವರು, ಐಎಎಸ್ ಅಧಿಕಾರಿಯನ್ನು ದಿಲ್ಲಿಗೆ ಕಳಿಸಿದ್ದು ಯಾರು?

• ಉದಯವಾಹಿನಿ, ಬೆಂಗಳೂರು

1 ರೆಸಾರ್ಟ್‌ನಲ್ಲಿ ಪರೀಕ್ಷೆಗೆ ತರಬೇತಿ
2 ತನಿಖೆ ಆರಂಭ ಮಾಡಿದ ಬಳಿಕ
3 ಕೆಪಿಎಸ್‌ಸಿ ಅಧ್ಯಕ್ಷರನ್ನಾಗಿ ಮಾಡಿದ್ದೆ

ಕೆಪಿಎಸ್ ಸಿ ಅಕ್ರಮಕ್ಕೆ ಸಂಬಂಧಿಸಿದಂತೆ ವಶಕ್ಕೆ ಪಡೆದುಕೊಂಡಿರುವ ಐಎಎಸ್ ಅಧಿಕಾರಿ ಜ್ಞಾನೇಂದ್ರ ಕುಮಾರ್ ಅವರನ್ನು ಅದ್ಯಾವುದೋ ರಾಜ್ಯದಿಂದ ದೇವನಹಳ್ಳಿಗೆ ಕರೆಸಿ, ಮೂರು ದಿನ ಕೂರಿಸಿದ್ದರು ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಆರೋಪಿಸಿದ್ದಾರೆ.

ಜೆಡಿಎಸ್ ಕಚೇರಿಯಲ್ಲಿ ಭಾನುವಾರ ಮಾಧ್ಯಮಗೋಷ್ಠಿ ನಡೆಸಿದ ಅವರು, ಐಎಎಸ್ ಅಧಿಕಾರಿಯನ್ನು ದಿಲ್ಲಿಗೆ ಕಳಿಸಿದ್ದು ಯಾರು?. ಅವರಿಗೆ ಅನುಮತಿ ನೀಡಿದ್ದು ಯಾರು?. ಅವರನ್ನು ದಿಲ್ಲಿಗೆ ಕಳುಹಿಸಿ ಅಲ್ಲಿ ಏನೋ ಅನಾಹುತ ಆಯ್ತು ಅಂತ ಬಳಿಕ ಸ್ನೇಹಿತರು ಜ್ಞಾನೇಂದ್ರ ಕುಮಾರ್? ಅವರನ್ನು ಇನ್ಯಾವುದೋ ರಾಜ್ಯಕ್ಕೆ ಕರೆದುಕೊಂಡು ಹೋದರು. ಇಲ್ಲಿ ಇಡಿಯವರು ರೇಡ್ ಮಾಡಿ ತನಿಖೆ ಆರಂಭಿಸಿದ ಬಳಿಕ ಅಧಿಕಾರಿಯನ್ನು ಆ ರಾಜ್ಯದಿಂದ ದೇವನಹಳ್ಳಿಗೆ ಕರೆಸಿ ರೆಸಾರ್ಟ್‌ನಲ್ಲಿ ಮೂರು ದಿನ ಇರಿಸಿದ್ದೀರಲ್ಲ. ಅವರನ್ನು ರೆಸಾರ್ಟ್‌ನಲ್ಲಿ ಯಾರು ಇರಿಸಿದ್ದು. ಇದರ ಬಗ್ಗೆ ಮಾಹಿತಿ ಇಲ್ಲವಾ ನಿಮಗೆ ಎಂದು ಗೃಹ ಸಚಿವ ಪ್ರಿಯಾಂಕ್? ಖರ್ಗೆಗೆ ಪ್ರಶ್ನಿಸಿದರು.

ರೆಸಾರ್ಟ್‌ನಲ್ಲಿ ಪರೀಕ್ಷೆಗೆ ತರಬೇತಿ. ರೆಸಾರ್ಟ್‌ನಲ್ಲಿ ಕೂರಿಸಿ ಪರೀಕ್ಷೆ ಬರೆಸುವುದು. ಕೆಪಿಎಸ್‌ಸಿ ಕಾರ್ಯದರ್ಶಿ ಜ್ಞಾನೇಂದ್ರ ಕುಮಾರ್ ಏತಕ್ಕಾಗಿ ದಿಲ್ಲಿಗೆ ಹೋಗಿದ್ದು?. ನಾನೇ ಅವರಿಗೆ ದಿಲ್ಲಿಗೆ ಹೋಗಲು ಅನುಮತಿ ಕೊಟ್ಟಿದ್ದೆ, ಅವರ ತಂದೆಗೆ ಹುಷಾರಿಲ್ಲ ಅಂತ ಹೇಳಿದ್ದೀರಿ. ಇಡಿ ಅವರು ತನಿಖೆ ಆರಂಭ ಮಾಡಿದ ಬಳಿಕ ಸರ್ಕಾರ ಎಚ್ಚೆತ್ತುಕೊಳ್ಳುತ್ತದೆ. ಅಲ್ಲಿವರೆಗೆ ನೀವು ಎಲ್ಲಿದ್ದೀರಪ್ಪ?. ಇದರ ಬಗ್ಗೆ ಚರ್ಚೆ ಮಾಡಿದ್ದೀರಾ ಎಂದು ಖಾರವಾಗಿ ಪ್ರಶ್ನಿಸಿದರು. 1998ರಲ್ಲಿ


ಉದಯವಾಹಿನಿ ಚಿತ್ರ

ಕುಮಾರಸ್ವಾಮಿ ಅವರು ಯಾರಿಗೋ ಸಹಾಯ ಮಾಡಿದ್ದಾರೆ ಅಂತ ಪ್ರಿಯಾಂಕ್ ಖರ್ಗೆ ಆರೋಪಿಸಿದ್ದಾರೆ. ಪ್ರಶ್ನೆ ಪತ್ರಿಕೆಯನ್ನು ಅವರ ಕೈಗೆ ಕೊಟ್ಟು, ಉತ್ತರ ಪತ್ರಿಕೆ ನೀವು ಬರೆಸಿಕೊಟ್ಟು ಪಾಸ್ ಮಾಡಿ ಅಂತ ಯಾರಿಗೂ ನಾನು ಹೇಳಿಲ್ಲ. ಈಗ ಅವರು ನಿಮ್ಮ ಪಕ್ಷದಲ್ಲೇ ಇದ್ದಾರೆ. ಅವರ ಬಳಿ ಕೇಳಿ ಯಾವ ರೀತಿಯ ಸಹಾಯ ಮಾಡಿದ್ದೇನೆ ಅಂತ. 1998 ರಲ್ಲಿ ಪಂಚಕಟ್ಟಿ ಎಂಬುವರು ಕೆಪಿಎಸ್‌ಸಿ ಅಧ್ಯಕ್ಷರಾಗಿದ್ದರು. ಜೆ.ಹೆಚ್. ಪಟೇಲರ ಕಾಲದಲ್ಲಿ ಅವರನ್ನು ಕೆಪಿಎಸ್‌ಸಿ ಅಧ್ಯಕ್ಷರನ್ನಾಗಿ ಮಾಡಲಾಗಿತ್ತು. ಕಾನೂನು ಬಾಹಿರವಾಗಿ ಮಾಡುವಂತೆ ನಾನು ಯಾವುದನ್ನು ಹೇಳಿಲ್ಲ. 2006 ಮತ್ತು 2007ರಲ್ಲಿ ನನ್ನ ಕಾಲದಲ್ಲಿ ನಾನು ಕೆಪಿಎಸ್‌ಸಿಯಲ್ಲಿ ಒಬ್ಬರನ್ನು ಅಧ್ಯಕ್ಷರನ್ನಾಗಿ ಮಾಡಿದ್ದೆ. ರೆಸಾರ್ಟ್‌ಗಳಲ್ಲಿ ಪ್ರಶ್ನೆ ಪತ್ರಿಕೆಗಳನ್ನು ತೆಗೆದುಕೊಂಡು ಹೋಗಿ ಅಲ್ಲಿ ಯಾವ ಯಾವ ರೀತಿ ನಡೆದುಕೊಂಡಿದ್ದೀರಿ, ಯಾವ ನೈತಿಕತೆಯನ್ನು ಇಟ್ಟುಕೊಂಡಿದ್ದೀರಿ ಎಂದು ವಾಗ್ದಾಳಿ ನಡೆಸಿದರು.

**ನೇಮಕಾತಿ ಪತ್ರ ವಿತರಿಸದಂತೆ ಹೇಳಿದ್ದರೂ ವಿತರಣೆ ಮಾಡಿದ್ದೀರಿ:** ಮೊನ್ನೆ ಅಧಿವೇಶನದಲ್ಲಿ ಕಪಿಎಸ್‌ಸಿ ನೇಮಕಾತಿ ಅಕ್ರಮಗಳ ಸಂಬಂಧ ಕೇಳಲಾದ ಚುಕ್ಕೆ ಗುರುತ್ತಿಲ್ಲದ ಪ್ರಶ್ನೆಗೆ ಉತ್ತರಿಸಿದ ಸಿಎಂ ಇದೇ ಆರ್ ಡಿಪಿಆರ್ ಸಹಾಯಕ ಕಾರ್ಯಕಾರಿ ಎಂಜಿನಿಯರ್ ನೇಮಕಾತಿ ಬಗ್ಗೆ ಉಲ್ಲೇಖಿಸಿದ್ದಾರೆ. ಮೊದಲಿದ್ದ ಕೆಪಿಎಸ್‌ಸಿ ಕಾರ್ಯದರ್ಶಿಯನ್ನು ಅಮಾನತು ಮಾಡಲಾಗಿದೆ ಎಂದು ಕೋರ್ಟ್‌ಗೆ ಹೇಳಿಕೊಂಡಿದ್ದಾರೆ. ಬಳಿಕ ಬಂದ ಹೊಸ ಕಾರ್ಯದರ್ಶಿ, ನೇಮಕಾತಿ ಆದೇಶವನ್ನು ವಿತರಣೆ ಮಾಡದಂತೆ ಆರ್‌ಡಿಪಿಆರ್ ಪ್ರಧಾನ ಕಾರ್ಯದರ್ಶಿಗೆ ಪತ್ರವನ್ನು ಬರೆಯುತ್ತಾರೆ ಎಂದರು.

ಒಎಂಆರ್ ಶೀಟ್ ತಿದ್ದಲಾಗಿದೆ, ಸಿಸಿಟಿವಿ ಫೂಟೇಜುಗಳೇ ಇಲ್ಲ ಎಂದು ಹೇಳಿದ ಬಳಿಕನೂ ಹೈಕೋರ್ಟ್ ವಿಚಾರಣೆಯಲ್ಲಿ ಪ್ರತಿ ಬಾರಿಯೂ ನಮಗೆ ಟೈಮ್ ಕೊಡಿ, ಟೈಮ್ ಕೊಡಿ ಅಂತ ಕೇಳಿಕೊಳ್ಳುತ್ತಿದ್ದರು.

ಪ್ರಿಯಾಂಕ್ ಖರ್ಗೆ ಅವರೇ ನಿಮ್ಮ ವಕೀಲರು ಏನು ಐಸಿಯು ಅಲ್ಲಿ ಇದ್ದಾರಾ ಎಂದು ಕಿಡಿಕಾರಿದರು.

**ಪೊಲೀಸ್ ಅಧಿಕಾರಿಯೊಬ್ಬರ ಎರಡು ಹೆಣ್ಣುಮಕ್ಕಳಿಗೆ ರೆಸಾರ್ಟ್‌ನಲ್ಲಿ ಕೂರಿಸಿ ಕೆಎಎಸ್ ಪರೀಕ್ಷೆ ಬರೆಸಿದ್ದೀರಲ್ಲ. ನಿಮ್ಮಲ್ಲಿ ಮಾಹಿತಿ ಇಲ್ಲವೇ?. ನೀವು ಪ್ರೇರಣೆ ಕೊಡುತ್ತಿರುವುದರಿಂದ ಇದೆಲ್ಲ ಆಗುತ್ತಿದೆ. ಸರ್ಕಾರವೇ ನಮ್ಮ ಜೊತೆ ಇದೆ ಅಂತ ಇದನ್ನೆಲ್ಲ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.**
**-ಹೆಚ್.ಡಿ. ಕುಮಾರಸ್ವಾಮಿ**

**ತನಿಖೆ ಮಾಡಿ**

**ಪ್ರತಿದಿನ ಬಿಜೆಪಿ, ಜೆಡಿಎಸ್, ಆರ್ ಎಸ್ ಎಸ್, ಭಾರತ್ ಜೋಡೋ ಹೇಳಿದ್ದೇ ಹೇಳಿದ್ದು. ಮೊದಲಿಗೆ ಇದಕ್ಕೆ ಉತ್ತರ ಕೊಡಿ. ಕುಮಾರಸ್ವಾಮಿಯನ್ನು ಆಮೇಲೆ ಪ್ರಶ್ನೆ ಮಾಡಿ. ಫೋನ್ ಕದ್ದಾಲಿಕೆ ಬಗ್ಗೆ ತನಿಖೆ ಮಾಡಿ ಬೇಕಾದರೆ. ನಿಮ್ಮದೇ ಸರ್ಕಾರ ಇದೆ. ಅದ್ಯಾವುದೋ ವೆಸ್ಟೆಂಡ್ ಹೋಟೆಲ್‌ನಲ್ಲಿ ತಂಗುತ್ತಿದ್ದಾರೆ ಅಂತ ನನಗೆ ಹೇಳುತ್ತಿದ್ದೀರಲ್ಲ, ಇವತ್ತೂ ಅಲ್ಲೇ ಇದ್ದೇನೆ.**

**ನಾನೇನು ಮಾಡಬಾರದ್ದನ್ನು ಮಾಡಿಲ್ಲ**

**ನಿಮ್ಮ ದಿಲ್ಲಿ ನಾಯಕರನ್ನು ಕರೆಸಿ, ಸೂಟ್ ಕೇಸ್ ತೆಗೆದುಕೊಂಡು ಹೋಗಲು ಬರುತ್ತಾರಲ್ಲ ಎಲ್ಲಿಗೆ ಬರುತ್ತಾರೆ?. ಎಲ್ಲಿ ಅವರಿಗೆ ರೂಮ್ ಮಾಡಿ ಸಭೆ ಮಾಡುತ್ತೀರಲ್ಲಾ ಅದೇ ವೆಸ್ಟೆಂಡ್ ನಲ್ಲಿ ತಾನೇ?. ನಾನೇನು ಮಾಡಬಾರದ್ದನ್ನು ಮಾಡಿಲ್ಲ. ವೆಸ್ಟೆಂಡ್ ಹೋಟೆಲ್‌ನವರು 24 ತಾಸು ನನ್ನ ಜೊತೆ ಇದ್ದು, ಆರೋಗ್ಯವನ್ನು ನೋಡುತ್ತಾರೆ. ನಾನೇನಾದರೂ ಇಂದು ಬದುಕಿದ್ದರೆ ಅವರಿಂದಲೇ ಎಂದರು.**

## ಮಳೆ ಕೊರತೆ ನೀಗಿಸಲು ರಾಜ್ಯ ಸರ್ಕಾರದ ಮಾಸ್ಟರ್ ಪ್ಲ್ಯಾನ್

• ಉದಯವಾಹಿನಿ, ಬೆಂಗಳೂರು

ರಾಜ್ಯದ ಬಹುತೇಕ ಭಾಗಗಳಲ್ಲಿ ಪ್ರಸಕ್ತ ವರ್ಷ ಮುಂಗಾರು ಮಳೆ ಕೊರತೆಯಾಗಿರುವ ಹಿನ್ನೆಲೆಯಲ್ಲಿ, ಮಳೆ ಕೊರತೆ ಹಾಗೂ ಬರದಂತಹ ಪರಿಸ್ಥಿತಿಯನ್ನು ಎದುರಿಸಲು ಕರ್ನಾಟಕ ಸರ್ಕಾರ ಕ್ಲೌಡ್ ಸೀಡಿಂಗ್ (ಮೋಡ ಬಿತ್ತನೆ) ಯೋಜನೆಗೆ ವೇಗ ನೀಡಿದೆ.


ಹೌದು.. ಮೋಡ ಬಿತ್ತನೆ ಅಥವಾ ಕ್ಲೌಡ್ ಸೀಡಿಂಗ್ ಯೋಜನೆಯ ಸುಗಮ ಅನುಷ್ಠಾನ, ಮೇಲ್ವಿಚಾರಣೆ ಹಾಗೂ ತಾಂತ್ರಿಕ ಮಾರ್ಗದರ್ಶನಕ್ಕಾಗಿ ಸರ್ಕಾರ ಎರಡು ಪ್ರತ್ಯೇಕ ಸಮಿತಿಗಳನ್ನು ರಚಿಸಿದೆ. 2026-27ನೇ ಸಾಲಿನಲ್ಲಿ ಮಳೆ ಕೊರತೆಯಿಂದಾಗಿ ಎದುರಾಗಿರುವ ಪರಿಸ್ಥಿತಿಯನ್ನು ನಿಭಾಯಿಸುವುದು ಯೋಜನೆಯ ಪ್ರಮುಖ ಉದ್ದೇಶವಾಗಿದೆ.

ಅತ್ಯಾಧುನಿಕ ತಂತ್ರಜ್ಞಾನವನ್ನು ಸೂಕ್ತ ರೀತಿಯಲ್ಲಿ ಬಳಸಿಕೊಂಡು ರಾಜ್ಯದ ನಿಂತಿರುವ ಬೆಳೆಗಳಿಗೆ ಗರಿಷ್ಠ ಪ್ರಯೋಜನ ಒದಗಿಸುವ ಉದ್ದೇಶದಿಂದ ಕ್ಲೌಡ್ ಸೀಡಿಂಗ್ ಕಾರ್ಯಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಆಗಸ್ಟ್ 28ರಂದು ಸರ್ಕಾರ ಈ ಕುರಿತು ಆದೇಶ ಹೊರಡಿಸಿದ್ದು, ಮೇಲ್ವಿಚಾರಣಾ ಸಮಿತಿ ಹಾಗೂ ತಾಂತ್ರಿಕ ಸಲಹಾ ಮತ್ತು ಮೌಲ್ಯಮಾಪನ ಸಮಿತಿ ರಚಿಸಲಾಗಿದೆ. ಈ ಎರಡೂ ಸಮಿತಿಗಳು ಕ್ಲೌಡ್ ಸೀಡಿಂಗ್ ಕಾರ್ಯಾಚರಣೆಗಳನ್ನು ವೈಜ್ಞಾನಿಕವಾಗಿ ಹಾಗೂ ಪರಿಣಾಮಕಾರಿಯಾಗಿ ನಡೆಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಲಿವೆ. ವಿಶೇಷವಾಗಿ ಮಳೆ ಕೊರತೆ ಎದುರಿಸುತ್ತಿರುವ ಪ್ರದೇಶಗಳಲ್ಲಿ ಯೋಜನೆಯ ಪರಿಣಾಮಕಾರಿ ಅನುಷ್ಠಾನಕ್ಕೆ ಒತ್ತು ನೀಡಲಾಗುತ್ತದೆ.

ಜಲಸಂಪನ್ಮೂಲ ಸಚಿವ ಎನ್. ಚಲುವರಾಯಸ್ವಾಮಿ ಅವರ ಕಚೇರಿ ಬಿಡುಗಡೆ ಮಾಡಿರುವ ಪ್ರಕಟಣೆಯ ಪ್ರಕಾರ, ಮೇಲ್ವಿಚಾರಣಾ ಸಮಿತಿಯು ಕ್ಲೌಡ್ ಸೀಡಿಂಗ್ ಯೋಜನೆಯ ಒಟ್ಟಾರೆ ಅನುಷ್ಠಾನವನ್ನು ಮೇಲ್ವಿಚಾರಣೆ, ಪರಿಶೀಲನೆ ಹಾಗೂ ವಿಮರ್ಶೆ ಮಾಡಲಿದೆ.


ಉದಯವಾಹಿನಿ ಚಿತ್ರ

## ಕಸಾಪ ರಾಜ್ಯಾಧ್ಯಕ್ಷ ಸ್ಥಾನದ ಅಭ್ಯರ್ಥಿ ಡಾ. ಸಿ.ಸೋಮಶೇಖರ್, ನಗರಾಧ್ಯಕ್ಷ ಸ್ಥಾನದ ಅಭ್ಯರ್ಥಿ ಎಂ.ತಿಮ್ಮಯ್ಯರವರಿಗೆ ಪಾಲಿಕೆ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘ ಬೆಂಬಲ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಟೌನ್ ಹಾಲ್ ಕನ್ನಡ ಸಾಹಿತ್ಯ ಪರಿಷತ್ ರಾಜ್ಯಾಧ್ಯಕ್ಷ ಸ್ಥಾನದ ಅಭ್ಯರ್ಥಿ ಡಾ.ಸಿ.ಸೋಮಶೇಖರ್ ರವರು(ನಿವೃತ್ತ ಐಎಎಸ್ ಅಧಿಕಾರಿ) ನಗರ ಜಿಲ್ಲಾ ಅಧ್ಯಕ್ಷ ಸ್ಥಾನದ ಅಭ್ಯರ್ಥಿ ಎಂ.ತಿಮ್ಮಯ್ಯರವರಿಗೆ ಬೆಂಬಲಿಸಿ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘ ಅಧ್ಯಕ್ಷರಾದ ಎ.ಅಮೃತ್ ರಾಜ್‌ರವರು, ಪದಾಧಿಕಾರಿಗಳು, ಸದಸ್ಯರು ಬೆಂಬಲಿಸಿ, ಹೂಗುಚ್ಛ ನೀಡಿ ಶುಭಕೋರಿದರು. ಕನ್ನಡ ಪರ ಹೋರಾಟಗಾರ ಪಾಲನೇತ್ರ, ಸಿ.ಕೆ. ರಾಮೇಗೌಡ, ತಿಮ್ಮೇಶ್ ರವರು ಉಪಸ್ಥಿತರಿದ್ದರು.

ಎ.ಅಮೃತ್ ರಾಜ್ ರವರು ಮಾತನಾಡಿ ಕನ್ನಡ ಸಾಹಿತ್ಯ ಪರಿಷತ್ತು ಶತಮಾನಗಳ ಇತಿಹಾಸವಿರುವ ನಾಡು, ನುಡಿ ರಕ್ಷಣೆಗಾಗಿ ಸೇವೆ ಸಲ್ಲಿಸುತ್ತಿರುವ ಸಂಸ್ಥೆ. ಈ ಸಂಸ್ಥೆ ಕನ್ನಡ ಪರ ಅಭಿಮಾನವಿರುವ , ಕನ್ನಡ ಭಾಷೆ ಉಳಿಸಿ ಬೆಳಸುವವರನ್ನ ಅಧ್ಯಕ್ಷರಾದರೆ ಉತ್ತಮ ಅದ್ದರಿಂದ ನಮ್ಮ ಪಾಲಿಕೆ ನೌಕರರ ಸಂಘ ಮತ್ತು ಪಾಲಿಕೆ ನೌಕರರ ಸಹಕಾರ ಮತ್ತು ಕನ್ನಡ ಸಂಘವು ರಾಜ್ಯಾಧ್ಯಕ್ಷ ಸ್ಥಾನದ ಅಭ್ಯರ್ಥಿ ಡಾ.ಸಿ.ಸೋಮಶೇಖರ್ ಮತ್ತು ಬೆಂಗಳೂರು ನಗರ ಅಧ್ಯಕ್ಷ ಸ್ಥಾನದ ಅಭ್ಯರ್ಥಿ ಎಂ.ತಿಮ್ಮಯ್ಯ ಅವರಿಗೆ ಸಂಪೂರ್ಣ ಬೆಂಬಲ ನೀಡುತ್ತಿದ್ದೇವೆ. ಡಾ.ಸಿ.ಸೋಮಶೇಖರ್ ಐಎಎಸ್ ರವರು ರಾಜ್ಯ ಸರ್ಕಾರದಲ್ಲಿ ಉತ್ತಮ ಸೇವೆ ಸಲ್ಲಿಸಿ ನಾಡಿನ ಜನರ ಮನಗೆದ್ದಿದ್ದಾರೆ ಹಾಗೂ ಕಲೆ, ಸಾಹಿತ್ಯ, ಸಾಂಸ್ಕೃತಿಕ ಕ್ಷೇತ್ರದಲ್ಲಿ ತೊಡಗಿಸಿಕೊಂಡಿದ್ದಾರೆ ಮತ್ತು ಎಂ.ತಿಮ್ಮಯ್ಯರವರು ಕನ್ನಡ ಪರ ಹೋರಾಟಗಾರರು ಮತ್ತು ಸಾಹಿತಿಗಳು ಎರಡು ಉತ್ತಮ ವ್ಯಕ್ತಿಗಳು ಸಾಹಿತ್ಯ ಪರಿಷತ್ ಆಯ್ಕೆಯಾಗಬೇಕು ಎಂಬುದು ಎಲ್ಲರ ಅಭಿಪ್ರಾಯವಾಗಿದೆ. ಕನ್ನಡ ಸಾಹಿತ್ಯ ಪರಿಷತ್ತು ಸಂಸ್ಥೆಯಲ್ಲಿ ಪಾಲಿಕೆಯ 3 ಸಾವಿರಕ್ಕೂ ಹೆಚ್ಚು ಸದಸ್ಯರನ್ನ ಹೊಂದಿದೆ. ಮುಂಬರುವ ಚುನಾವಣೆಯಲ್ಲಿ ಡಾ.ಸಿ.ಸೋಮಶೇಖರ್ ಮತ್ತು ಎಂ.ತಿಮ್ಮಯ್ಯ ರವರ ಗೆಲುವಿಗೆ ನಮ್ಮ ಸಂಘವು ಶ್ರಮಿಸಲಿದೆ.

## ಲಾಲ್‌ಬಾಗ್ ನಮ್ಮ ಉಸಿರು! 5% ಜಾಗ ನೀಡುವ ಸರ್ಕಾರದ ನಿರ್ಧಾರದ ವಿರುದ್ಧ ಭುಗಿಲೆದ್ದ ಪ್ರತಿಭಟನೆ

• ಉದಯವಾಹಿನಿ, ಬೆಂಗಳೂರು

ನಗರದ ಪ್ರತಿಷ್ಠಿತ ಹಸಿರು ತಾಣವಾದ ಲಾಲ್‌ಬಾಗ್‌ನ ಶೇ.5ರಷ್ಟು ಜಾಗವನ್ನು ಮೂಲಸೌಕರ್ಯ ಯೋಜನೆಗಳಿಗೆ ಮೀಸಲಿಡುವ ಸರ್ಕಾರದ ನಿರ್ಧಾರಕ್ಕೆ ತೀವ್ರ ವಿರೋಧ ವ್ಯಕ್ತವಾಗಿದೆ. ಸರ್ಕಾರದ ನಿರ್ಧಾರವನ್ನು ಖಂಡಿಸಿ ಭಾನುವಾರ ಲಾಲ್‌ಬಾಗ್‌ನಲ್ಲಿ ಭಾರೀ ಸಂಖ್ಯೆಯಲ್ಲಿ ನಾಗರಿಕರು, ಪರಿಸರ ಹೋರಾಟಗಾರರು ಹಾಗೂ ವಿವಿಧ ನಾಗರಿಕ ಸಂಘಟನೆಗಳ ಸದಸ್ಯರು ಪ್ರತಿಭಟನೆ ನಡೆಸಿದರು.

ಪ್ರತಿಭಟನೆಯಲ್ಲಿ ಬಿಜೆಪಿ ಸಂಸದರಾದ ತೇಜಸ್ವಿ ಸೂರ್ಯ, ಡಾ.ಮಂಜುನಾಥ್ ಮತ್ತು ಶೋಭಾ ಕರಂದ್ಲಾಜೆ ಸೇರಿದಂತೆ ಹಲವರು ಪಾಲ್ಗೊಂಡಿದ್ದರು. ಲಾಲ್‌ಬಾಗ್‌ನ ಹಸಿರು ಪ್ರದೇಶವನ್ನು ಯಾವುದೇ ಕಾರಣಕ್ಕೂ ಮೂಲಸೌಕರ್ಯ ಕಾಮಗಾರಿಗಳಿಗೆ ಬಳಸಬಾರದು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

ನಗರದ ಪ್ರಮುಖ ಹಸಿರು ತಾಣವಾಗಿರುವ ಲಾಲ್‌ಬಾಗ್ ಕೇವಲ ಉದ್ಯಾನವಲ್ಲ, ಬೆಂಗಳೂರಿನ ಪರಿಸರ ಸಮತೋಲನ ಕಾಪಾಡುವ ಪ್ರಮುಖ ಪ್ರದೇಶವಾಗಿದೆ ಎಂದು ಅವರು ಅಭಿಪ್ರಾಯಪಟ್ಟರು. ಕೈಗಳಲ್ಲಿ ಫಲಕಗಳನ್ನು ಹಿಡಿದು, ಘೋಷಣೆಗಳನ್ನು ಕೂಗಿದ ಪ್ರತಿಭಟನಾಕಾರರು ಸರ್ಕಾರ ತನ್ನ ನಿರ್ಧಾರವನ್ನು ಮರುಪರಿಶೀಲಿಸಬೇಕು ಎಂದು ಒತ್ತಾಯಿಸಿದರು.

ಮೂಲಸೌಕರ್ಯ ಯೋಜನೆಗಳಿಗೆ ಪರ್ಯಾಯ ಸ್ಥಳಗಳನ್ನು ಗುರುತಿಸಿ, ಲಾಲ್‌ಬಾಗ್‌ನ ಹಸಿರು ಪ್ರದೇಶಕ್ಕೆ ಯಾವುದೇ ಧಕ್ಕೆಯಾಗದಂತೆ ಕಾಮಗಾರಿಗಳನ್ನು ಕೈಗೊಳ್ಳಬೇಕು ಎಂದು ಆಗ್ರಹಿಸಿದರು. 'ಅಭಿವೃದ್ಧಿ ಬೇಕು, ಆದರೆ ಲಾಲ್‌ಬಾಗ್‌ನ ಬೆಲೆ ತೆತ್ತು ಅಲ್ಲ' ಎಂಬ ಸಂದೇಶವನ್ನು ಪ್ರತಿಭಟನಾಕಾರರು ಸರ್ಕಾರಕ್ಕೆ ರವಾನಿಸಿದರು. ಈ ಪ್ರತಿಭಟನೆ ಕಳೆದ ಸುಮಾರು ಒಂದು ದಶಕದಲ್ಲಿ ಬೆಂಗಳೂರಿನಲ್ಲಿ ನಡೆದ ಪ್ರಮುಖ ನಾಗರಿಕ ಹೋರಾಟಗಳಲ್ಲಿ ಒಂದಾಗಿ ಗಮನ ಸೆಳೆದಿದೆ.

ಮೂಲಸೌಕರ್ಯ ಯೋಜನೆಗಳಿಗೆ ಪರ್ಯಾಯ ನಗರದ ಸೀಮಿತ ಹಸಿರು ಪ್ರದೇಶಗಳನ್ನು ಅಭಿವೃದ್ಧಿ ಯೋಜನೆಗಳಿಗಾಗಿ ಬಳಸುತ್ತಿರುವ ಕ್ರಮದ ಬಗ್ಗೆ ನಾಗರಿಕರಲ್ಲಿ ಹೆಚ್ಚುತ್ತಿರುವ ಆತಂಕವೂ ಪ್ರತಿಭಟನೆಯಲ್ಲಿ ಪ್ರತಿಫಲಿಸಿದೆ.


ಉದಯವಾಹಿನಿ ಚಿತ್ರ

## ಬಿ ನಾಗೇಂದ್ರ, ರಾಜೀನಾಮೆ ಅಂಗೀಕರಿಸಿದ ರಾಜ್ಯಪಾಲ ಥಾವರಚಂದ್ ಗೆಹ್ಲೋಟ್

• ಉದಯವಾಹಿನಿ, ಬೆಂಗಳೂರು

ಸಚಿವರಾಗಿ ಬಿ ನಾಗೇಂದ್ರ, ಸಲ್ಲಿಸಿದ್ದ ರಾಜೀನಾಮೆಯನ್ನು ಕರ್ನಾಟಕದ ರಾಜ್ಯಪಾಲ ಥಾವರಚಂದ್ ಗೆಹ್ಲೋಟ್ ಅಂಗೀಕರಿಸಿದ್ದಾರೆ ಎಂದು ಅಧಿಕೃತ ಅಧಿಸೂಚನೆ ತಿಳಿಸಿದೆ. ಮುಖ್ಯಮಂತ್ರಿ ಡಿಕೆಶಿವಕುಮಾರ್ ಅವರ ಶಿಫಾರಸಿನ ಮೇರೆಗೆ ರಾಜ್ಯಪಾಲರು ಈ ರಾಜೀನಾಮೆಯನ್ನು ಅಂಗೀಕರಿಸಿದ್ದಾರೆ. ಈ ಸಂಬಂಧ ಆಗಸ್ಟ್ 29ರಂದು ಹೊರಡಿಸಲಾದ ಅಧಿಕೃತ ಅಧಿಸೂಚನೆಯನ್ನು ಭಾನುವಾರ ಮಾಧ್ಯಮಗಳಿಗೆ ಬಿಡುಗಡೆ ಮಾಡಲಾಗಿದೆ.

ನಾನು ಮುಖ್ಯಮಂತ್ರಿಯವರ ಶಿಫಾರಸನ್ನು ಅಂಗೀಕರಿಸಿದ್ದೇನೆ ಮತ್ತು ಭಾರತದ ಸಂವಿಧಾನದ 164 (1)ನೇ ವಿಧಿಯ ಅಡಿಯಲ್ಲಿ ನನಗೆ ದತ್ತವಾಗಿರುವ ಅಧಿಕಾರವನ್ನು ಚಲಾಯಿಸಿ, ಕರ್ನಾಟಕದ ರಾಜ್ಯಪಾಲನಾದ ನಾನು, ಥಾವರ್‌ಚಂದ್ ಗೆಹ್ಲೋಟ್, ಯೋಜನೆ ಮತ್ತು ಸಾಂಖ್ಯಿಕ ಸಚಿವ ಬಿ ನಾಗೇಂದ್ರ ಅವರು ಸಚಿವ ಸಂಪುಟಕ್ಕೆ ಸಲ್ಲಿಸಿರುವ ರಾಜೀನಾಮೆಯನ್ನು ತಕ್ಷಣದಿಂದಲೇ ಜಾರಿಗೆ ಬರುವಂತೆ ಅಂಗೀಕರಿಸುತ್ತೇನೆ ಎಂದು ಹೇಳಿದ್ದಾರೆ.

ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದಲ್ಲಿ ನಡೆದಿದೆ ಎನ್ನಲಾದ ಹಗರಣದಲ್ಲಿ ವಿರೋಧ ಪಕ್ಷಗಳ ತೀವ್ರ ಟೀಕೆಗೆ ಗುರಿಯಾಗಿದ್ದ ನಾಗೇಂದ್ರ, ಶಿವಕುಮಾರ್ ನೇತೃತ್ವದ ಸಂಪುಟಕ್ಕೆ ಮರುಸೇರ್ಪಡೆಯಾದ ಕೇವಲ 25 ದಿನಗಳಲ್ಲೇ ತಮ್ಮ ರಾಜೀನಾಮೆ ಸಲ್ಲಿಸಿದರು. ಈ ಹಗರಣದಲ್ಲಿ ತಮ್ಮ ಯಾವುದೇ ಪಾತ್ರವಿಲ್ಲ ಎಂದು ಪ್ರತಿಪಾದಿಸಿದ ನಾಗೇಂದ್ರ, ಪಕ್ಷ ಮತ್ತು ಸರ್ಕಾರಕ್ಕೆ ಮುಜುಗರವಾಗುವುದನ್ನು ತಪ್ಪಿಸಲು ತಾವಾಗಿಯೇ ರಾಜೀನಾಮೆ ನೀಡಿರುವುದಾಗಿ ತಿಳಿಸಿದರು.

**ಪ್ರತಿಭಟನೆಗಳ ಮೂಲಕ ತೀವ್ರ ಒತ್ತಡ**

**ವಿರೋಧ ಪಕ್ಷಗಳಾದ ಬಿಜೆಪಿ ಮತ್ತು ಜೆಡಿಎಸ್ ಬಳ್ಳಾರಿ ಶಾಸಕರ ವಿರುದ್ಧ ನಿರಂತರ ಟೀಕೆ ಹಾಗೂ ಪ್ರತಿಭಟನೆಗಳ ಮೂಲಕ ತೀವ್ರ ಒತ್ತಡ ಹೇರಿದ್ದಲ್ಲದೆ, ರಾಜ್ಯ ವಿಧಾನಮಂಡಲದ ಮುಂಗಾರು ಅಧಿವೇಶನಕ್ಕೂ ಅಡ್ಡಿಪಡಿಸಿ, ನಿಗದಿತ ಅವಧಿಗಿಂತ ಮೂರು ದಿನ ಮುಂಚಿತವಾಗಿಯೇ ಅದನ್ನು ಮೊಟಕುಗೊಳಿಸುವಂತೆ ಮಾಡಿತ್ತು.**


ಉದಯವಾಹಿನಿ ಚಿತ್ರ

## ಪ್ರಿಯಾಂಕ್ ಖರ್ಗೆ, ನಲಪಾಡ್‌ಗೆ ಕೋರ್ಟ್‌ನಿಂದ ಬಿಗ್ ರಿಲೀಫ್!

• ಉದಯವಾಹಿನಿ, ಬೆಂಗಳೂರು

ರಾಷ್ಟ್ರೀಯ ಸ್ವಯಂಸೇವಾ ಸಂಘ (ವಿರುದ್ಧ ಅವಹೇಳನಕಾರಿ ಪೋಸ್ಟ್ ಮಾಡಿದ್ದ ಆರೋಪಕ್ಕೆ ಸಂಬಂಧಿಸಿದಂತೆ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಹಾಗೂ ಕಾಂಗ್ರೆಸ್ ಮುಖಂಡ ಮೊಹಮ್ಮದ್ ನಲಪಾಡ್ ಗೆ ಬೆಂಗಳೂರಿನ 42ನೇ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಜಾಮೀನು ಮಂಜೂರು ಮಾಡಿದೆ.

ಇದು ಖುದ್ದು ಪ್ರಿಯಾಂಕ್ ಖರ್ಗೆ ಹಾಗೂ ಮೊಹಮ್ಮದ್ ನಲಪಾಡ್ ನ್ಯಾಯಾಲಯದ ಮುಂದೆ ಹಾಜರಾಗಿದ್ದರು. ಎರಡೂಕಡೆ ವಾದ ಆಲಿಸಿದ ನ್ಯಾಯಾಲಯವು ತಲಾ 10 ಸಾವಿರ ವೈಯಕ್ತಿಕ ಶ್ಯೂರಿಟಿ ನೀಡುವಂತೆ ಸೂಚಿಸಿ ಷರತ್ತುಬದ್ಧ ಜಾಮೀನು ಮಂಜೂರು ಮಾಡಿದೆ. 2025ರ ಆಗಸ್ಟ್ 14ರಂದು ಪ್ರಿಯಾಂಕ್ ಖರ್ಗೆ ತಮ್ಮ 'ಖಾತೆಯಲ್ಲಿ ಸದಸ್ಯರನ್ನು ಗುರಿಯಾಗಿಸಿಕೊಂಡು ಆಕ್ಷೇಪಾರ್ಹ ಪೋಸ್ಟ್ ಮಾಡಿದ್ದರು.

ಇದೇ ವೇಳೆ, ನಲಪಾಡ್ ಅವರು ಯೂಟ್ಯೂಬ್ ಚಾನೆಲ್‌ವೊಂದರ ಸಂದರ್ಶನದಲ್ಲಿ ಆರ್‌ಎಸ್‌ಎಸ್ ವಿರುದ್ಧ ಮಾನಹಾನಿಕರ ಹೇಳಿಕೆ ನೀಡಿದ್ದಾರೆ ಎಂದು ಆರೋಪಿಸಲಾಗಿದೆ. ಇಬ್ಬರ ವಿರುದ್ಧ ಬೆಂಗಳೂರಿನ ಸಿದ್ದಾಪುರದ ಕಾರ್ಯಕರ್ತ ಎ ತೇಜಸ್ ದೂರು ದಾಖಲಿಸಿದ್ದರು.

## ಶಿವರಾಮ ಕಾರಂತ ಬಡಾವಣೆಯ ಪ್ರಮುಖ ರಸ್ತೆಗೆ ರಾಮಕೃಷ್ಣ ಹೆಗಡೆ ಹೆಸರು: ಸಿಎಂ ಘೋಷಣೆ

• ಉದಯವಾಹಿನಿ, ಬೆಂಗಳೂರು

ಮಾಜಿ ಮುಖ್ಯಮಂತ್ರಿ ದಿವಂಗತ ರಾಮಕೃಷ್ಣ ಹೆಗಡೆ ಅವರ ಹೆಸರನ್ನು ಶಾಶ್ವತಗೊಳಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಹಲವು ಮಹತ್ವದ ಕ್ರಮಗಳನ್ನು ಕೈಗೊಳ್ಳಲಿದೆ ಎಂದು ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಹೇಳಿದರು. ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ನಡೆದ ಮಾಜಿ ಮುಖ್ಯಮಂತ್ರಿ ದಿವಂಗತ ರಾಮಕೃಷ್ಣ ಹೆಗಡೆ ಜನ್ಮ ಶತಮಾನೋತ್ಸವ ಸಮಾರಂಭವನ್ನು ಉಪರಾಷ್ಟ್ರಪತಿ ಸಿ.ಪಿ ರಾಧಾಕೃಷ್ಣನ್ ಅವರೊಂದಿಗೆ ಉದ್ಘಾಟಿಸಿ ಮಾತನಾಡಿದರು. ಉತ್ತರ ಕನ್ನಡ


ಉದಯವಾಹಿನಿ ಚಿತ್ರ

ಜಿಲ್ಲೆಯ ಮೆಡಿಕಲ್ ಕಾಲೇಜಿಗೆ ರಾಮಕೃಷ್ಣ ಹೆಗಡೆ ಅವರ ಹೆಸರಿಡುವ ನಿರ್ಧಾರವನ್ನು ಇದೇ ಸಂದರ್ಭದಲ್ಲಿ ಪ್ರಕಟಿಸಿದ ಸಿಎಂ, ಗ್ರಾಮೀಣ ಆಡಳಿತಕ್ಕೆ ಹೆಗಡೆ ನೀಡಿದ ಕೊಡುಗೆಯನ್ನು ಸ್ಮರಿಸುವ ಸಲುವಾಗಿ ಪ್ರತಿ ವರ್ಷ ಅವರ ಜನ್ಮದಿನದಂದು 'ರಾಮಕೃಷ್ಣ ಹೆಗಡೆ ಶ್ರೇಷ್ಠ ಪಂಚಾಯಿತಿ ಪ್ರಶಸ್ತಿ' ನೀಡುವ ಕಾರ್ಯಕ್ರಮ ರೂಪಿಸುವಂತೆ ಆರ್‌ಡಿಪಿಆರ್ ಸಚಿವರೊಂದಿಗೆ ಚರ್ಚಿಸಿರುವುದಾಗಿ ಹೇಳಿದ್ದು ಬೆಂಗಳೂರಿನ ಶಿವರಾಮ ಕಾರಂತ ಬಡಾವಣೆಯ ಪ್ರಮುಖ ರಸ್ತೆಯೊಂದಕ್ಕೆ ರಾಮಕೃಷ್ಣ ಹೆಗಡೆ ಹೆಸರಿಡಲು ತೀರ್ಮಾನಿಸಿರುವುದಾಗಿಯೂ ಹೇಳಿದರು. ರಾಮಕೃಷ್ಣ ಹೆಗಡೆ ಅವರು ಕೇವಲ ಅಧಿಕಾರ ನಡೆಸಿದ ನಾಯಕನಲ್ಲ, ಪಂಚಾಯತ್‌ನಿಂದ ಸಂಸತ್ತಿನವರೆಗೆ ಹೊಸ ನಾಯಕತ್ವವನ್ನು ಸೃಷ್ಟಿಸಿದ ನಾಯಕ ಎಂದು ಅವರು ಬಣ್ಣಿಸಿದರು.

ಒಬ್ಬ ನಾಯಕನ ಕೆಲಸ ಕೇವಲ ಹಿಂಬಾಲಕರನ್ನು ಸೃಷ್ಟಿಸುವುದಲ್ಲ. ನಾಯಕರನ್ನು ಸೃಷ್ಟಿಸುವುದೇ ನಿಜವಾದ ನಾಯಕತ್ವ. ರಾಮಕೃಷ್ಣ ಹೆಗಡೆ ಅವರ ಮೂಲ ತತ್ವ ಇದೇ ಆಗಿತ್ತು.

## KPSC ಹಗರಣ: IAS ಅಧಿಕಾರಿ ಜ್ಞಾನೇಂದ್ರ ಕುಮಾರ್ ಸಿಐಡಿ ವಶಕ್ಕೆ

• ಉದಯವಾಹಿನಿ, ಬೆಂಗಳೂರು

ಕೆಪಿಎಸ್‌ಸಿಯಿಂದ ಪಶು ವೈದ್ಯಾಧಿಕಾರಿಗಳ ನೇಮಕದಲ್ಲಿ ಹಗರಣ ಪ್ರಕರಣದ ಸಂಬಂಧ ಸಿಐಡಿ ಕೆಪಿಎಸ್‌ಸಿ ಕಚೇರಿ ಮೇಲೆ ದಾಳಿ ಮಾಡಿ ಇದೀಗ ಐಎಎಸ್ ಅಧಿಕಾರಿ ಜ್ಞಾನೇಂದ್ರ ಕುಮಾರ್ ಅವರನ್ನು ವಶಕ್ಕೆ ಪಡೆದುಕೊಂಡಿದೆ. ಜಾರಿ ನಿರ್ದೇಶನಾಲಯ ಈ ಹಿಂದೆ ಕೆಪಿಎಸ್ ಮಾಜಿ ಅಧ್ಯಕ್ಷ, ಸದಸ್ಯರು ಹಾಗೂ ಸಂಬಂಧಿಸಿದ ಅಧಿಕಾರಿಗಳ ಮನೆ ಮೇಲೆ ದಾಳಿ ಮಾಡಿ ಪರಿಶೀಲನೆ ನಡೆಸಿತ್ತು. ಈಗ ಪಶು ವೈದ್ಯಾಧಿಕಾರಿಗಳ ಪರೀಕ್ಷಾ ನಿಯಂತ್ರಕರಾಗಿದ್ದ ಜ್ಞಾನೇಂದ್ರ ಕುಮಾರ್ ಅವರನ್ನ ಸಿಐಡಿ ಅಧಿಕಾರಿಗಳು ಸುದೀರ್ಘ ವಿಚಾರಣೆ ನಡೆಸಿದ್ದು, ಎರಡು ದಿನಗಳ ಬಳಿಕ ಅವರನ್ನ ವಶಕ್ಕೆ ಪಡೆದಿದೆ. ಕರ್ನಾಟಕ ಲೋಕಸೇವಾ ಆಯೋಗದ ಪರೀಕ್ಷಾ ನಿಯಂತ್ರಕರಾಗಿದ್ದ ಅವಧಿಯಲ್ಲಿ ನಡೆದಿದೆ ಎನ್ನಲಾದ ಪ್ರಶ್ನೆಪತ್ರಿಕೆ ಸೋರಿಕೆ, ಅಂಕ ತಿದ್ದುಪಡಿ ಹಾಗೂ ನೇಮಕಾತಿಯಲ್ಲಿನ ಅಕ್ರಮಗಳ ಕುರಿತಂತೆ ಸಿಐಡಿ ವಿಶೇಷ ತನಿಖಾ ತಂಡ ತೀವ್ರ ತನಿಖೆ ನಡೆಸುತ್ತಿದೆ. ಪ್ರಕರಣದ ತನಿಖೆಯ ಭಾಗವಾಗಿ ಸಿಐಡಿ ಅಧಿಕಾರಿಗಳು ಕಾಲ ಜ್ಞಾನೇಂದ್ರಕುಮಾರ್ ಅವರನ್ನು ಸುದೀರ್ಘ ವಿಚಾರಣೆಗೆ ಒಳಪಡಿಸಿದ್ದರು. ತನಿಖಾ ಪ್ರಕ್ರಿಯೆಗೆ ಸರಿಯಾಗಿ ಸ್ಪಂದಿಸದ ಕಾರಣ ಅಂತಿಮವಾಗಿ ಅವರನ್ನು ವಶಕ್ಕೆ ಪಡೆದುಕೊಳ್ಳಲಾಗಿದೆ. ವೈದ್ಯಕೀಯ ತಪಾಸಣೆಗೆ ಒಳಪಡಿಸಿದ ಬಳಿಕ ನ್ಯಾಯಾಲಯದ ಮುಂದೆ ಹಾಜರುಪಡಿಸಿ, ಹೆಚ್ಚಿನ ದಿನಗಳ ಕಾಲ ತಮ್ಮ ಕಸ್ಟಡಿಗೆ ಪಡೆಯಲು ಸಿಐಡಿ ಸಿದ್ಧತೆ ನಡೆಸಿದೆ.

# ಪಿಎಂ ಇ-ಡ್ರೈವ್'ಅಡಿ ಸರ್ಕಾರಿ ಇಲಾಖೆಗಳ ಆವರಣದಲ್ಲಿ ಇವಿ ಚಾರ್ಜಿಂಗ್ ಕೇಂದ್ರ ಸ್ಥಾಪನೆ

## ಚಾರ್ಜಿಂಗ್ ಕೇಂದ್ರಗಳ ಸ್ಥಾಪನೆ ಮತ್ತು ಕಾರ್ಯಾಚರಣೆಗಾಗಿ ಬೆಸ್ಕಾಂ ಹಾಗೂ ಸಂಬಂಧಿತ ಇಲಾಖೆಯ ನಡುವೆ 10 ವರ್ಷಗಳ ಅವಧಿಯ ಒಡಂಬಡಿಕೆ

• ಉದಯವಾಹಿನಿ, ಬೆಂಗಳೂರು

1 ರೈಲು ನಿಲ್ದಾಣ
2 ವಿಮಾನ ನಿಲ್ದಾಣ
3 ಮೆಟ್ರೋ ನಿಲ್ದಾಣ

ಪಿಎಂ ಇ-ಡ್ರೈವ್ ಯೋಜನೆಯಡಿ ರಾಜ್ಯದ ಸರ್ಕಾರಿ ಇಲಾಖೆಗಳು ಹಾಗೂ ಸಾರ್ವಜನಿಕ ವಲಯದ ಸಂಸ್ಥೆಗಳ ಆವರಣಗಳಲ್ಲಿ ಲಭ್ಯವಿರುವ ಸೂಕ್ತ ಸ್ಥಳಗಳನ್ನು ಬಳಸಿಕೊಂಡು ಸಾರ್ವಜನಿಕ ಎಲೆಕ್ಟ್ರಿಕ್ ವಾಹನ ಚಾರ್ಜಿಂಗ್ ಕೇಂದ್ರಗಳನ್ನು ಸ್ಥಾಪಿಸಲು ಸರ್ಕಾರ ಮುಂದಾಗಿದೆ. ಇಂಧನ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತಾ ಅವರು ಬೆಸ್ಕಾಂ ಕಾರ್ಪೊರೇಟ್ ಕಚೇರಿಯಲ್ಲಿ ಪ್ರಮುಖ ಸರ್ಕಾರಿ ಇಲಾಖೆಗಳ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಪಿಎಂ ಇ-ಡ್ರೈವ್ ಯೋಜನೆಯಡಿ ಸರ್ಕಾರಿ ಸ್ವಾಮ್ಯದ ಸ್ಥಳಗಳಲ್ಲಿ ಇವಿ ಚಾರ್ಜಿಂಗ್ ಕೇಂದ್ರಗಳನ್ನು ಸ್ಥಾಪಿಸುವ ಕುರಿತು ಚರ್ಚಿಸಿದರು. ಸರ್ಕಾರಿ ಇಲಾಖೆಗಳಿಗೆ ಸೇರಿದ ಸ್ಥಳಗಳಲ್ಲಿ ಲಭ್ಯ ಇರುವ ಪಾರ್ಕಿಂಗ್ ಅಥವಾ ಖಾಲಿ ಜಾಗಗಳಲ್ಲಿ ಇವಿ ಚಾರ್ಜಿಂಗ್ ಕೇಂದ್ರಗಳ ಸ್ಥಾಪನೆಗೆ ಸೂಕ್ತ ಸ್ಥಳಗಳನ್ನು ಗುರುತಿಸುವುದು, ಅಗತ್ಯ ಅನುಮೋದನೆಗಳನ್ನು ತ್ವರಿತವಾಗಿ ನೀಡುವುದು ಹಾಗೂ ಗುರುತಿಸಲಾದ ಸ್ಥಳಗಳನ್ನು ಯೋಜನೆಯ ರಾಜ್ಯ ನೋಡಲ್ ಏಜೆನ್ಸಿಯಾಗಿರುವ ಬೆಸ್ಕಾಂಗೆ ಹಸ್ತಾಂತರಿಸುವಂತೆ ಇಲಾಖೆಗಳ ಅಧಿಕಾರಿಗಳಿಗೆ ಸಭೆಯಲ್ಲಿ ಗೌರವ್ ಗುಪ್ತಾ ಅವರು ಸೂಚಿಸಿದರು. ಜೊತೆಗೆ, ಸಾರ್ವಜನಿಕರಿಗೆ 24=7 ಪ್ರವೇಶ ಕಲ್ಪಿಸಲು ಹಾಗೂ ಅಗತ್ಯವಿದ್ದೆಡೆ ಪ್ರತ್ಯೇಕ ಪ್ರವೇಶ ಮತ್ತು ನಿರ್ಗಮನ ವ್ಯವಸ್ಥೆ ಮಾಡುವ ಬಗ್ಗೆಯೂ ಸಭೆಯಲ್ಲಿ ಚರ್ಚಿಸಲಾಯಿತು. ರಾಜ್ಯಾದ್ಯಂತ ವರ್ಗ-ಎ (ರಾಜ್ಯ ಹಾಗೂ ಕೇಂದ್ರ ಸರ್ಕಾರಕ್ಕೆ ಸೇರಿದ ಸ್ಥಳ ಉದಾ: ಸರ್ಕಾರಿ


ಉದಯವಾಹಿನಿ ಚಿತ್ರ

ಕಚೇರಿ, ಆಸ್ಪತ್ರೆ, ಶಾಲೆ ಕಾಲೇಜು ಆವರಣ) ಮತ್ತು ವರ್ಗ-ಬಿ (ಸರ್ಕಾರಿ ಸ್ವಾಮ್ಯದ ಅಥವಾ ಸರ್ಕಾರದಿಂದ ನಿರ್ವಹಿಸಲಾಗುವ ಸಾರ್ವಜನಿಕ ಸ್ಥಳಗಳು ಉದಾ: ರೈಲು ನಿಲ್ದಾಣ, ವಿಮಾನ ನಿಲ್ದಾಣ, ಮೆಟ್ರೋ/ಬಸ್ ನಿಲ್ದಾಣ ಇತ್ಯಾದಿಗಳಲ್ಲಿ ಒಟ್ಟು 1,250 ಇವಿ ಚಾರ್ಜಿಂಗ್ ಕೇಂದ್ರಗಳನ್ನು ಸ್ಥಾಪಿಸಲು ಬೆಸ್ಕಾಂ ಪ್ರಸ್ತಾವನೆ ಸಲ್ಲಿಸಿತ್ತು. ಮೇಲ್ವಿಚಾರಣೆ ಹಾಗೂ ಸಬ್ಸಿಡಿ ಪ್ರಕ್ರಿಯೆಯನ್ನು ಸುಗಮಗೊಳಿಸಲು ಸಮಗ್ರ ಡಿಜಿಟಲ್ ವೇದಿಕೆ ಮತ್ತು ಅನುಷ್ಠಾನ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸಿದೆ. ಚಾರ್ಜಿಂಗ್ ಕೇಂದ್ರಗಳನ್ನು ಇವಿ ಮಿತ್ರ ವೇದಿಕೆಗೆ ಸೇರ್ಪಡೆಗೊಳಿಸಲಾಗುವುದು. ಇದರಿಂದ ಸಾರ್ವಜನಿಕರು ಚಾರ್ಜಿಂಗ್ ಕೇಂದ್ರಗಳನ್ನು ಬಳಸಿಕೊಳ್ಳಲು ಅನುಕೂಲವಾಗಲಿದೆ ಎಂದು ಬೆಸ್ಕಾಂ ವ್ಯವಸ್ಥಾಪಕ ನಿರ್ದೇಶಕ ಡಾ. ಎನ್. ಶಿವಶಂಕರ ಹೇಳಿದರು. ಸಭೆಯಲ್ಲಿ ಕೆಪಿಟಿಸಿಎಲ್‌ನ ವ್ಯವಸ್ಥಾಪಕ ನಿರ್ದೇಶಕ ರಾಮ್ ಪ್ರಸಾತ್ ಮನೋಹರ್, ಬೆಸ್ಕಾಂ ವ್ಯವಸ್ಥಾಪಕ ನಿರ್ದೇಶಕ ಡಾ. ಎನ್. ಶಿವಶಂಕರ, ಕ್ರೆಡಲ್ ವ್ಯವಸ್ಥಾಪಕ ನಿರ್ದೇಶಕಿ ದಿವ್ಯಾ ಪ್ರಭು, ಜೆ.ಆರ್.ಜೆ. ಹಾಗೂ ಇಂಧನ ಇಲಾಖೆ ಹಾಗೂ ಇತರೆ ಇಲಾಖೆಗಳ ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು.

**ಆದಾಯ ಹಂಚಿಕೆ ಆಗಲಿ**

**ಕೇಂದ್ರ ವಿದ್ಯುತ್ ಸಚಿವಾಲಯದ ಮಾರ್ಗಸೂಚಿಯಂತೆ ಇವಿ ಚಾರ್ಜಿಂಗ್ ಕೇಂದ್ರ ಸ್ಥಾಪನೆಯಾಗುವ ಜಾಗದ ಮಾಲೀಕತ್ವ ಹೊಂದಿರುವ ಸರ್ಕಾರಿ ಇಲಾಖೆಗೆ ಚಾರ್ಜಿಂಗ್ ಮೂಲಕ ಬಳಕೆಯಾಗುವ ಪ್ರತಿ ಕಿಲೋವ್ಯಾಟ್ ಗಂಟೆಗೆ ಒಂದು ರೂಪಾಯಿ ಆದಾಯ ಹಂಚಿಕೆ ಆಗಲಿದೆ.**

**ರಾಜ್ಯದಲ್ಲಿ ಇವಿ ಚಾರ್ಜಿಂಗ್ ಮೂಲಸೌಕರ್ಯ ಸ್ಥಾಪನೆ ಹಾಗೂ ಯೋಜನೆಗೆ ಸಂಬಂಧಿಸಿದ ವಿವರ ಮತ್ತು ಇತರೆ ಅಗತ್ಯ ಮಾಹಿತಿಯನ್ನು ಸಲ್ಲಿಸುವ ಜವಾಬ್ದಾರಿಯನ್ನು ಬೆಸ್ಕಾಂ ನಿರ್ವಹಿಸಲಿದೆ ಎಂದು ತಿಳಿಸಿದ್ದಾರೆ.- ಸಚಿವ ಕೆ.ಜೆ. ಜಾರ್ಜ್**

**ಚಾರ್ಜಿಂಗ್ ಕೇಂದ್ರಗಳ ಸ್ಥಾಪನೆ ಮತ್ತು ಕಾರ್ಯಾಚರಣೆಗಾಗಿ ಬೆಸ್ಕಾಂ ಹಾಗೂ ಸಂಬಂಧಿತ ಇಲಾಖೆಯ ನಡುವೆ 10 ವರ್ಷಗಳ ಅವಧಿಯ ಒಡಂಬಡಿಕೆ ಮಾಡಿಕೊಳ್ಳಲಾಗುವುದು. ಚಾರ್ಜಿಂಗ್ ಕೇಂದ್ರಗಳ ಸ್ಥಾಪನೆ, ಕಾರ್ಯಾಚರಣೆ ಹಾಗೂ ನಿರ್ವಹಣೆಯ ಜವಾಬ್ದಾರಿ ಬೆಸ್ಕಾಂನದ್ದಾಗಿರುತ್ತದೆ ಎಂದು ತಿಳಿಸಿದರು.- ಗೌರವ್ ಗುಪ್ತಾ**

# ವಿಘ್ನವಿನಾಶಕನ ಮೂರ್ತಿಗೆ ಪಿಒಪಿ ಕಾಟ: ಮಣ್ಣಿನ ಮೂರ್ತಿಗಳಿಗೆ ಬೇಡಿಕೆ ಕಡಿಮೆ

## ಪ್ಲಾಸ್ಟರ್ ಆಫ್ ಪ್ಯಾರಿಸ್‌ನಿಂದ ತಯಾರಿಸಿದ ಗಣೇಶ ಮೂರ್ತಿಗಳಿಗೆ ಪಿಒಪಿ ಗಣೇಶ ಮೂರ್ತಿಗಳಾಗಿವೆ. ಇವುಗಳ ನಿರ್ಮಾಣಕ್ಕೆ ಶ್ರಮ ಹೆಚ್ಚು ಬೇಡ

• **ಉದಯವಾಹಿನಿ, ಹಾವೇರಿ:**

ಗಣೇಶ ಚತುರ್ಥಿಗೆ ಕೆಲವೇ ಕೆಲವು ದಿನಗಳು ಬಾಕಿ ಉಳಿದಿವೆ. ಮಾರುಕಟ್ಟೆಯಲ್ಲಿ ಕಲಾವಿದರು ವೈವಿಧ್ಯಮಯ ಗಣೇಶ ಮೂರ್ತಿಗಳನ್ನು ಸಿದ್ಧಪಡಿಸಿದ್ದಾರೆ. ಆದರೆ ಪ್ರತಿ ವರ್ಷದಂತೆ ಈ ವರ್ಷ ಸಹ ಮಣ್ಣಿನ ಕಲಾವಿದರಿಗೆ

**1 : ಕೇವಲ ಎರಡು ಜನರು 10 ಅಡಿ**
**2 : ಹೆಚ್ಚು ಅಂದವಾಗಿ ಕಾಣುತ್ತವೆ**
**3 : ಮಣ್ಣಿನ ಗಣೇಶ ಮಾಡುವ ಕಲೆ**


ಉದಯವಾಹಿನಿ ಚಿತ್ರ

ಪಿಒಪಿ ಗಣೇಶ ಮೂರ್ತಿಗಳ ಕಾಟ ಶುರುವಾಗಿದೆ. ದೂರ ದೂರದಿಂದ ಕಡಿಮೆ ಹಣದಲ್ಲಿ ಪಿಒಪಿ ಗಣೇಶ ಮೂರ್ತಿಗಳನ್ನು ತಂದು ಜನ ಸಂಚಾರವಿಲ್ಲದ ಜಾಗಗಳಲ್ಲಿ ಪಿಒಪಿ ಗಣೇಶ ಮೂರ್ತಿಗಳಿಗೆ ಅಂತಿಮ ಹಂತದ ಟಚ್ ನೀಡಲಾಗುತ್ತಿದೆ. ಕಡಿಮೆ ದರದಲ್ಲಿ ತುಂಬಾ ಅಂದವಾದ ಪಿಒಪಿ ಗಣೇಶ ಮೂರ್ತಿಗಳು ಸಿಗುತ್ತವೆ. ಇದರಿಂದ ಮಣ್ಣಿನಿಂದ ತಯಾರಿಸಿದ ನೈಜ ಮೂರ್ತಿಗಳಿಗೆ ಬೇಡಿಕೆ ಕಡಿಮೆಯಾಗುತ್ತಿದೆ ಎಂದು ಕಲಾವಿದರು ಬೇಸರ ವ್ಯಕ್ತಪಡಿಸುತ್ತಿದ್ದಾರೆ. ಇದರಿಂದ ಸಾಂಪ್ರದಾಯಿಕವಾಗಿ ಶತಮಾನಗಳಿಂದ ಗಣೇಶ ಮೂರ್ತಿಗಳನ್ನು ತಯಾರಿಸಿಕೊಂಡು ಬರುತ್ತಿದ್ದ ಕಲಾವಿದ ಕುಟುಂಬಗಳು ಸಂಕಷ್ಟಕ್ಕೆ ಸಿಲುಕಿವೆ. ಅತಿಯಾದ ಶ್ರಮ ಮತ್ತು ನೈಜ ಕಲೆಯಲ್ಲಿ ಅರಳಿದ ಗಣೇಶ ಮೂರ್ತಿಗಳಿಗಿಂತ ಪಿಒಪಿ ಗಣೇಶ ಮೂರ್ತಿಗಳು ಕಡಿಮೆ ದರದಲ್ಲಿ ಸಿಗುತ್ತವೆ. ಪಿಒಪಿಯಿಂದ ತಯಾರಾದ ಗಣೇಶ ಮೂರ್ತಿಗಳನ್ನು ಜಲಮೂಲಗಳಲ್ಲಿ ನಿಮಜ್ಜನ ಮಾಡಿದರೇ ಅದು ಕರಗುವುದಿಲ್ಲ. ಇದರಿಂದ ಜಲಚರಗಳಿಗೆ ಭೂಮಿಯೊಳಗಿನ ಜೀವಿಗಳಿಗೆ ಅಪಾಯಕರವಾಗಿರುತ್ತದೆ. ಅಲ್ಲದೆ ಜಲಚರಗಳ ಹೊಟ್ಟೆ ಸೇರಿ ಅಲ್ಲಿಂದ ಮನುಷ್ಯರ ಹೊಟ್ಟೆ ಸಹ ಸೇರುತ್ತದೆ. ಆದ್ದರಿಂದ ಪಿಒಪಿಯಿಂದ ತಯಾರಿಸಿದ ಗಣೇಶ ಮೂರ್ತಿಗಳ ಮಾರಾಟಕ್ಕೆ ನಿರ್ಬಂಧ ಹೇರುವಂತೆ ಮಣ್ಣಿನ ಕಲಾವಿದರು ಒತ್ತಾಯಿಸಿದ್ದಾರೆ. ಪ್ಲಾಸ್ಟರ್ ಆಫ್ ಪ್ಯಾರಿಸ್‌ನಿಂದ ತಯಾರಿಸಿದ ಗಣೇಶ ಮೂರ್ತಿಗಳಿಗೆ ಪಿಒಪಿ ಗಣೇಶ ಮೂರ್ತಿಗಳಾಗಿವೆ. ಇವುಗಳ ನಿರ್ಮಾಣಕ್ಕೆ ಶ್ರಮ ಹೆಚ್ಚು ಬೇಡ. ಅಲ್ಲದೆ ನುಣುಪಾಗಿರುವ ಕಾರಣ ಮಣ್ಣಿನ ಗಣೇಶ ಮೂರ್ತಿಗಳಿಗಿಂತ ಹೆಚ್ಚು ಅಂದವಾಗಿ ಕಾಣುತ್ತವೆ. ಅಲ್ಲದೆ ಇವುಗಳಿಗೆ ಮೂಲ್ಡ್‌ಗಳಿರುತ್ತವೆ. ಅದರಲ್ಲಿ ತೆಂಗಿನನಾರು ಮತ್ತು ಪ್ಲಾಸ್ಟರ್ ಆಫ್ ಪ್ಯಾರಿಸ್ ಪೌಡರ್ ದ್ರಾವಣ ಕಲಿಸಿ ಹಾಕಿದರೆ ಮುಗಿಯಿತು.

ಈ ಕುರಿತಂತೆ ಮಾತನಾಡಿದ ಮಣ್ಣಿನ ಗಣೇಶ ಮೂರ್ತಿ ತಯಾರಿಸುವ ಸಂಜೀವಕುಮಾರ್, ಪರಿಸರ ಕೆಡಲು ನಾವೇ ಕಾರಣ ಎಂದು ಬೇಸರ ವ್ಯಕ್ತಪಡಿಸಿದರು. ನಮ್ಮ ನಿರ್ಲಕ್ಷ್ಯದಿಂದಲೇ ತಲೆ ತಲಾಂತರದಿಂದ ಉಳಿಸಿಕೊಂಡ ಬಂದ ಮಣ್ಣಿನ ಗಣೇಶ ಮಾಡುವ ಕಲೆ ನಶಿಸುತ್ತಿದೆ. ಕಡಿಮೆ ದರದಲ್ಲಿ ಗಣೇಶ ಮೂರ್ತಿಗಳು ಸಿಗುತ್ತವೆ ಎಂದು ವ್ಯಾಪಾರಿಗಳು ಪಿಒಪಿ ಗಣೇಶ ಮೂರ್ತಿಗಳನ್ನು ತಂದು ಮಾರಾಟ ಮಾಡುತ್ತಿದ್ದಾರೆ. ಎಷ್ಟು ಕುಟುಂಬಗಳು ಮಣ್ಣಿನ ಗಣೇಶ ಮೂರ್ತಿಗಳನ್ನು ತಯಾರಿಸಿ ಜೀವನ ನಡೆಸುತ್ತಿದ್ದರು. ಆದರೆ ಈಗ ಪಿಒಪಿಯ ರೆಡಿಮೇಡ್ ಗಣೇಶ ಮೂರ್ತಿಗಳು ಸಿಗಲಾರಂಭಿಸಿವೆ. ಪಿಒಪಿ ಗಣೇಶ ತಂದು ಮಾರಾಟ ಮಾಡುವ ವ್ಯಾಪಾರ ಆರಂಭವಾಗಿದೆ. ವಂಶಪಾರಂಪರ್ಯವಾಗಿ ಮಾಡಿಕೊಂಡ ಬಂದಿದ್ದ ಗಣೇಶ ಮೂರ್ತಿ ತಯಾರಿಸುವ ಕುಲಕಸುಬು ಬಿಡುವ ಅನಿವಾರ್ಯತೆ ಎದುರಾಗಿದೆ. ಈ ಕಲೆ ಉಳಿಸುವ ಸಲುವಾಗಿ ನಾವು ಮಣ್ಣಿನ ಗಣೇಶ ಮೂರ್ತಿಗಳನ್ನು ತಯಾರಿಸಿಕೊಂಡು ಬರುತ್ತಿದ್ದೇವೆ.

> **ನಾವು ಮನವಿ ಮಾಡುತ್ತೇವೆ ಅಷ್ಟೇ. ಗಣೇಶ ಮೂರ್ತಿಗಳನ್ನು ಸ್ಥಾಪಿಸಿದ ಮೇಲೆ ನಮಗೂ ಗೊಂದಲವಾಗುತ್ತದೆ. ನಮಗೂ ಕಷ್ಟವಾಗುತ್ತದೆ. ಯಾವುದೇ ಕಾರಣಕ್ಕೂ ಪಿಒಪಿ ಗಣೇಶ ಮೂರ್ತಿಗಳನ್ನು ಸ್ಥಾಪಿಸಬಾರದು. ಪಿಒಪಿ ಗಣೇಶ ಮೂರ್ತಿಗಳನ್ನು ಸ್ಥಾಪಿಸುವ ಮುನ್ನ ನಮಗೆ ಸಿಕ್ಕರೆ ನಾವು ಅವುಗಳನ್ನು ತೆಗೆದುಕೊಂಡು ಬರುತ್ತೇವೆ ಎಂದು ತಿಳಿಸಿದರು.**
> -ಜಿಲ್ಲಾಧಿಕಾರಿ ಡಾ. ವಿಜಯಮಹಾಂತೇಶ್

> **ಪಿಒಪಿ ಗಣೇಶ ಮೂರ್ತಿಗಳು ಎಲ್ಲಿಯೇ ಇರಲಿ ಯಾರೇ ತಯಾರಿಸಲಿ ಅದರ ಮೇಲೆ ಕಠಿಣ ಕ್ರಮ ಕೈಗೊಳ್ಳಬೇಕು ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ನಮ್ಮಂತಹ ಕಲಾವಿದರು ಸಹ ಪಿಒಪಿ ಗಣೇಶ ಮೂರ್ತಿ ತಯಾರಿಸಲು ಮುಂದಾಗಬೇಕಾಗುತ್ತದೆ ಎಂದು ಮೌನೇಶ್ ಕಮ್ಮಾರ್ ಎಚ್ಚರಿಕೆ ನೀಡಿದರು.**

> **ಕೇವಲ ಎರಡು ಜನರು 10 ಅಡಿ ಎತ್ತರದ ಪಿಒಪಿ ಗಣೇಶ ಮೂರ್ತಿಗಳನ್ನು ಆರಾಮಾಗಿ ಸಾಗಾಟ ಮಾಡಬಹುದು. ಕಳೆದ ಒಂದು ದಶಕದಿಂದ ಪಿಒಪಿ ಗಣೇಶ ಮೂರ್ತಿಗಳ ಹಾವಳಿ ಹೆಚ್ಚಾಗಿದ್ದು ಇದೇ ರೀತಿ ಮುಂದುವರೆದರೆ ಮಣ್ಣಿನ ಕಲಾವಿದರು ಎಲ್ಲಿಗೆ ಹೋಗಬೇಕು ಎನ್ನುತ್ತಿದ್ದಾರೆ.**
> - ಕಲಾವಿದರು.

# 03ವರ್ಷದ ಅವಧಿಯಲ್ಲಿ ಶಕ್ತಿಯೋಜನೆ,ಗೃಹಜ್ಯೋತಿ ಯೋಜನೆಯಡಿ ತಾಲ್ಲೂಕಿನ ಜನರು ಒಟ್ಟಾರೆ;100ಕೋಟಿ ರೂ.ಸದುಪಯೋಗ

• **ಉದಯವಾಹಿನಿ, ಚಿಂಚೋಳಿ**

ತಾಲ್ಲೂಕಿನ ಸಾರ್ವಜನಿಕರು ಐದು ಗ್ಯಾರಂಟಿಗಳ ಕಾಂಗ್ರೇಸ್ ಸರ್ಕಾರದ 03ವರ್ಷದ ಅವಧಿಯಲ್ಲಿ ಶಕ್ತಿ ಯೋಜನೆ ಮತ್ತು ಗೃಹಜ್ಯೋತಿ ಎರಡು ಗ್ಯಾರಂಟಿಯಲ್ಲಿ ಒಟ್ಟಾರೆ ಅಂದಾಜು 100ಕೋಟಿ ರೂ.ಗಳ ಸದುಪಯೋಗ ಪಡೆದುಕೋಂಡಿದ್ದಾರೆ ಎಂದು ತಾಲ್ಲೂಕಾ ಪಂಚಗ್ಯಾರಂಟಿ ಅನುಷ್ಠಾನ ಸುತಿ ಅಧ್ಯಕ್ಷ ಬಸವರಾಜ ಮಾಲಿ ಹೇಳಿದರು. ಪಟ್ಟಣದ ತಾಲ್ಲೂಕು ಪಂಚಾಯತ್ ಸಭಾಂಗಣದಲ್ಲಿ ಪಂಚ ಗ್ಯಾರಂಟಿ ಯೊಜನೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು,ಗೃಹಲಕ್ಷ್ಮಿ ಯೋಜನೆಯಡಿ ಮೇ ತಿಂಗಳಲ್ಲಿ 35317ಕುಟುಂಬಗಳಿಗೆ 7.63ಕೋಟಿ ಅಂದಾಜು ಫಲಾನುಭಗಳ ಖಾತೆಗಳಿಗೆ ಹಣ ಜಮಾವಣೆಯಾಗಿದೆ,ಯುವನಿಧಿ ಯೋಜನೆಯಡಿ 1903ಜನ ನೋಂದಣಿ ಮಾಡಿಕೊಂಡ ಯುವಕರಿಗೆ 16.30ಲಕ್ಷ ರೂ.ಡಿಬಿಟಿ ಮೂಲಕ ಹಣ ಜಮಾವಣೆಯಾಗಿದೆ,ಅನ್ನಭಾಗ್ಯ ಯೋಜನೆಯಡಿ 58781 ಪಡಿತರ ಚೀಟಿ ಕುಟುಂಬಗಳಿಗೆ


ಉದಯವಾಹಿನಿ ಚಿತ್ರ

10ಕೆಜಿ ಅಕ್ಕಿ ಉಚಿತವಾಗಿ ಸರ್ಕಾರ ನೀಡಲಾಗುತ್ತಿದೆ ಎಂದರು.

ತಾಪಂ.ಇಒ ಸಂತೋಷಕುಮಾರ ಚವ್ಹಾಣ ಮಾತನಾಡಿ ಪಂಚ ಗ್ಯಾರಂಟಿ ಯೋಜನೆಯ ತಾಲ್ಲೂಕಾ ಮಟ್ಟದ ಅಧಿಕಾರಿಗಳು ಸರ್ಕಾದ ನಿರ್ಧೇಶನದಂತೆ ಕೆಲಸ ಮಾಡಬೇಕು,ಬಡವರಿಗೆ ಅನುಕುಲವಾಗುವಂತೆ ಸರ್ಕಾರದ ಯೋಜನೆಗಳು ಬಡವರ ಮನೆಬಾಗಿಲಿಗೆ ಮುಟ್ಟುವಂತೆ ಹಾಗೂ ಯಾವುದೇ ಯೋಜನೆಗಳು ದುರುಪಯೋಗವಾಗದಂತೆ ಕಡಿವಾಣ ಹಾಕಬೇಕು ಎಂದರು.

ಇಲಾಖಾವಾರು ಅಧಿಕಾರಿಗಳಾದ ಜೇಸ್ಕಾಂ ಎಇಇ ಕಾಮಣ್ಣ ಇಂಜೇಳ್ಳಿ,ಸಾರಿಗೆ ಇಲಾಖೆ ವ್ಯವಸ್ಥಾಪಕ ಸುರೇಶ ತೇಗಲತೀಪ್ಪಿ,ಸಿಡಿಪಿಒ ಸತಾ,ಆಹಾರ ಇಲಾಖೆ ಶೀರಸ್ತೇದಾರ ಉಷಾ,ಯುವನಿಧಿ ಅಧಿಕಾರಿಗಳು ತಮ್ಮ ತಮ್ಮ ಇಲಾಖಾ ವರದಿ ಓದಿ ಹೇಳಿದರು.

ಪಂಚ ಗ್ಯಾರಂಟಿ ಸದಸ್ಯರುಃ ಲಕ್ಷ್ಮಣ ಆವುಂಟಿ,ಜಯಕುಮಾರ ಘಾಟಗೆ, ಶಾಂತಕುಮಾರ, ಗೋಂದಪ್ಪ,ಮಲ್ಲಿಕಾರ್ಜುನರೆಡ್ಡಿ,ಗಂಗಾಧರ ಗಡ್ಡಿಮನಿ,ಅನೇಕರಿದ್ದರು.ಪಂಚ ಗ್ಯಾರಂಟಿ ಪ್ರಗತಿ ಪರಿಶೀಲನಾ ಸಭೆಯು 11ಗಂಟೆಗೆ ನಿಗಧಿಪಡಿಸಿದ ಸಭೆಯು ಸಮಯದ ಪ್ರಜ್ಞೆ ಇಲ್ಲದೆ 12-15ಕ್ಕೆ ಸಭೆ ಪ್ರಾರಂಭಿಸಿದರು,ಸಮಯದ ಪಾಲನೆ ಮಾಡದೆ ಇರುವುದರಿಂದ ಕೆಲವರು ಸಿಡುಡಿಗೋಂಡು ಎದುರುಗಡೆ ಹೇಳದೆ ಮೌನವಸಿದರು.

# ‘ಸ್ವಾಸ್ಥ್ಯ ಸಂಕಲ್ಪ’ ತರಬೇತುದಾರರ ತರಬೇತಿ ಕಾರ್ಯಕ್ರಮ ಉದ್ಘಾಟನೆ

• **ಉದಯವಾಹಿನಿ, ಜೇವರ್ಗಿ,**

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ ಟ್ರಸ್ಟ್ (ರಿ.) ಕಲಬುರಗಿ ಪ್ರಾದೇಶಿಕ ವಿಭಾಗದ ವತಿಯಿಂದ 2026-27ನೇ ಸಾಲಿನ ಕ್ರಿಯಾ ಯೋಜನೆಯಂತೆ ಆಯೋಜಿಸಲಾಗಿದ್ದ ಪ್ರಾದೇಶಿಕ ಮಟ್ಟದ ‘ಸ್ವಾಸ್ಥ್ಯ ಸಂಕಲ್ಪ’ ತರಬೇತುದಾರರ ತರಬೇತಿ ಕಾರ್ಯಕ್ರಮವು ಕೇಂದ್ರಿಯ ಬಸು ನಿಲ್ದಾಣದ ಹಿಂಭಾಗದಲ್ಲಿರುವ ಕೃಷಿ ಮಾರಾಟ ಮಂಡಳಿಯಲ್ಲಿ ಅತ್ಯಂತ ಯಶಸ್ವಿಯಾಗಿ ಜರುಗಿತು. ಜನಜಾಗೃತಿ ಪ್ರಾದೇಶಿಕ ನಿರ್ದೇಶಕರಾದ ವಿವೇಕ್ ವಿ. ಪಾಯಸ್ ರವರು ಕಾರ್ಯಕ್ರಮವನ್ನು ದೀಪ ಬೆಳಗಿಸುವುದರ ಮೂಲಕ ಉದ್ಘಾಟಿಸಿ, ತರಬೇತುದಾರರಿಗೆ ಮುಖ್ಯ ತರಬೇತಿ ಹಾಗೂ ಮಾರ್ಗದರ್ಶನ ನೀಡಿದರು. ನಂತರ ಮಾತನಾಡಿದ ಅವರು, ಸಮಾಜದಲ್ಲಿ ಮದ್ಯಪಾನ ಮತ್ತು ದುರಭ್ಯಾಸಗಳಿಂದ ಮುಕ್ತವಾದ ಆರೋಗ್ಯಪೂರ್ಣ ವಾತಾವರಣ ನಿರ್ಮಾಣ ಮಾಡುವುದು ಸ್ವಾಸ್ಥ್ಯ ಸಂಕಲ್ಪ ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿದೆ.

ಮುಂಬರುವ ದಿನಗಳಲ್ಲಿ ಪ್ರಾದೇಶಿಕ ವ್ಯಾಪ್ತಿಗೆ ಬರುವ ಎಲ್ಲಾ ತಾಲ್ಲೂಕುಗಳ ಶಾಲಾ ಕಾಲೇಜುಗಳಲ್ಲಿ ಈ ಕಾರ್ಯಕ್ರಮವನ್ನು ಅತ್ಯಂತ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕೆಂದು ಕರೆ ನೀಡಿದರು. ಈ ಸಮಾರಂಭದಲ್ಲಿ ಕಲಬುರಗಿ ಪ್ರಾದೇಶಿಕ ನಿರ್ದೇಶಕರಾದ ಶ್ರೀ ದಿನೇಶ್ ಪೂಜಾರಿ, ಜನಜಾಗೃತಿ ವೇದಿಕೆ ಕಲಬುರಗಿಯ


ಉದಯವಾಹಿನಿ ಚಿತ್ರ

ಅಧ್ಯಕ್ಷರಾದ ಸಿ.ಎನ್. ಬಾಬಾಲ್ಗಾವ್, ಬೀದರ್ ಜಿಲ್ಲಾನಿರ್ದೇಶಕರಾದ ಮುರುಳಿಧರ್ ಹೆಚ್.ಎಲ್., ವಿಜಯಪುರ ಜಿಲ್ಲಾ ನಿರ್ದೇಶಕರಾದ ಮೋಹನ್ ನಾಯ್ಕ್, ಯಾದಗಿರಿ ಜಿಲ್ಲಾ ನಿರ್ದೇಶಕರಾದ ವಸಂತ್ ಗೌಡ ಬಿ. ಹಾಗೂ ಕಲಬುರಗಿ ಪ್ರಾದೇಶಿಕ ಕಚೇರಿಯ ಜನಜಾಗೃತಿ ವಿಭಾಗದ ಯೋಜನಾಧಿಕಾರಿ ರಾಜೇಶ್ ಕೆ, ಲಕ್ಷ್ಮೀಕಾಂತ ಕುಲಕರ್ಣಿ ಹೋತಿನಮಡು, ಬಸವರಾಜ, ಪ್ರತಿಮಾ, ಸುಮಂಗಲ,ಮಲ್ಲಿಕಾರ್ಜುನ ಸೇರಿದಂತೆ ತರಬೇತಿ ಕಾರ್ಯಗಾರದಲ್ಲಿ ಕಲಬುರಗಿ ಪ್ರಾದೇಶಿಕ ವ್ಯಾಪ್ತಿಗೆ ಒಳಪಡುವ ಬೀದರ್ ಕಲಬುರ್ಗಿ ಯಾದಗಿರಿ ಮತ್ತು ವಿಜಯಪುರ ಜಿಲ್ಲೆಗಳ ವಿವಿಧ ತಾಲ್ಲೂಕುಗಳಿಂದ ಆಗಮಿಸಿದ ತರಬೇತುದಾರರು ಭಾಗವಹಿಸಿ ತರಬೇತಿಯನ್ನು ಪಡೆದುಕೊಂಡರು.


# ಸಿಸಿಟಿ ಕಾಮಗಾರಿ ಪರಿಶೀಲಿಸಿದ ಸಚಿವ ಈಶ್ವರ ಬಿ.ಖಂಡ್ರೆ

• **ಉದಯವಾಹಿನಿ ಔರಾದ್**

ತಾಲ್ಲೂಕಿನ ಧೂಪತಮಹಾಗಾಂವ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ವಿಬಿಜಿ ರಾಮ್‌ಜಿ ಯೋಜನೆಯಡಿ ನಡೆಯುತ್ತಿರುವ ಸಿಸಿಟಿ(ಕಂಟೂರ್ ಟ್ರೆಂಚ್) ಕಾಮಗಾರಿ ಸ್ಥಳಕ್ಕೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ. ಖಂಡ್ರೆ ಅವರು ಭೇಟಿ ನೀಡಿ ಕಾಮಗಾರಿಯನ್ನು ಪರಿಶೀಲಿಸಿದರು.

ಈ ವೇಳೆ ಸಚಿವರು ಕಾಮಗಾರಿ ಸ್ಥಳದಲ್ಲಿದ್ದ ಕೂಲಿಕಾರ್ಮಿಕರೊಂದಿಗೆ ಕೆಲಕಾಲ ಸಂವಾದ ನಡೆಸಿ, ಸ್ವತಃ ಬುಟ್ಟಿಯಲ್ಲಿ ಮಣ್ಣು ಎತ್ತಿ ಹಾಕುವ ಮೂಲಕ ಕೂಲಿ ಕೆಲಸದಲ್ಲಿ ಭಾಗವಹಿಸಿದರು. ಬಳಿಕ ಕೂಲಿಕಾರ್ಮಿಕರೊಂದಿಗೆ ಸಂವಾದ ನಡೆಸಿದ ಸಚಿವರು, ವಿಬಿಜಿ ರಾಮ್‌ಜಿ ಯೋಜನೆಯಡಿ ಕೂಲಿಕಾರ್ಮಿಕರಿಗೆ ಹೆಚ್ಚಿನ ಉದ್ಯೋಗಾವಕಾಶ ಕಲ್ಪಿಸುವ ಉದ್ದೇಶದಿಂದ ಹಲವು ಮಹತ್ವದ ಬದಲಾವಣೆಗಳನ್ನು ಮಾಡಲಾಗಿದೆ ಎಂದು ತಿಳಿಸಿದರು.

ಈ ಹಿಂದೆ ದಿನಕ್ಕೆ ರೂ.370 ಇದ್ದ ಕೂಲಿ ಮೊತ್ತವನ್ನು ರೂ.382ಕ್ಕೆ ಹೆಚ್ಚಿಸಲಾಗಿದೆ. ಅಲ್ಲದೆ, ವಾರ್ಷಿಕ ಉದ್ಯೋಗದ ದಿನಗಳನ್ನು 100ರಿಂದ 125 ದಿನಗಳಿಗೆ ಹೆಚ್ಚಿಸಲಾಗಿದ್ದು, ಯೋಜನೆಯಡಿ ಕೈಗೊಳ್ಳಬಹುದಾದ ಕಾಮಗಾರಿಗಳ ಸಂಖ್ಯೆಯನ್ನು 318ಕ್ಕೆ ಹೆಚ್ಚಿಸಲಾಗಿದೆ. ಗ್ರಾಮೀಣ ಪ್ರದೇಶದ ಕೂಲಿಕಾರ್ಮಿಕರು ಯೋಜನೆಯ ಸೌಲಭ್ಯಗಳನ್ನು ಪಡೆದುಕೊಂಡು ತಮ್ಮ ಗ್ರಾಮದಲ್ಲಿಯೇ ಉದ್ಯೋಗ


ಉದಯವಾಹಿನಿ ಚಿತ್ರ

ಪಡೆದುಕೊಳ್ಳಬೇಕು ಎಂದು ಮಾಹಿತಿ ನೀಡಿದರು.

ಈ ಸಂಧರ್ಭದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಗಿರೀಶ್ ದಿಲೀಪ್ ಬದೋಲೆ, ತಹಸೀಲ್ದಾರ್ ಮಹೇಶ ಪಾಟೀಲ್, ಕಾರ್ಯದರ್ಶಿ(ಆಡಳಿತ) ಜೈಪ್ರಕಾಶ ಚವ್ಹಾಣ, ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಕಿರಣ ಪಾಟೀಲ್, ಸಹಾಯಕ ನಿರ್ದೇಶಕ (ಗ್ರಾ.ಉ) ಶಿವಕುಮಾರ್ ಘಾಟೆ, ಸಿಪಿಐ ರಘುವೀರಸಿಂಗ್ ಠಾಕೂರ್, ತಾಲ್ಲೂಕು ವೈದ್ಯಾಧಿಕಾರಿ ಡಾ. ಅನಿಲಕುಮಾರ ಎಕಲುರೆ, ಪಿಎಸ್ ಐ ದಿನೇಶ್, ಪಿಡಿಒ ನಂದಕುಮಾರ ಶಾಸ್ತ್ರಿ, ತಾಪಂ ಹಾಗೂ ಗ್ರಾಪಂ ಸಿಬ್ಬಂದಿಯವರು, ಸಾರ್ವಜನಿಕರು, ಕೂಲಿಕಾರ್ಮಿಕರು ಉಪಸ್ಥಿತರಿದ್ದರು.

# ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಯಾಗದಂತೆ ಕ್ರಮಕ್ಕೈಗೊಳ್ಳಿ:ಸಚಿವ ಈಶ್ವರ ಖಂಡ್ರೆ

• **ಉದಯವಾಹಿನಿ, ಬೀದರ, :**

ಜಿಲ್ಲೆಯಲ್ಲಿ ಎಲ್ಲಿಯೂ ಕುಡಿಯುವ ನೀರಿನ ಸಮಸ್ಯೆ ಕಂಡುಬಂದಲ್ಲಿ ಅಧಿಕಾರಿಗಳು 24 ಗಂಟೆಯೊಳಗಾಗಿ ಇತ್ಯರ್ಥಪಡಿಸಬೇಕೆಂದು ಗ್ರಾಮೀಣಾಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ ಅವರು ಅಧಿಕಾರಿಗಳಿಗೆ ಸೂಚಿಸಿದರು. ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಬರ ಪರಿಸ್ಥಿತಿ, ಕುಡಿಯುವ ನೀರು, ಇ-ಸ್ವತ್ತು ಹಾಗೂ ವಿ.ಬಿ.ಜಿ. ರಾಮ್ ಜೀ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಅಧಿಕಾರಿಗಳು ಪ್ರತಿಯೊಂದು ಗ್ರಾಮಕ್ಕೂ ಖುದ್ದಾಗಿ ಭೇಟಿ ನೀಡಿ, ಕುಡಿಯುವ ನೀರಿನ ಅಭಾವ ಎದುರಾಗದಂತೆ ಮುನ್ನೆಚ್ಚರಿಕೆ ವಹಿಸಬೇಕು. ನೀರು ಪೂರೈಕೆಯಂತಹ ಅತ್ಯಗತ್ಯ ಸೇವೆಯಲ್ಲಿ ಕರ್ತವ್ಯ ಲೋಪ ಎಸಗುವ ಅಧಿಕಾರಿಗಳು ಹಾಗೂ ಸಿಬ್ಬಂದಿಗಳ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳಲಾಗುವುದು ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದರು. ವಿ.ಬಿ.ಜಿ. ರಾಮ್ ಜೀ ಯೋಜನೆಯಡಿ ಗ್ರಾಮೀಣ ಭಾಗದ ಮೂಲಸೌಕರ್ಯ ಅಭಿವೃದ್ಧಿಗೆ ಆದ್ಯತೆ ನೀಡಲಾಗುತ್ತಿದ್ದು, ಸಾರ್ವಜನಿಕರಿಗೆ ಸ್ಥಳೀಯವಾಗಿಯೇ ಉದ್ಯೋಗ ಹಾಗೂ ಆರ್ಥಿಕ ಭದ್ರತೆ ಒದಗಿಸುವುದು ಈ ಯೋಜನೆಯ


ಉದಯವಾಹಿನಿ ಚಿತ್ರ

ಮುಖ್ಯ ಉದ್ದೇಶವಾಗಿದೆ. ಈ ಯೋಜನೆಯಡಿ ಗರಿಷ್ಠ ಪ್ರಮಾಣದಲ್ಲಿ ಕಾಮಗಾರಿಗಳನ್ನು ಸೃಜಿಸಬೇಕು ಮತ್ತು ಕೂಲಿ ಕಾರ್ಮಿಕರಿಗೆ ನಿಗದಿತ ಅವಧಿಯಲ್ಲಿ ವೇತನ ಪಾವತಿಸಬೇಕು. ಯಾವುದೇ ತರಹದ ಅಕ್ರಮಗಳಿಗೆ ಆಸ್ಪದ ನೀಡದೇ ನಿಗದಿತ ಸಮಯದಲ್ಲಿ ಗುಣಮಟ್ಟದೊಂದಿಗೆ ಕಾಮಗಾರಿ ಪೂರ್ಣಗೊಳಿಸಬೇಕು. ಬೀದರ ಜಿಲ್ಲೆಯು ಗಡಿಭಾಗದಲ್ಲಿರುವ ಕಾರಣ ಜಿಲ್ಲೆಯಿಂದ ಕೂಲಿ ಕಾರ್ಮಿಕರು ಕೆಲಸಕ್ಕಾಗಿ ನೆರೆ ರಾಜ್ಯಗಳಿಗೆ ವಲಸೆ ಹೋಗುವುದನ್ನು ತಡೆಯಲು ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕು ಎಂದು ಹೇಳಿದರು.

> **ಜಿಲ್ಲೆಯ ವಿವಿಧೆಡೆ ವಿದ್ಯುತ್ ತಂತಿಗಳು ಅಪಾಯಕಾರಿ ಹಂತದಲ್ಲಿದ್ದು, ಸರಣಿ ಅಪಘಾತ ಹಾಗೂ ಸಾವು-ನೋವುಗಳಿಗೆ ಕಾರಣವಾಗುತ್ತಿವೆ. ಈ ಕುರಿತು ತೀವ್ರ ಕಳವಳ ವ್ಯಕ್ತಪಡಿಸಿದ ಸಚಿವರು, ವಿದ್ಯುತ್ ಕಂಬ ಮತ್ತು ತಂತಿಗಳಿಂದ ಯಾವುದೇ ರೀತಿಯ ಅನಾಹುತ ಸಂಭವಿಸದಂತೆ ತಕ್ಷಣವೇ ಮುನ್ನೆಚ್ಚರಿಕಾ ಕ್ರಮ ಕೈಗೊಂಡು ಸಮಗ್ರ ವರದಿ ಸಲ್ಲಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.**
> -ಸಚಿವ ಈಶ್ವರ ಖಂಡ್ರೆ

# ಕಮಲನಗರ ತಾಲ್ಲೂಕು ಬರಪೀಡಿತ ಪಟ್ಟಿಗೆ ಸೇರಿಸಿ

• **ಉದಯವಾಹಿನಿ ಕಮಲನಗರ,:**

ತಾಲ್ಲೂಕಿನಲ್ಲಿ ಮುಂಗಾರು ಮಳೆ ಕೈಕೊಟ್ಟ ಪರಿಣಾಮ ತಾಲ್ಲೂಕಿನ ರೈತರು ಸಂಕಟಕ್ಕೆ ಸಿಲುಕಿದ್ದಾರೆ.ಹೀಗಾಗಿ ರೈತರ ವಿವಿಧ ಬೇಡಿಕೆಗಳಿಗೆ ಸ್ಪಂದಿಸಿ ಕರ್ನಾಟಕ ರಾಜ್ಯ ರೈತರ ಸಂಘದ, ಕಮಲನಗರ ತಾಲ್ಲೂಕ ಘಟಕದ ಅಧ್ಯಕ್ಷರಾದ ಪ್ರವೀಣ್ ಕುಲಕರ್ಣಿ ಅವರು ಕಮಲನಗರ್ ಪಟ್ಟಣದ ತಹಶೀಲ್ದಾರ್ ಕಚೇರಿಯಲ್ಲಿ ರೈತರ ಸಂಘ ಮತ್ತು ಹಸಿರು ಸೇನೆ ವತಿಯಿಂದ ತಹಶೀಲ್ದಾರ್ ಅಮಿತ್ ಕುಲಕರ್ಣಿ ಅವರ ಮೂಲಕ ಮುಖ್ಯಮಂತ್ರಿಯವರಿಗೆ ಮನವಿ ಸಲ್ಲಿಸಿ ಮಾತನಾಡಿದರು.

ಕರ್ನಾಟಕ ರಾಜ್ಯ ಸರ್ಕಾರವು ಪ್ರಸಕ್ತ 2026ರ ಮುಂಗಾರು ಹಂಗಾಮಿನ ಮಳೆ ಕೊರತೆ ಹಾಗೂ ವಿವಿಧ ವೈಜ್ಞಾನಿಕ ಮಾನದಂಡಗಳನ್ನು ಆಧರಿಸಿ ರಾಜ್ಯದ 101 ತಾಲ್ಲೂಕುಗಳನ್ನು ಬರಪೀಡಿತ ತಾಲ್ಲೂಕುಗಳೆಂದು ಘೋಷಿಣೆ ಮಾಡಿದೆ.

ಬೀದರ್ ಜಿಲ್ಲೆಯ ಬೀದರ್, ಬಸವಕಲ್ಯಾಣ, ಹುಮನಾಬಾದ್ ಮತ್ತು ಚಿಟಗುಪ್ಪ ತಾಲ್ಲೂಕುಗಳನ್ನು ಬರಪೀಡಿತ ಪಟ್ಟಿಗೆ ಸೇರಿ ಕೊಂಡಿರುತ್ತವೆ ಆದರೆ ಕಮಲನಗರ ತಾಲ್ಲೂಕನ್ನು ಪಟ್ಟಿಯಿಂದ ಕೈಬಿಡಲಾಗಿದೆ. ಕಮಲನಗರ ತಾಲ್ಲೂಕಿನ ಗ್ರಾಮೀಣ ಪ್ರದೇಶಗಳಲ್ಲಿ ರೈತರು ಮಳೆ ಕೊರತೆಯಿಂದ ಬೆಳೆಗಳ ಬೆಳವಣಿಗೆಯ ಮೇಲೆ ಪರಿಣಾಮ ಬೀರಿದರೂತೇವಾಂಶದ ಕೊರತೆ ಹಾಗೂ ಕೃಷಿ ಚಟುವಟಿಕೆಗಳಲ್ಲಿನ ಹಿನ್ನಡೆಯಿಂದ ತೀವ್ರ ಸಂಕಷ್ಟಕ್ಕೆ ಒಳಗಾಗಿದ್ದಾರೆ.ಕಮಲನಗರ ತಾಲ್ಲೂಕಿನ ವಾಸ್ತವಿಕ ಪರಿಸ್ಥಿತಿಯನ್ನು ಗ್ರಾಮ ಮಟ್ಟದಲ್ಲಿ ಪರಿಶೀಲಿಸಿದಾಗ ರೈತರಿಗೆ ಬರ ಪರಿಸ್ಥಿತಿಯ ಪರಿಣಾಮ ಸ್ಪಷ್ಟವಾಗಿ ತಮ್ಮಗೆ ಗೋಚರಿಸುತ್ತದೆ. ಆದ್ದರಿಂದ ಕೇವಲ ತಾಲ್ಲೂಕುವಾರು ಮಳೆಯ ಅಂಕಿ-ಅಂಶವನ್ನು ಆಧರಿಸಿ ಗ್ರಾಮವಾರು ಮಳೆ ಪ್ರಮಾಣ. ಬಿತ್ತನೆ ಪ್ರಮಾಣ. ಬೆಳೆಗಳ ಪ್ರಸ್ತುತ ಸ್ಥಿತಿ, ಮಣ್ಣಿನ ತೇವಾಂಶ, ಅಂತರ್ಜಲ ಮಟ್ಟ, ಕರೆ-ಕಟ್ಟೆಗಳ ನೀರಿನ ಲಭ್ಯತೆ ಮತ್ತು ಬೆಳೆ ಹಾನಿಯ ವಾಸ್ತವಿಕ ಪರಿಸ್ಥಿತಿಯನ್ನು ಮತ್ತೊಮ್ಮೆ ಪರಿಶೀಲಿಸಿ ಸಮೀಕ್ಷೆ ನಡೆಸಬೇಕು.

# ಗಾಜನೂರಿನ ಒಂದೇ ಜಾಗದಲ್ಲಿ ಎರಡು ಜಲಾಶಯ

## 1971ರ ಕೃಷ್ಣಾ ಜಲ ವಿವಾದ ತೀರ್ಪಿನಲ್ಲಿ ತುಂಗಾ ಜಲಾಶಯಕ್ಕೆ 12.24 ಟಿಎಂಸಿ ನೀರು ಹಂಚಿಕೆ ಮಾಡಲಾಗಿದೆ

• **ಉದಯವಾಹಿನಿ ಶಿವಮೊಗ್ಗ:**

ಶಿವಮೊಗ್ಗ ಮಹಾನಗರ ಪಾಲಿಕೆಗೆ ವರ್ಷ ಪೂರ್ತಿ ಕುಡಿಯುವ ನೀರು ಪೂರೈಕೆ ಮಾಡುವುದಲ್ಲದೆ ಸಾವಿರಾರು ಹೆಕ್ಟೇರ್ ಒಣ ಭೂಮಿಯನ್ನು ಹಸಿರಾಗಿಸಿದ ತುಂಗಾ ನದಿಯ ಏಕೈಕ ಜಲಾಶಯವೆಂದರೆ ಗಾಜನೂರು. ನಿರ್ಮಾಣವಾದ 50 ವರ್ಷದೊಳಗೆ ತುಂಗಾ ಮೇಲ್ದಂಡೆ ಯೋಜನೆ ಜಲಾಶಯದೊಳಗೆ ಮುಳುಗಡೆಯಾದ ಈ ಅಣೆಕಟ್ಟಿನ ಬಗ್ಗೆ

**1 : ತುಂಗಾ ಮೇಲ್ದಂಡೆ ಯೋಜನೆ**
**2 : ಮುಗಿಯದ ನಾಲೆ ಕಾಮಗಾರಿ**
**3 : ನಿರ್ಮಾಣ ವೆಚ್ಚ 3.31 ಕೋಟಿ**

ಯುವ ಪೀಳಿಗೆಗೆ ಗೊತ್ತಿಲ್ಲ. ಶಿವಮೊಗ್ಗ ನಗರದಿಂದ 12 ಕಿ.ಮಿ. ದೂರದಲ್ಲಿ ಗಾಜನೂರು ಬಳಿ ತೀರ್ಥಹಳ್ಳಿ ರಸ್ತೆ ಮಗ್ಗಲಲ್ಲೇ ಇರುವ ಜಲಾಶಯ ಒಂದು ಕಾಲದಲ್ಲಿ ಕೇವಲ ಕೃಷಿ ಉದ್ದೇಶಕ್ಕೆ ಸೀಮಿತವಾಗಿತ್ತು. ಆನಂತರದಲ್ಲಿ ಕುಡಿಯುವ ನೀರು ಮತ್ತು ವಿದ್ಯುತ್ ಉತ್ಪಾದನೆಗೂ ಬಳಕೆಯಾಗುತ್ತಿದೆ. ಚಿಕ್ಕಮಗಳೂರು ಜಿಲ್ಲೆ ಗಂಗಾಮೂಲದಲ್ಲಿ ಹುಟ್ಟಿ, ಶೃಂಗೇರಿ, ಕೊಪ್ಪ, ತೀರ್ಥಹಳ್ಳಿ ಮಾರ್ಗವಾಗಿ ಶಿವಮೊಗ್ಗದತ್ತ ಹರಿಯುವ ತುಂಗಾ ನದಿಯು ಕೂಡಲಿ ಬಳಿ ಭದ್ರಾ ನದಿ ಜತೆಗೆ ಸೇರಿ ತುಂಗಭದ್ರಾ ಆಗುತ್ತದೆ.

ಅದಕ್ಕೆ ಮುನ್ನ ಗಾಜನೂರು ಬಳಿ ಎರಡು ಗುಡ್ಡಗಳ ನಡುವೆ ಬ್ಯಾರೇಜ್ ಮಾದರಿಯ ಜಲಾಶಯ ನಿರ್ಮಿಸಲಾಗಿತ್ತು.


ಉದಯವಾಹಿನಿ ಚಿತ್ರ

ಆಹಾರ ಉತ್ಪಾದನೆಯಲ್ಲಿ ಸ್ವಾವಲಂಬನೆ ಸಾಧಿಸಲು ಹೆಚ್ಚಿನ ಆಹಾರ ಬೆಳೆಗಳನ್ನು ಬೆಳೆಯುವ ಸಲುವಾಗಿ ಬ್ರಿಟಿಷ್ ಆಡಳಿತವು 1942ರಲ್ಲಿ ತುಂಗಾ ನದಿಗೆ ಅಣೆಕಟ್ಟು ಕಟ್ಟುವ ಯೋಜನೆ ರೂಪಿಸಿತ್ತು. ಕಡೆಗೆ 70 ಲಕ್ಷ ರೂ. ವೆಚ್ಚದಲ್ಲಿ 1946ರಲ್ಲಿ ಕಾಮಗಾರಿ ಆರಂಭಿಸಿದರೂ ಸ್ವಾತಂತ್ರ್ಯ ಭಾರತ, ರಾಜ್ಯಗಳ ರಚನೆ ಕಾರಣದಿಂದಾಗಿ ಕಾಮಗಾರಿ ಕುಂಟುತ್ತಾ ಸಾಗಿ 1956ರಲ್ಲಿ ಪೂರ್ಣಗೊಂಡು ನಿರ್ಮಾಣ ವೆಚ್ಚ 3.31 ಕೋಟಿ ರೂ. ತಲುಪಿತ್ತು. 100ಕಿ.ಮೀ. ಉದ್ದದ ಎಡದಂಡೆ ನಾಲೆ 6,700 ಹೆಕ್ಟೇರ್ ಮತ್ತು 52 ಕಿ.ಮೀ. ಉದ್ದದ ಬಲದಂಡೆ ನಾಲೆ 2,100 ಹೆಕ್ಟೇರ್ ಪ್ರದೇಶಕ್ಕೆ ನೀರುಣಿಸುತ್ತವೆ.

ಶಿವಮೊಗ್ಗವು ತುಂಗಾ ನದಿಯ ದಡದಲ್ಲಿರುವುದರಿಂದ ನದಿಯಿಂದಲೆ ನೀರೆತ್ತಿ ನಗರಕ್ಕೆ ಕುಡಿಯುವ ನೀರು ಪೂರೈಕೆ ಮಾಡಲಾಗುತ್ತಿತ್ತು. ಆದರೆ, ನಗರದ ಬೆಳೆದಂತೆಲ್ಲ ನೀರಿನ ಬೇಡಿಕೆ ಹೆಚ್ಚಾಗಿದ್ದರಿಂದ ಮಾಜಿ ಸಿಎಂ ಎಸ್.ಬಂಗಾರಪ್ಪ ಅವರು ಮುಖ್ಯಮಂತ್ರಿಯಾಗಿದ್ದ ಸಂದರ್ಭ ಗಾಜನೂರು ಜಲಾಶಯದಿಂದ ಕುಡಿಯುವ ನೀರು ಪೂರೈಕೆ ಯೋಜನೆ ರೂಪಿಸಲಾಯಿತು.

ಯುಟಿಪಿ ಜಲಾಶಯ 2002-03ರಲ್ಲೇ ಪೂರ್ಣಗೊಂಡರೂ ಭೂಸ್ವಾಧೀನ ಮತ್ತು ಅರಣ್ಯ ಇಲಾಖೆ ಅನುಮತಿ ವಿಳಂಬ ಮತ್ತಿತರ ಕಾರಣಗಳಿಂದಾಗಿ ಮುಖ್ಯ ಕಾಲುವೆ ಕಾಮಗಾರಿ ವಿಳಂಬವಾಯಿತು. ಮೊದಲ ಹಂತದಲ್ಲಿ 156 ಕಿ.ಮೀ. ಕಾಮಗಾರಿ ಪೂರ್ಣಗೊಂಡು 2010 ಜುಲೈ 11ರಂದು ಅಧಿಕೃತವಾಗಿ ನಾಲೆಗೆ ನೀರು ಹರಿಸಲಾಯಿತು. ಮುಖ್ಯ ನಾಲೆಯನ್ನು 270 ಕಿ.ಮೀ. ನಿರ್ಮಿಸಿ 80,494 ಹೆಕ್ಟೇರ್‌ಗೆ ನೀರು ಹರಿಸುವುದು ಮುಖ್ಯ ಉದ್ದೇಶ. ಇದೂವರೆಗೆ 223 ಕಿ.ಮೀ. ಕಾಮಗಾರಿ ಪೂರ್ಣಗೊಂಡಿದ್ದು ಸುಮಾರು 23,690 ಹೆಕ್ಟೇರ್ ಪ್ರದೇಶಕ್ಕೆ ನೀರುಣಿಸಲಾಗುತ್ತಿದೆ. 1991ರಲ್ಲಿ 271.41 ಕೋಟಿ ರೂ. ಇದ್ದ ಯೋಜನೆ ವೆಚ್ಚ, ಕಾಮಗಾರಿ ಆರಂಭವಾಗುವ ಹೊತ್ತಿಗೆ 877.55 ಕೋಟಿ ರೂ. ಮತ್ತು ಪೂರ್ಣವಾಗುವ ಹೊತ್ತಿಗೆ 1,052 ಕೋಟಿ ರೂ. ತಲುಪಿತ್ತು. ನಾಲೆಗಳ ನಿರ್ಮಾಣ ಕಾಮಗಾರಿ ಈಗಲೂ ಪ್ರಗತಿಯಲ್ಲಿದ್ದು ಇದೂವರೆಗೆ 3,100 ಕೋಟಿ ರೂ. ದಾಟಿದೆ ಎಂದು ಸರಕಾರದ ದಾಖಲೆಗಳು ಹೇಳುತ್ತವೆ. ಅಣೆಕಟ್ಟೆ ಕೆಳಗೆ ಬೃಂದಾವನ್ ಹೈಡ್ರೋ ಪವರ್ ಪ್ರೈವೇಟ್ ಲಿಮಿಟೆಡ್ 3 ಘಟಕಗಳನ್ನು ಅಳವಡಿಸಿ ಮತ್ತು 24 ಮೆಗಾವ್ಯಾಟ್ ವಿದ್ಯುತ್ ಉತ್ಪಾದಿಸುತ್ತಿದೆ.

> **ಯೋಜನೆಗೆ ಸರಕಾರ 1991ರ ಅಕ್ಟೋಬರ್ 3ರಂದು ಆಡಳಿತಾತ್ಮಕ ಅನುಮೋದನೆ ನೀಡಿತು. ಹಳೇ ಜಲಾಶಯದ ತಾಂತ್ರಿಕ ಮಿತಿಗಳು, ಪ್ರವಾಹ ನಿರ್ವಹಣೆ ಮತ್ತು ಹೆಚ್ಚುವರಿ ನೀರಿನ ಸಂಗ್ರಹ ಅಗತ್ಯಗಳನ್ನು ಪರಿಗಣಿಸಿ 1999ರಲ್ಲಿ ಹಾಲಿ ಅಣೆಕಟ್ಟೆಯ 100 ಮೀ. ಮುಂಭಾಗದಲ್ಲಿ ತುಂಗಾ ಮೇಲ್ದಂಡೆ ಯೋಜನೆ ಅಣೆಕಟ್ಟು ನಿರ್ಮಿಸಲು ತೀರ್ಮಾನಿಸಲಾಯಿತು.**

> 1971ರ ಕೃಷ್ಣಾ ಜಲ ವಿವಾದ ತೀರ್ಪಿನಲ್ಲಿ ತುಂಗಾ ಜಲಾಶಯಕ್ಕೆ 12.24 ಟಿಎಂಸಿ ನೀರು ಹಂಚಿಕೆ ಮಾಡಲಾಗಿದೆ. ಈ ನೀರನ್ನು ಪೂರ್ಣ ಪ್ರಮಾಣದಲ್ಲಿ ಬಳಸಿಕೊಳ್ಳುವ ಸಲುವಾಗಿ 1970 ದಶಕದಲ್ಲೇ ಜಲಾಶಯವನ್ನು ಎತ್ತರಿಸಿ ಶಿವಮೊಗ್ಗ, ದಾವಣಗೆರೆ ಮತ್ತು ಹಾವೇರಿ ಜಿಲ್ಲೆಗಳ ಬರಪೀಡಿತ ತಾಲ್ಲೂಕುಗಳಿಗೆ ನೀರು ಹರಿಸುವ ಯೋಜನೆ ರೂಪಿಸಲಾಗಿತ್ತು.

## ಮಿನಿ ನ್ಯೂಸ್

### ಅಪಹರಣಕ್ಕೊಳಗಾದ ಕಾಣೆಯಾದ ಮಕ್ಕಳ ದೂರುಗಳ ಪರಿಶೀಲನಾ ಸಭೆ


ಉದಯವಾಹಿನಿ ಚಿತ್ರ

• **ಉದಯವಾಹಿನಿ ಬಳ್ಳಾರಿ, :**

ನಾಪತ್ತೆಯಾದ ಮಕ್ಕಳ ಪತ್ತೆ ಮಾಡಲು, ಶಾಲೆಯಿಂದ ಹೊರಗುಳಿದವರನ್ನು ಮರಳಿ ಶಾಲೆಗೆ ಸೇರಿಸುವುದು, ಭಿಕ್ಷಾಟಣೆಯಿಂದ. ಬಾಲ್ಯ ವಿವಾಹಗಳಿಂದ ಮಕ್ಕಳ ರಕ್ಷಣೆ, ಬಾಲ್ಯ ವಿವಾಹಗಳು ತಡೆಯಲು ಕೈಗೊಳ್ಳಬೇಕಾದ ಜಾಗೃತಿ ಕ್ರಮಗಳು, ಬೇರೆ ರಾಜ್ಯಗಳ ಕಾರ್ಮಿಕರ ಮಕ್ಕಳು ಬಾಲ ಕಾರ್ಮಿಕರಾಗಿ ದುಡಿಯುತ್ತಿರುವವರನ್ನು ಗುರುತಿಸಿ, ಬಾಲ ಕಾರ್ಮಿಕರನ್ನು ದುಡಿಸಿ ಕೊಳ್ಳುವವರ ವಿರುದ್ಧ ಕಾನೂನಾತ್ಮಕ ಕ್ರಮಗಳು, ಜಿಲ್ಲೆಯಲ್ಲಿ ಅಕ್ಕ ಪಡೆಯ ಕಾರ್ಯನಿರ್ವಹಣೆ, ಶಾಲಾ-ಕಾಲೇಜು. ಸಾರ್ವಜನಿಕ ಮತ್ತು ಖಾಸಗಿ ಸ್ಥಳಗಳಿಗೆ ಮಹಿಳೆ ಮತ್ತು ಮಕ್ಕಳ ರಕ್ಷಣೆ ಸಂಬಂಧಿಸಿದಂತೆ ಇಲ್ಲಿಯವರೆಗೆ ಭೇಟಿ ನೀಡಿದ ವಿವರ, ಮುಂದಿನ ದಿನಗಳಲ್ಲಿ ವಸತಿ ನಿಲಯ, ಕೊಳಚೆ ಪ್ರದೇಶಗಳಿಗೆ ಭೇಟಿ, ಜಾಗೃತಿಗೆ ಸೂಚನೆ. ಆರ್.ಸಿ.ಹೆಚ್. ಪೋರ್ಟಲ್ನಲ್ಲಿ ದಾಖಲಾಗುವ ಬಾಲ ಗರ್ಭಿಣಿ ಪ್ರಕರಣಗಳ ಮುಂದಿನ ಕಾನೂನಾತ್ಮಕ ಕ್ರಮಗಳು, ಬೀಟ್ ಪೊಲೀಸ್ ಸಿಬ್ಬಂದಿಯ ಕೊಳಚೆ ಪ್ರದೇಶಗಳಿಗೆ ಭೇಟಿ ನೀಡಲು ಸೂಚನೆ, ಮಾದಕ ವಸ್ತುಗಳ ದುಷ್ಪರಿಣಾಮಗಳ ಕುರಿತು ಜಾಗೃತಿ ಸೇರಿದಂತೆ ಜಿಲ್ಲಾ ಪೊಲೀಸ್ ಕಛೇರಿಯಲ್ಲಿ ಅಪಹರಣಕ್ಕೊಳಗಾದ ಮತ್ತು ಕಾಣೆಯಾದ ಮಕ್ಕಳ ಕುರಿತು ದಾಖಲಾದ ದೂರುಗಳ ಪರಿಶೀಲನಾ ಜಿಲ್ಲಾ ಮಟ್ಟದ ಕಾರ್ಯ ಪಡೆಯ ಸಭೆ ನಡೆಯಿತು.

ಎಸ್ಪಿ ಡಾ. ಸುಮನ್ ಡಿ.ಪೆನ್ನೇಕರ್.ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿ ರಾಜೇಶ್ ಎನ್. ಹೊಸಮನೆ, ಎಎಸ್ಪಿ ನವೀನ್ ಕುಮಾರ್ ಎನ್., ಮಕ್ಕಳ ಕಲ್ಯಾಣ ಸಮಿತಿಯ

### ರೆಡ್ಡಿ ಹೇಳಿಕೆ ಪ್ರಜಾಪ್ರಭುತ್ವಕ್ಕೆ ಮಾಡಿದ ಅವಮಾನ: ಟಪಾಲ್

• **ಉದಯವಾಹಿನಿ ಬಳ್ಳಾರಿ, :**

ಓಬಳಾಪುರಂ ಮೈನಿಂಗ್ ಕಂಪನಿ ಅಕ್ರಮ ಗಣಿಗಾರಿಕೆ ಪ್ರಕರಣದಲ್ಲಿ ಶಿಕ್ಷೆಗೆ ಗುರಿಯಾಗಿರುವ ಮಾಜಿ ಸಚಿವ ಹಾಗೂ ಗಂಗಾವತಿ ಕ ಶಾಸಕ ಗಾಲಿ ಜನಾರ್ದನ ರೆಡ್ಡಿ ಮಾಧ್ಯಮಗಳಿಗೆ ಹೇಳಿಕೆ ನೀಡುತ್ತಿರುವುದು ಪ್ರಜಾಪ್ರಭುತ್ವಕ್ಕೆ ಮಾಡಿದ ದೊಡ್ಡ ಅವಮಾನ ಎಂದು ಗಣಿ ಉದ್ಯಮಿ ಟಪಾಲ್ ಗಣೇಶ್ ಹೇಳಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಗಣೇಶ್ ಅವರು. ಜನಾರ್ಧನರೆಡ್ಡಿ ಅವರನ್ನು ಸಿಬಿಐ ವಿಶೇಷ ನ್ಯಾಯಾಲಯವು ತಪ್ಪಿತಸ್ಥರೆಂದು ತೀರ್ಪು ನೀಡಿದೆ. ಕಾನೂನಿನ ಮುಂದೆ ತಪ್ಪಿತಸ್ಥರೆಂದು ಸಾಬೀತಾಗಿರುವ ವ್ಯಕ್ತಿಗೆ ಸಾರ್ವಜನಿಕ ವೇದಿಕೆಯ ಮುಂದೆ ಅಥವಾ ಮಾಧ್ಯಮಗಳ ಎದುರು ಮಾತನಾಡುವ ಯಾವುದೇ ನೈತಿಕ ಹಕ್ಕು ಇಲ್ಲ.ಜನರ ಹಣವನ್ನು ಲೂಟಿ ಮಾಡಿ, ಅರಣ್ಯ ಮತ್ತು ನೈಸರ್ಗಿಕ ಸಂಪತ್ತನ್ನು ನಾಶ ಮಾಡಿದ ಪ್ರಕರಣದಲ್ಲಿ ತೀರ್ಪು ಬಂದ ನಂತರವೂ ರಾಜಕೀಯ ನಾಯಕರು ಅವರಿಗೆ ರಕ್ಷಣೆ ನೀಡುವುದು ಮತ್ತು ಪತ್ರಿಕಾಗೋಷ್ಠಿಗಳಲ್ಲಿ ಹೇಳಿಕೆ ನೀಡುವುದು ಪ್ರಜಾಪ್ರಭುತ್ವಕ್ಕೆ ಮಾಡಿದ ದೊಡ್ಡ ಅವಮಾನವಾಗಿದೆಂದರು.

### ಆರೋಗ್ಯಕರ ದೇಹ, ಮನಸ್ಸಿಗೆ ಕ್ರೀಡೆ ಅಗತ್ಯ

• **ಉದಯವಾಹಿನಿ ವಿಜಯಪುರ:**

ಕ್ರೀಡೆ ಹಾಗೂ ವ್ಯಾಯಾಮ ದೇಹವನ್ನು ಸದೃಢವಾಗಿಸುವುದರ ಜೊತೆಗೆ ಮನಸ್ಸನ್ನು ಸಕ್ರಿಯವಾಗಿರಿಸುತ್ತವೆ. ಆರೋಗ್ಯಕರ ದೇಹವು ಆರೋಗ್ಯಕರ ಮನಸ್ಸಿಗೆ ಕಾರಣವಾಗುತ್ತದೆ ಎಂದು ಅಧ್ಯಕ್ಷ ಡಾ. ಜಾವಿದ ಜಮಾದಾರ ಹೇಳಿದರು. ನಗರದ ಡಾ. ಬಿ.ಆರ್. ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ವಿವಿಧ ಕ್ರೀಡಾ ಸಂಸ್ಥೆಗಳ ಸಹಯೋಗದಲ್ಲಿ ಆಯೋಜಿಸಿದ್ದ ರಾಷ್ಟ್ರೀಯ ಕ್ರೀಡಾ ದಿನಾಚರಣೆ ಉದ್ಘಾಟಿಸಿ ಅವರು ಮಾತನಾಡಿದರು.

ಕ್ರೀಡೆಗಳು ತಂಡದ ಕೆಲಸ, ಶಿಸ್ತು, ತಾಳ್ಮೆ ಹಾಗೂ ಗೆಲುವು-ಸೋಲನ್ನು ಸಮಚಿತ್ತದಿಂದ ಸ್ವೀಕರಿಸುವ ಮನೋಭಾವ ಕಲಿಸುತ್ತವೆ. ಸದೃಢ ಆರೋಗ್ಯ ಹಾಗೂ ರೋಗಮುಕ್ತ ಜೀವನಕ್ಕಾಗಿ ಕ್ರೀಡೆಯನ್ನು ಸಕ್ರಿಯ ಜೀವನಶೈಲಿಯ ಭಾಗವಾಗಿಸಿಕೊಳ್ಳಬೇಕು ಎಂದರು.

ಎಸ್.ಕೆ. ಇನಾಮದಾರ ಮಾತನಾಡಿ, ಹಾಕಿಯ ಮಾಂತ್ರಿಕ ಮೇಜರ್ ಧ್ಯಾನಚಂದ ಅವರ ಸಾಧನೆ ಇಂದಿಗೂ ಯುವ ಕ್ರೀಡಾಪಟುಗಳಿಗೆ ಸ್ಫೂರ್ತಿಯಾಗಿದೆ ಎಂದರು. ಭೀಮಸೇನ ಕೊಕರೆ ಮಾತನಾಡಿ, ವಿಜಯಪುರದಲ್ಲಿ ಸರ್ಕಾರ ಮೀಸಲಿಟ್ಟಿರುವ 200 ಎಕರೆ ಪ್ರದೇಶದಲ್ಲಿ ಬೃಹತ್ ಕ್ರೀಡಾ ಸಂಕೀರ್ಣ ನಿರ್ಮಿಸಿ ಎಲ್ಲಾ ಕ್ರೀಡೆಗಳಿಗೆ ಹೆಚ್ಚಿನ ಪ್ರೋತ್ಸಾಹ ನೀಡಬೇಕು ಎಂದು ಹೇಳಿದರು. ವಿವಿಧ ಕ್ರೀಡೆಗಳಲ್ಲಿ ವಿಜೇತರಾದ ವಿದ್ಯಾರ್ಥಿ-ವಿದ್ಯಾರ್ಥಿನಿಯರಿಗೆ ಬಹುಮಾನಗಳನ್ನು ವಿತರಿಸಿ ಗೌರವಿಸಲಾಯಿತು.

### ಜ್ಞಾನಯೋಗಿ ಸಿದ್ದೇಶ್ವರ ಶ್ರೀಗಳ ಇಂಗ್ಲಿಷ್ ಪ್ರವಚನಗಳ ‘ರಿಯಲೈಸೇಷನ್ ಆಫ್ ದಸೆಲ್ಫ್’ ಕೃತಿ

• **ಉದಯವಾಹಿನಿ ವಿಜಯಪುರ, :**

ಜ್ಞಾನಯೋಗಿ ಸಿದ್ದೇಶ್ವರ ಶ್ರೀಗಳು ಇಂಗ್ಲಿಷ್‌ನಲ್ಲಿ ನೀಡಿರುವ ಪ್ರವಚನಗಳ ಸಂಗ್ರಹವಾದ ‘ರಿಯಲೈಸೇಷನ್ ಆಫ್ ದ ಸೆಲ್ಫ್’ ಕೃತಿಯನ್ನು ಲೇಖಕ ಎಂ. ಎಸ್. ಚಾಂದಕವಟೆ ಅವರು ಕೈಗಾರಿಕೆ, ಮೂಲಸೌಲಭ್ಯ ಹಾಗೂ ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಅವರಿಗೆ ನಗರದ ಗೃಹ ಕಚೇರಿಯಲ್ಲಿ ಹಸ್ತಾಂತರಿಸಿದರು.

ಬೆಂಗಳೂರಿನ ಭಾರತೀಯ ವಿದ್ಯಾ ಭವನದ ಗಾಂಧಿ ಸೆಂಟರ್ ಆಫ್ ಸಾಯಿನ್ಸ್ ಅಂಡ್ ಹ್ಯೂಮನ್ ವ್ಯಾಲ್ಯುಸ್ ಸಂಸ್ಥೆ ಪ್ರಕಟಿಸಿರುವ ಈ ಕೃತಿ ಆ.17ರಂದು ಧಾರವಾಡದ ಕರ್ನಾಟಕ ವಿದ್ಯಾವರ್ಧಕ ಸಂಘದಲ್ಲಿ ಬಿಡುಗಡೆಯಾಗಿತ್ತು. ಸಿದ್ದೇಶ್ವರ ಶ್ರೀಗಳ ಪ್ರವಚನಗಳ ಕನ್ನಡ ಕೃತಿಗಳು ಹಾಗೂ ವಿವಿಧ ಭಾಷಾಂತರಗಳು ಸಾಕಷ್ಟು ಸಂಖ್ಯೆಯಲ್ಲಿದ್ದರೂ, ಶ್ರೀಗಳು ಇಂಗ್ಲಿಷ್‌ನಲ್ಲಿ ನೀಡಿದ ಪ್ರವಚನಗಳ ಸಮಗ್ರ ಸಂಗ್ರಹ ಕೃತಿಯಾಗಿ ಪ್ರಕಟವಾಗಿರುವುದು ಇದೇ ಮೊದಲು ಎಂದು ಲೇಖಕ ಎಂ. ಎಸ್. ಚಾಂದಕವಟೆ ಅವರು ಸಚಿವರಿಗೆ ವಿವರಿಸಿದರು. ವಿಜಯಪುರದ ಜ್ಞಾನಯೋಗಾಶ್ರಮದಲ್ಲಿದ್ದ ಸಂದರ್ಭದಲ್ಲಿ ಸಿದ್ದೇಶ್ವರ ಶ್ರೀ ಗಳು ಪ್ರತಿ ಭಾನುವಾರ ಇಂಗ್ಲಿಷ್‌ನಲ್ಲಿ ಪ್ರವಚನ ನೀಡುತ್ತಿದ್ದರು.

ಶ್ರೀಗಳಿಗೆ ಇಂಗ್ಲಿಷ್ ಭಾಷೆಯ ಮೇಲೂ ಉತ್ತಮ ಪ್ರಭುತ್ವವಿತ್ತು. ಅವರ ಚಿಂತನೆಗಳನ್ನು ದೇಶ-ವಿದೇಶಗಳಲ್ಲಿ ಮತ್ತಷ್ಟು ಪರಿಚಯಿಸುವ ಉದ್ದೇಶದಿಂದ ಅಭಿಮಾನದಿಂದ ಈ ಕೃತಿಯನ್ನು ಸಂಗ್ರಹಿಸಿ ರೂಪಿಸಿರುವುದಾಗಿ ಚಾಂದಕವಟೆ ತಿಳಿಸಿದರು.

ಇದೇ ವೇಳೆ ಆಯ್ದ ಪ್ರವಚನಗಳನ್ನೊಳಗೊಂಡ ‘ಸಾಧಕರ ಜೀವನ ಪ್ರಸಂಗಗಳು’ ಹಾಗೂ ಬುದ್ಧನ ಕುರಿತು ಸಿದ್ದೇಶ್ವರ ಶ್ರೀಗಳು ನೀಡಿರುವ ವಿಚಾರಗಳ ಸಂಕಲನವಾದ ‘ಬುದ್ಧನ ನೆನಹುಗಳು’ ಕೃತಿಗಳನ್ನೂ ಸಚಿವರಿಗೆ ಹಸ್ತಾಂತರಿಸಲಾಯಿತು. ಸಂತಸದಿಂದ ಕೃತಿಗಳನ್ನು ಸ್ವೀಕರಿಸಿದ ಸಚಿವ ಎಂ. ಬಿ. ಪಾಟೀಲ ಅವರು ಲೇಖಕ ಚಾಂದಕವಟೆ ಅವರನ್ನು ಅಭಿನಂದಿಸಿದರು.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 07:30 ರಿಂದ 09:00 |
| ಗುಳಿಕ ಕಾಲ | ಮಧ್ಯಾಹ್ನ | 01:30 ರಿಂದ 03:00 |
| ಯಮಗಂಡ ಕಾಲ | ಬೆಳಿಗ್ಗೆ | 10:30 ರಿಂದ 12:00 |

**ಮೇಷ** ನಿಮ್ಮ ಅಸೂಯೆ ವರ್ತನೆ ನಿಮ್ಮನ್ನು ದುಃಖಿಗಳಾಗಿಯೂ ಮತ್ತು ಖಿನ್ನರಾಗಿಯೂ ಮಾಡಬಹುದು. ಆದರೆ ಇದು ಒಂದು ಸ್ವಯಂಕೃತ ಗಾಯವಾಗಿರುವುದರಿಂದ ಇದರ ಬಗ್ಗೆ ಪ್ರಲಾಪಿಸುವ ಅಗತ್ಯವಿಲ್ಲ. ಇತರರ ಸಂತೋಷ ಮತ್ತು ಅತೃಪ್ತಿಯನ್ನು ಹಂಚಿಕೊಳ್ಳುವ ಮೂಲಕ ಇದನ್ನು ತೊಡೆದುಹಾಕಲು ಪಣತೊಡಿ.

**ವೃಷಭ** ಆರೋಗ್ಯ ವಿಷಯಗಳಲ್ಲಿ ನಿಮ್ಮ ಬಗ್ಗೆ ನೀವೇ ನಿರ್ಲಕ್ಷ್ಯ ಮಾಡದಂತೆ ಎಚ್ಚರಿಕೆ ವಹಿಸಿ. ಇಂದಿನ ದಿನ, ನಿಮ್ಮ ಬಳಿ ಸಾಲವನ್ನು ಕೇಳುವ ಮತ್ತು ಅದನ್ನು ಹಿಂತಿರುಗಿಸದೆ ಇರುವಂತಹ ಸ್ನೇಹಿತರಿಂದ ನೀವು ನಿಮ್ಮನ್ನು ತಪ್ಪಿಸುವ ಅಗತ್ಯವಿದೆ. ಯುವಕರನ್ನು ಹೊಂದಿರುವ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ಒಳ್ಳೆಯ ಸಮಯ.

**ಮಿಥುನ** ದುಃಖಿತರಾಗಿ ಮತ್ತು ಖಿನ್ನರಾಗಿರಬೇಡಿ. ನೀವು ಸಾಲ ತೆಗೆದುಕೊಳ್ಳಲು ಹೊರಟಿದ್ದರೆ ಮತ್ತು ಈ ಕೆಲಸದಲ್ಲಿ ದೀರ್ಘಕಾಲ ತೊಡಗಿಸಿಕೊಂಡಿದ್ದರೆ, ಇಂದು ನೀವು ಸಾಲ ಪಡೆಯಬಹುದು. ನಿಮ್ಮ ಕುಟುಂಬ ಸದಸ್ಯರೆಡೆಗೆ ನಿಮ್ಮ ಸರ್ವಾಧಿಕಾರಿ ಧೋರಣೆ ಕೇವಲ ಅನುಪಯುಕ್ತ ವಾದಗಳನ್ನು ಪ್ರಾರಂಭಿಸುತ್ತದೆ.

**ಕಟಕ** ಪ್ರಣಯ ಉಂಟಾಗುವ ಸಾಧ್ಯತೆಯಿದ್ದರೂ ಇಂದ್ರಿಯದ ಭಾವನೆಗಳು ನಿಮ್ಮ ಸಂಬಂಧವನ್ನು ಹಾಳು ಮಾಡಬಹುದು. ಕೆಲಸದಲ್ಲಿ ನಿಮ್ಮ ಜೊತೆ ಅತ್ಯಂತ ಕಡಿಮೆ ಹೊಂದಿಕೊಳ್ಳುವವರು ನಿಮ್ಮ ಜೊತೆ ಚೆನ್ನಾಗಿ ಮಾತನಾಡುತ್ತಾರೆ. ಮೊಬೈಲ್ ಅನ್ನು ಚಲಾಯಿಸುತ್ತಾ ನಿಮಗೆ ಸಮಯದ ಬಗ್ಗೆ ತಿಳಿಯುವುದಿಲ್ಲ.

**ಸಿಂಹ** ನೀವು ಇಂದು ಗಣನೀಯ ಪ್ರಮಾಣದ ಹಣವನ್ನು ಸಹ ಹೊಂದಿರುತ್ತೀರಿ ಮತ್ತು ಅದರೊಂದಿಗೆ ಮನಸ್ಸಿನ ಶಾಂತಿ ಇರುತ್ತದೆ. ಮನೆಯ ಕೆಲಸ ಸುಸ್ತು ಮಾಡುತ್ತದೆ ಮತ್ತು ನಿಮ್ಮನ್ನು ಮಾನಸಿಕ ಒತ್ತಡದಲ್ಲಿರಿಸುತ್ತದೆ. ಪ್ರಣಯದ ಬಂಧಗಳು ನಿಮ್ಮ ಸಂತೋಷವನ್ನು ಆಸಕ್ತಿಕರವಾಗಿಸುತ್ತವೆ.

**ಕನ್ಯಾ** ನಿಮ್ಮ ದೀರ್ಘಕಾಲೀನ ಅನಾರೋಗ್ಯದ ಜೊತೆ ಹೋರಾಡುವಾಗ ಆತ್ಮವಿಶ್ವಾಸ ಶೌರ್ಯದ ಮೂಲವೆಂದು ತಿಳಿದಿರಿ. ಇಂದು ನೀವು ಭೂಮಿ, ವಸತಿ, ಅಥವಾ ಸಾಂಸ್ಕೃತಿಕ ಯೋಜನೆಗಳಿಗೆ ಸಂಬಂಧಿಸಿದ ಸಮಸ್ಯೆಗಳಿಗೆ ಗಮನ ನೀಡಬೇಕು. ನಿಮ್ಮ ಜೀವನ ಸಂಗಾತಿಯ ನಿರ್ಲಕ್ಷತೆ ಸಂಬಂಧವನ್ನು ಹಾಳು ಮಾಡಬಹುದು.

**ತುಲಾ** ಕೆಲವರು ನಿಮಗೆ ಏನನ್ನಾದರೂ ಕಲಿಯಲು ಬಹಳ ವಯಸ್ಸಾಗಿದೆಯೆಂದು ಭಾವಿಸಬಹುದು ಅದು ನಿಜವಲ್ಲ ನಿಮ್ಮ ಪ್ರಖರ ಸಕ್ರಿಯ ಮನಸ್ಸಿನಿಂದ ನೀವು ಹೊಸ ವಿಷಯಗಳನ್ನು ಸುಲಭವಾಗಿ ಕಲಿಯುವಿರಿ. ವಿದೇಶದಲ್ಲಿ ವ್ಯಾಪಾರ ಮಾಡುವ ಈ ರಾಶಿಚಕ್ರದ ಜನರಿಗೆ ಸಾಕಷ್ಟು ಹಣದ ಲಾಭವನ್ನು ಪಡೆಯಬಹುದು.

**ವೃಶ್ಚಿಕ** ನೀವು ವಿರಾಮದ ಸಂತೋಷವನ್ನು ಅನುಭವಿಸಲಿದ್ದೀರಿ. ಭವಿಷ್ಯದಲ್ಲಿ ನೀವು ಆರ್ಥಿಕವಾಗಿ ಬಲವಾಗಿರಬೇಕೆಂದು ಬಯಸಿದರೆ ಹಣವನ್ನು ಉಳಿಸಿ. ಕುಟುಂಬದ ಸದಸ್ಯರೊಂದಿಗೆ ಕೆಲವು ವಿಶ್ರಾಂತಿಯ ಕ್ಷಣಗಳನ್ನು ಕಳೆಯಿರಿ. ಪ್ರಣಯ ರೋಮಾಂಚಕಾರಿಯಾಗಿರುತ್ತದೆ ನೀವು ಪ್ರೀತಿಸುವವರನ್ನು ಸಂಪರ್ಕಿಸಿ.

**ಧನಸ್ಸು** ಒಬ್ಬ ಸಂತನ ಆಶೀರ್ವಾದದಿಂದ ಮನಶ್ಶಾಂತಿ. ನೀವು ವಿಪರೀತವಾಗಿ ಖರ್ಚು ಮಾಡುವುದನ್ನು ನಿಲ್ಲಿಸಿದಾಗ ಮಾತ್ರ ನಿಮ್ಮ ಹಣವು ನಿಮ್ಮ ಕೆಲಸಕ್ಕೆ ಬರುತ್ತದೆ, ಇಂದು ನೀವು ಈ ವಿಷಯವನ್ನು ಚೆನ್ನಾಗಿ ಅರ್ಥಮಾಡಿಕೊಳ್ಳಬಹುದು. ಕುಟುಂಬದ ಸದಸ್ಯರ ಖುಷಿಯ ಸ್ವಭಾವ ಮನೆಯಲ್ಲಿನ ವಾತಾವರಣವನ್ನು ಹಗುರಗೊಳಿಸುತ್ತದೆ.

**ಮಕರ** ಕಿರಿಕಿರಿ ನಿಮ್ಮ ಮಾನಸಿಕ ಶಾಂತಿಗೆ ತೊಂದರೆ ತಂದರೂ ಒಬ್ಬ ಸ್ನೇಹಿತರು ನಿಮ್ಮ ಸಮಸ್ಯೆಗಳನ್ನು ಪರಿಹರಿಸುವಲ್ಲಿ ಅಪಾರವಾದ ಸಹಾಯ ಮಾಡುತ್ತಾರೆ. ಒತ್ತಡ ತೊಡೆದುಹಾಕಲು ಹಿತವಾದ ಸಂಗೀತವನ್ನು ಆಲಿಸಿ. ಆಲ್ಕೋಹಾಲ್ ಸಿಗರೇಟ್ ಮುಂತಾದವುಗಳಿಗೆ ಹಣವನ್ನು ಖರ್ಚು ಮಾಡಬಾರದು.

**ಕುಂಭ** ಇಂದು ಮನೆಯ ಯಾವುದೇ ಎಲೆಕ್ಟ್ರಾನಿಕ್ ಸರಕುಗಳ ಕೆಟ್ಟು ಹೋಗುವ ಕಾರಣದಿಂದಾಗಿ ನಿಮ್ಮ ಹಣ ಖರ್ಚಾಗಬಹುದು. ಕುಟುಂಬದ ಸದಸ್ಯರ ಅಗತ್ಯಗಳಿಗೆ ಆದ್ಯತೆ ನೀಡಿ. ನೀವು ಅವರ ಸಲುವಾಗಿ ಕಾಳಜಿ ತೆಗೆದುಕೊಳ್ಳುತ್ತೀರೆಂದು ಅವರಿಗೆ ಅರ್ಥವಾಗುವ ಹಾಗೆ ಅವರ ಸಂತೋಷವನ್ನು ಹಂಚಿಕೊಳ್ಳಿ.

**ಮೀನ** ಕಣ್ಣಿನ ಪೊರೆ ರೋಗಿಗಳಿಗೆ ಧೂಮಪಾನವು ಅವರ ಕಣ್ಣುಗಳಿಗೆ ಮತ್ತಷ್ಟು ಹಾನಿಯುಂಟುಮಾಡಬಹುದಾದ್ದರಿಂದ ಕಲುಷಿತ ಪರಿಸರದಲ್ಲಿ ಹೋಗಬಾರದು. ಸಾಧ್ಯವಾದರೆ ಸೂರ್ಯನ ಬೆಳಕಿಗೆ ಅತಿಯಾದ ಒಡ್ಡಿಕೊಳ್ಳುವಿಕೆಯನ್ನು ತಪ್ಪಿಸಿ. ಇಂದು ವ್ಯಾಪಾರದಲ್ಲಿ ಉತ್ತಮ ಲಾಭವನ್ನು ಗಳಿಸುವ ಸಾಧ್ಯತೆ ಇದೆ.

# ಹಾಸನದಲ್ಲಿ ಜಿಲ್ಲಾಧಿಕಾರಿ ದಬ್ಬಾಳಿಕೆ: ಅಧಿಕಾರಿಗಳು ಕೆಲಸ ಮಾಡುವುದಕ್ಕೆಆಗ್ತಿಲ್ಲ :ಹೆಚ್ ಡಿ ರೇವಣ್ಣ

**• ಉದಯವಾಹಿನಿ ಹಾಸನ:**

ಇತ್ತೀಚಿಗೆ ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಅವರನ್ನು ಎಲ್ಲಿಂದ ಹಿಡಿದುಕೊಂಡು ಬಂದು ಹಾಸನಕ್ಕೆ ಡಿಸಿ ಮಾಡಿದರು ಎಂದು ಏಕವಚನದಲ್ಲಿ ಮಾತನಾಡಿದ್ದ ಶಾಸಕ ಹೆಚ್.ಡಿ. ರೇವಣ್ಣ ಶನಿವಾರ ಮತ್ತೆ ಕಿಡಿಕಾರಿದ್ದಾರೆ. ಜಿಲ್ಲಾಧಿಕಾರಿ ದಬ್ಬಾಳಿಕೆ ಮಾಡಲಿ ಯಾವ ರೀತಿ ರಿಪೇರಿ ಮಾಡಬೇಕು ಗೊತ್ತಿದೆ ಎಂದು ಹೇಳಿದ್ದಾರೆ.

ಸುದ್ದಿಗೋಷ್ಠಿ ವೇಳೆ ಗ್ರಾಮ ಪಂಚಾಯ್ತಿ ಚುನಾವಣೆಗೆ ಮೀಸಲು ನಿಗದಿ ವಿಚಾರಕ್ಕೆ ಪ್ರತಿಕ್ರಿಯಿಸಿದ ಹೆಚ್. ಡಿ. ರೇವಣ್ಣ, ಮೀಸಲು ನಿಗದಿ ಸಂಬಂಧ ಜಿಲ್ಲಾಧಿಕಾರಿ ಯಾಕೆ ತಹಸೀಲ್ದಾರ್‌ಗೆ ಪತ್ರ ಬರೆದರು? ಅವರಿಂದ ವರದಿ ಪಡೆದ ಬಳಿಕ ಮೀಸಲು ನಿಗದಿ ಬದಲಾವಣೆ ಮಾಡಿದ್ದು ಯಾಕೆ? ಹಾಗೇ ಬದಲಾವಣೆ ಮಾಡುವಾಗ ನಿರ್ದಿಷ್ಟ ಕಾರಣ ನೀಡಿ ಹೇಳಬೇಕಲ್ಲವೇ ಎಂದು ಪ್ರಶ್ನಿಸಿದರು.



ಉದಯವಾಹಿನಿ ಚಿತ್ರ

ಈ ಜಿಲ್ಲೆಯಲ್ಲಿ ಹೇಗೆ ನಡೀತಾ ಇದೆ ಅಂದ್ರೆ, ಆರು ತಿಂಗಳುಗಳ ಕಾಲ ಎಡಿಸಿ ಇರಲಿಲ್ಲ, ಜಗದೀಶ್ ಅಂತಾ ಬಂದ್ರು ಎರಡೇ ದಿನದಲ್ಲಿ ಹೋದ್ರು, ಒಂದೇ ವಾರದಲ್ಲಿ ರಜೆ ಹಾಕಿ ಹೋದ್ರು. ಸಕಲೇಶಪುರ ಎಸಿ ಒಂದು ತಿಂಗಳೂ ಇರಲಿಲ್ಲ, ವರ್ಗಾವಣೆ ತಗೊಂಡ್ ಹೋದ್ರು. ಹಾಸನದ ಎಡಿಸಿ, ಎಸ್‌ಎಲ್ ಎಓ, ಸಕಲೇಶಪುರ ಎಸಿ ಎಲ್ಲಾ ಹೋದ್ರು, ಹಲವು ಕಡೆಗಳಲ್ಲಿ ಎರಡು, ಮೂರು ಕಡೆ ಚಾರ್ಜ್ ಹಾಕಿದ್ದಾರೆ.

> ನಾನು ಡಿಸಿ ಆಫೀಸ್‌ಗೆ ಹೋಗಿದ್ನೋ ಇಲ್ಲವೋ ಅನ್ನೋದನ್ನ ಹೇಳಲಿ. ಸೋಮವಾರದ (ಆ.31) ಒಳಗೆ ಮೀಸಲು ಬದಲಾವಣೆ ಆಗದಿದ್ದರೆ ಹೋರಾಟ ಮಾಡುತ್ತೇವೆ ಎಂದು ಎಚ್ಚರಿಕೆ ನೀಡಿದ್ದಾರೆ. -ಹೆಚ್ ಡಿ ರೇವಣ್ಣ

ಅಧಿಕಾರಿಗಳು ಕೆಲಸ ಮಾಡುವುದಕ್ಕೆ ಆಗುತ್ತಿಲ್ಲ. ಅವರು ದಬ್ಬಾಳಿಕೆ ಮಾಡಲಿ, ರಿಪೇರಿ ಮಾಡೋದು ಗೊತ್ತಿದೆ ಎಂದು ವಾರ್ನಿಂಗ್ ನೀಡಿದರು.

**ನೀವು ಹೇಳಿದಂತೆ ಕೇಳದಿದ್ರೆ ದ್ವೇಷಿಸ್ತೀರಾ:** JDS ಶಾಸಕ ಹೆಚ್.ಡಿ ರೇವಣ್ಣಗೆ ಹಾಸನ ಜಿಲ್ಲಾಧಿಕಾರಿ ತಿರುಗೇಟು ಮೀಸಲು ನಿಗದಿಯಾಗಿರುವ ದೃಢೀಕೃತ ಪ್ರತಿ ಕೇಳಿದರೆ ಇನ್ನೂ ಕೊಡ್ತಾ ಇಲ್ಲ. ರೈತರಿಗೆ ತೊಂದರೆ ಕೊಡಲು ನಾನು ಬಿಡಲ್ಲ.

# ವಾಸ್ತವಾಂಶ ಆಧರಿಸಿ ಬರ ಘೋಷಣೆ ಕುರಿತು ನಿರ್ಧಾರ

## ಸಮೂಹದಲ್ಲಿ ಕಂಡಿರುವ ಅಸಮಾಧಾನ ತಮ್ಮ ಗಮನಕ್ಕೂ ಬಂದಿದೆ. ರೈತರು ಆತಂಕ ಪಡೋ ಕಾರಣವಿಲ್ಲ. ಸರ್ಕಾರ ರೈತರ ಪರವಾಗಿದೆ

**• ಉದಯವಾಹಿನಿ ಕಲಬುರಗಿ/ ಜೇವರ್ಗಿ,**

ಬರಗಾಲ ಪೀಡಿತ ಜಿಲ್ಲೆಗಳ ಪಟ್ಟಿಗೆ ಕಲಬುರಗಿ ಸೇರ್ಪಡೆಗಾಗಿ ಅದಾಗಲೇ ಸಿಎಂ ಡಿಕೆ ಶಿವಕುಮಾರ್, ಡಿಸಿಎಂ ಡಾ. ಪರಮೇಶ್ವರ ಅವರನ್ನು ಕಂಡು ಗಮನ ಸೆಳೆದಿರುವೆ.

ಮಳೆ ಕೊರತೆ, ಬೆಳೆಹಾನಿ, ಒಣಹವೆ ಇತ್ಯಾದಿ ವಾಸ್ತವಾಂಶ ಆಧರಿಸಿ ಶೀಘ್ರ ನಿರ್ಧಾರ ಹೊರಬೀಳಲಿದೆ ಎಂದು ಸಣ್ಣ ನೀರಾವರಿ,

**1 : ಯಡ್ರಾಮಿಯಲ್ಲಿ ಬರ ಭೀಕರ**
**2 : ಯಡ್ರಾಮಿಗೆ ಮಳೆ ಕೊರತೆ**
**3 : ಆತಂಕಪಡುವ ಅಗತ್ಯವಿಲ್ಲ**

ವಿಜ್ಞಾನ ತಂತ್ರಜ್ಞಾನ ಖಾತೆ ಸಚಿವ ಡಾ. ಅಜಯ್ ಸಿಂಗ್ ಹೇಳಿದ್ದಾರೆ.

ಕಲಬುರಗಿ ಸಂಚಾರದಲ್ಲಿರುವ ಸಚಿವರು ಜೇವರ್ಗಿ, ಯಡ್ರಾಮಿ ತಾಲೂಕಿನಲ್ಲಿ ಸಂಚರಿಸಿ ರೈತರ ಹೊಲಗದ್ದೆಯಲ್ಲಿ ಸುತ್ತಾಡಿ ರೈತರೊಂದಿಗೆ ಮಾತುಕತೆ ನಡೆಸಿ ಬೆಳೆಹಾನಿ, ಕೃಷಿ ವಲಯದ ವಾಸ್ತವ ಚಿತ್ರಣ ಪಡೆದುಕೊಂಡರು.

ತಾಲ್ಲೂಕನ್ನು ಬರಪೀಡಿತ ಎಂದು ಘೋಷಿಸುವುದು ಕೇವಲ ಮಳೆ ಕೊರತೆಯೊಂದೇ ಅಂಶವನ್ನು ಆಧರಿಸಿ ಕೈಗೊಳ್ಳುವ ನಿರ್ಧಾರವಲ್ಲ, ಲಭ್ಯವಿರುವ ಅಧಿಕೃತ ಅಂಕಿ-ಅಂಶಗಳು ಹಾಗೂ ಕ್ಷೇತ್ರಮಟ್ಟದ ಪರಿಸ್ಥಿತಿಯನ್ನು ಸಮಗ್ರವಾಗಿ ಪರಿಶೀಲಿಸಿ ಸರ್ಕಾರ ಸೂಕ್ತ ನಿರ್ಧಾರ ಕೈಗೊಳ್ಳಲಿದೆ ಎಂದು ಸಚಿವ ಡಾ. ಅಜಯ್ ಸಿಂಗ್ ಸ್ಪಷ್ಟಪಡಿಸಿದರು.


ಉದಯವಾಹಿನಿ ಚಿತ್ರ

ಬರ ಘೋಷಣೆ ಕುರಿತು ಶಾಸಕರು ಈಗಾಗಲೇ ಮುಖ್ಯಮಂತ್ರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರನ್ನು ಭೇಟಿ ಮಾಡಿ ವರದಿ ಸಲ್ಲಿಸಿದ್ದಾರೆ. ರೈತರಿಗೆ ಯಾವುದೇ ರೀತಿಯ ಅನ್ಯಾಯವಾಗದಂತೆ ಅಗತ್ಯ ಕ್ರಮ ಕೈಗೊಳ್ಳುವುದು ನಮ್ಮ ಸರ್ಕಾರದ ಬದ್ಧತೆಯಾಗಿದೆ ಎಂದರು. ರಾಜ್ಯ ಸರ್ಕಾರ ಮೊದಲ ಹಂತದಲ್ಲಿ ಬರ ಪೀಡಿತ ಎಂದು ಅಧಿಕೃತವಾಗಿ ಘೋಷಿಸಿರುವ 101 ತಾಲ್ಲೂಕು ಪಟ್ಟಿಯಲ್ಲಿ ಕಲಬುರಗಿ ಜಿಲ್ಲೆಯ ಒಂದೂ ತಾಲ್ಲೂಕು ಸ್ಥಾನ ಪಡೆಯದಿರುವುದರಿಂದ ಜಿಲ್ಲೆಯಾದ್ಯಂತ ರೈತ ಸಮೂಹದಲ್ಲಿ ಕಂಡಿರುವ ಅಸಮಾಧಾನ ತಮ್ಮ ಗಮನಕ್ಕೂ ಬಂದಿದೆ. ರೈತರು ಆತಂಕ ಪಡೋ ಕಾರಣವಿಲ್ಲ, ಸರ್ಕಾರ ರೈತರ ಪರವಾಗಿದೆ ಎಂದು ಡಾ. ಅಜಯ್ ಸಿಂಗ್ ಅಭಯ ನೀಡಿದರು.

ಜೇವರ್ಗಿ ಹಾಗೂ ಯಡ್ರಾಮಿ ತಾಲ್ಲೂಕುಗಳಲ್ಲಿ ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಮಳೆ ಕೊರತೆಯಿಂದ ರೈತರು ಎದುರಿಸುತ್ತಿರುವ ಸಂಕಷ್ಟವನ್ನು ಕಂಡಿರುವೆ. ಇದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದ್ದು, ಮಳೆ, ಬಿತ್ತನೆ, ಬೆಳೆ ಪರಿಸ್ಥಿತಿ ಸೇರಿದಂತೆ ಅಧಿಕೃತ ಅಂಕಿ-ಅಂಶಗಳ ಆಧಾರದ ಮೇಲೆ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಡಾ. ಅಜಯ್ ಸಿಂಗ್ ಹೇಳಿದರು.

> ಜೇವರ್ಗಿ ಮತ್ತು ಯಡ್ರಾಮಿ ರೈತರು ಆತಂಕಪಡುವ ಅಗತ್ಯವಿಲ್ಲ. ಸರ್ಕಾರ ರೈತರೊಂದಿಗೆ ಇದೆ. ಮಳೆ ಪರಿಸ್ಥಿತಿ ಹಾಗೂ ಬೆಳೆ ಸ್ಥಿತಿಯನ್ನು ನಿರಂತರವಾಗಿ ಗಮನಿಸಲಾಗುತ್ತಿದೆ. ರೈತರಿಗೆ ಅಗತ್ಯವಿರುವ ನೆರವು ಮತ್ತು ಪರಿಹಾರ ಕ್ರಮಗಳನ್ನು ಕೈಗೊಳ್ಳಲಾಗುವುದು. ರೈತರ ಸಂಕಷ್ಟವನ್ನು ರಾಜಕೀಯ ಲಾಭಕ್ಕಾಗಿ ಬಳಸಿಕೊಳ್ಳುವುದು ಸರಿಯಲ್ಲ. ಸರ್ಕಾರದ ಮುಂದೆ ರೈತರ ಹಿತವೇ ಮೊದಲ ಆದ್ಯತೆಯಾಗಿದೆ.
> -ಡಾ. ಅಜಯ್ ಧರ್ಮಸಿಂಗ್

**2026-27ನೇ ಸಾಲಿನ ಖಾರಿಫ್ ಬೆಳೆ ವಿಮೆ ನೋಂದಣಿ ಮಾಹಿತಿಯಂತೆ ಜೇವರ್ಗಿಯಲ್ಲಿ 42,769 ಅರ್ಜಿಗಳು ಸಲ್ಲಿಕೆಯಾಗಿದ್ದು, 58,642.82 ಹೆಕ್ಟೇರ್ ಪ್ರದೇಶ ವಿಮಾ ವ್ಯಾಪ್ತಿಗೆ ಒಳಪಟ್ಟಿದೆ. ಈ ಪ್ರದೇಶಕ್ಕೆ ?347.44 ಕೋಟಿ ವಿಮಾ ಮೊತ್ತ ನಿಗದಿಯಾಗಿದೆ. ಯಡ್ರಾಮಿಯಲ್ಲಿ 28,572 ಅರ್ಜಿಗಳು ಸಲ್ಲಿಕೆಯಾಗಿದ್ದು, 38,943.12 ಹೆಕ್ಟೇರ್ ಪ್ರದೇಶ ವಿಮಾ ವ್ಯಾಪ್ತಿಗೆ ಒಳಪಟ್ಟಿದೆ.**

ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ಆಗಸ್ಟ್ 27 ರ ಮಳೆ ವರದಿ ಪ್ರಕಾರ, ಜೇವರ್ಗಿ ತಾಲ್ಲೂಕಿನಲ್ಲಿ ಜೂನ್ 1 ರಿಂದ ಆಗಸ್ಟ್ 29 ರವರೆಗೆ 393.7 ಮಿ.ಮೀ. ವಾಡಿಕೆ ಮಳೆಯಾಗಬೇಕಾಗಿತ್ತು ಆದರೆ 184.9 ಮಿ.ಮೀ. ಮಾತ್ರ ಮಳೆಯಾಗಿದೆ. ಇದರಿಂದ ಶೇ.53 ರಷ್ಟು ಮಳೆ ಕೊರತೆ ದಾಖಲಾಗಿದೆ.

ಯಡ್ರಾಮಿ ತಾಲ್ಲೂಕಿನಲ್ಲಿ ಇದೇ ಅವಧಿಯಲ್ಲಿ 327.0 ಮಿ.ಮೀ. ವಾಡಿಕೆ ಮಳೆಯ ಬದಲಿಗೆ 201.0 ಮಿ.ಮೀ. ಮಳೆಯಾಗಿದ್ದು, ಶೇ.39 ರಷ್ಟು ಕೊರತೆ ದಾಖಲಾಗಿದೆ.

ಆಗಸ್ಟ್ 1 ರಿಂದ 29 ರವರೆಗೆ ಜೇವರ್ಗಿ ತಾಲ್ಲೂಕಿನಲ್ಲಿ ಸಾಮಾನ್ಯವಾಗಿ 144.3 ಮಿ.ಮೀ. ಮಳೆಯಾಗಬೇಕಾಗಿತ್ತು, ಈ ಅವಧಿಯಲ್ಲಿ ಕೇವಲ 35.2 ಮಿ.ಮೀ. ಮಳೆಯಾಗಿದೆ. ಇದರಿಂದ ತಾಲ್ಲೂಕಿನಲ್ಲಿ ಶೇ.76 ರಷ್ಟು ಮಳೆ ಕೊರತೆ ದಾಖಲಾಗಿದೆ.

# ಶ್ರೀ ದತ್ತಾತ್ರೇಯ ದೇವಸ್ಥಾನಕ್ಕೆ ಜಿಲ್ಲಾಧಿಕಾರಿ ದಿಢೀರ್ ಭೇಟಿ

**• ಉದಯವಾಹಿನಿ, ಅಫಜಲಪುರ:**

ತಾಲ್ಲೂಕಿನ ಪ್ರಸಿದ್ಧ ದೇವಲ್ ಗಾಣಗಾಪುರದ ದತ್ತಾತ್ರೇಯ ಮಹಾರಾಜರ ದೇವಸ್ಥಾನಕ್ಕೆ ಜಿಲ್ಲಾಧಿಕಾರಿ ಇಕ್ರಂ ಶರೀಫ್ ಸೇರಿದಂತೆ ಹಿರಿಯ ಅಧಿಕಾರಿಗಳು ಶನಿವಾರ ರಾತ್ರಿ 1 ಗಂಟೆಗೆ ದಿಢೀರ್ ಭೇಟಿ ನೀಡಿ, ಭಕ್ತರ ಅನುಕೂಲಕ್ಕಾಗಿ ಕೈಗೊಳ್ಳಲಾಗಿರುವ ವ್ಯವಸ್ಥೆಗಳನ್ನು ಪರಿಶೀಲಿಸಿದರು. ಕೆಕೆಆರ್‌ಡಿಬಿ ಕಾರ್ಯದರ್ಶಿ ನಳಿನ್ ಅತುಲ್, ಜಿಪಂ ಸಿಇಒ ರಾಹುಲ್ ಸಂಕನೂರ, ಎಸ್ಪಿ ಅಡ್ಡೂರು ಶ್ರೀನಿವಾಸಲು ಹಾಗೂ ಪ್ರೊಬೇಷನರಿ ಐಎಎಸ್ ಅಧಿಕಾರಿ ಶಿಖರ್ ಮೋಘಾ ಅವರೊಂದಿಗೆ ದೇವಸ್ಥಾನದ ಆವರಣ, ಸುತ್ತಮುತ್ತಲಿನ ಪ್ರದೇಶ, ಭಕ್ತರ ದರ್ಶನ ವ್ಯವಸ್ಥೆ ಹಾಗೂ ವಾಹನ ನಿಲುಗಡೆ ಸ್ಥಳಗಳನ್ನು ಪರಿಶೀಲಿಸಿದರು.

ದೇವಸ್ಥಾನಕ್ಕೆ ಆಗಮಿಸುವ ಭಕ್ತರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಅಗತ್ಯ ವ್ಯವಸ್ಥೆಗಳನ್ನು ಸಮರ್ಪಕವಾಗಿ ಮಾಡಬೇಕು. ದೇವಸ್ಥಾನದ ಸುತ್ತಮುತ್ತ ಸ್ವಚ್ಛತೆ ಕಾಪಾಡುವುದು, ಸಮರ್ಪಕ ವಿದ್ಯುತ್ ಬೆಳಕಿನ ವ್ಯವಸ್ಥೆ,


ಉದಯವಾಹಿನಿ ಚಿತ್ರ

ಭಕ್ತರ ಜನದಟ್ಟಣೆ ಹಾಗೂ ವಾಹನ ದಟ್ಟಣೆ ನಿಯಂತ್ರಣ ಮತ್ತು ಪಾರ್ಕಿಂಗ್ ವ್ಯವಸ್ಥೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಜಿಲ್ಲಾಧಿಕಾರಿ ಅಧಿಕಾರಿಗಳಿಗೆ ಸೂಚಿಸಿದರು. ನಂತರ ಧಾರ್ಮಿಕ ದತ್ತಿ ಇಲಾಖೆಯ ವಸತಿ ಗೃಹಕ್ಕೆ ಭೇಟಿ ನೀಡಿದ ಅಧಿಕಾರಿಗಳು ಕುಡಿಯುವ ನೀರು, ಕೊಠಡಿಗಳು ಹಾಗೂ ಶೌಚಾಲಯಗಳ ವ್ಯವಸ್ಥೆಯನ್ನು ಪರಿಶೀಲಿಸಿದರು. ಹೊರ ಜಿಲ್ಲೆ ಹಾಗೂ ವಿವಿಧ ರಾಜ್ಯಗಳಿಂದ ಆಗಮಿಸುವ ಭಕ್ತರಿಗೆ ಉತ್ತಮ ಮೂಲಸೌಕರ್ಯ ಒದಗಿಸುವಂತೆ ಸೂಚಿಸಿದರು.

> ದೇವಸ್ಥಾನಕ್ಕೆ ಆಗಮಿಸುವ ಭಕ್ತರಿಗೆ ಯಾವುದೇ ತೊಂದರೆಯಾಗದಂತೆ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು.
> ಪಿಎಸ್‌ಐ ಸಂಗೀತಾ ಸಿಂಧೆ ಮಾತನಾಡಿ, ಭಕ್ತರ ವಾಹನಗಳಿಗೆ ಸೂಕ್ತ ಪಾರ್ಕಿಂಗ್ ವ್ಯವಸ್ಥೆ ಹಾಗೂ ದೇವಸ್ಥಾನದಲ್ಲಿ ಸುಗಮ ದರ್ಶನಕ್ಕಾಗಿ ಸರದಿ ಸಾಲಿನ ವ್ಯವಸ್ಥೆ ಕಲ್ಪಿಸಲಾಗುತ್ತಿದೆ ಎಂದು ಮಾಹಿತಿ ನೀಡಿದರು. -ಶಿವಕಾಂತಮ್ಮ

ಅಮಾವಾಸ್ಯೆ, ಹುಣ್ಣಿಮೆ ಹಾಗೂ ಗುರುವಾರ ಸೇರಿದಂತೆ ವಿಶೇಷ ದಿನಗಳಲ್ಲಿ ದೇಶದ ವಿವಿಧ ರಾಜ್ಯಗಳಿಂದ ಸಾವಿರಾರು ಭಕ್ತರು ದತ್ತಾತ್ರೇಯ ಮಹಾರಾಜರ ದರ್ಶನಕ್ಕಾಗಿ ದೇವಲ್ ಗಾಣಗಾಪುರಕ್ಕೆ ಆಗಮಿಸುತ್ತಾರೆ. ಈ ಸಂದರ್ಭದಲ್ಲಿ ಭಕ್ತರ ಸುರಕ್ಷತೆ ಹಾಗೂ ಸುಗಮ ದರ್ಶನಕ್ಕೆ ಯಾವುದೇ ಅಡಚಣೆಯಾಗದಂತೆ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಅಧಿಕಾರಿಗಳು ತಿಳಿಸಿದರು.

# ಐತಿಹಾಸಿಕ ಪರಂಪರೆ ಉಳಿಸಿ ಸಪ್ತಾಹ

**• ಉದಯವಾಹಿನಿ, ಕೆಂಭಾವಿ:**

ಶ್ರೀ ಗುರು ಕಾಂತೇಶ್ವರ ಹಿರೇಮಠದಲ್ಲಿ ನಡೆದ ಐತಿಹಾಸಿಕ ಪರಂಪರೆ ಉಳಿಸಿ ಸಪ್ತಾಹ ಕಾರ್ಯಕ್ರಮದಲ್ಲಿ ಹಿರಿಯ ಉಪನ್ಯಾಸಕರಾದ ವೆಂಕನಗೌಡ ಪಾಟೀಲ ಮಾಲಹಳ್ಳಿ ಬಿತ್ತಿ ಪತ್ರಿಕೆ ಬಿಡುಗಡೆ ಮಾಡಿದರು ಈ ಸಂದರ್ಭದಲ್ಲಿ ಮಠದ ಪೂಜ್ಯರಾದ ಷ.ಬ್ರ. ಶ್ರೀ ಚನ್ನಬಸವ ಶಿವಾಚಾರ್ಯರು ಹಾಗೂ ಸಂಶೋಧಕರಾದ ಶ್ರೀ ನಿಂಗನಗೌಡ ದೇಸಾಯಿ ಪರಸನಹಳ್ಳಿ ಹಾಗೂ ಗುಡದಯ್ಯ ದಾವಣಗೆರೆ ಹಾಗೂ ಇತರರು ಇದ್ದರು.

ಉದಯವಾಹಿನಿ ಚಿತ್ರ


# ಸೆಪ್ಟಂಬರ್ 1ರಿಂದ ಭದ್ರಾ ಬಲದಂಡೆ ನಾಲೆಗೆ ನೀರು ಬಿಡುಗಡೆ: ಕುಡಿಯಲು ಮಾತ್ರ ಬಳಕೆ

**• ಉದಯವಾಹಿನಿ, ಶಿವಮೊಗ್ಗ:**

ದಾವಣಗೆರೆ ಹಾಗೂ ಚನ್ನಗಿರಿ ತಾಲ್ಲೂಕುಗಳ ಜನ, ಜಾನುವಾರುಗಳಿಗೆ ಮತ್ತು ಬಹುಗ್ರಾಮ ಕುಡಿಯುವ ನೀರಿನ ಯೋಜನೆಯ ಉದ್ದೇಶಕ್ಕಾಗಿ ಸೆಪ್ಟಂಬರ್ 1 ರಿಂದ ಭದ್ರಾ ಬಲದಂಡೆ ನಾಲೆಯಿಂದ ನೀರನ್ನು ಹರಿಸಲು ನಿರ್ಧರಿಸಲಾಗಿದೆ.

ಪ್ರಾದೇಶಿಕ ಆಯುಕ್ತರ ಆದೇಶದಂತೆ, ದಿನಾಂಕ 01.09.2026 ರಿಂದ 10.09.2026 ರವರೆಗೆ ಪ್ರತಿದಿನ 1,500 ಕ್ಯೂಸೆಕ್ ಪ್ರಮಾಣದಲ್ಲಿ ನೀರನ್ನು ಇಂಪೌಂಡ್ ರಿಸರ್ವಿಯರ್‌ಗಳಿಗೆ ಹರಿಸಲಾಗುವುದು ಎಂದು ಭದ್ರಾ ಯೋಜನಾ ವೃತ್ತದ ಅಧೀಕ್ಷಕ ಅಭಿಯಂತರರು ಅಧಿಕೃತ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಕುಡಿಯುವ ನೀರಿಗೆ ಮಾತ್ರ:** ನಾಲೆಯಲ್ಲಿ ಹರಿಸಲಾಗುತ್ತಿರುವ ನೀರನ್ನು ಕೇವಲ ಕುಡಿಯುವ ನೀರಿನ ಉದ್ದೇಶಕ್ಕೆ ಮಾತ್ರ ಬಳಸಬೇಕು. ಯಾವುದೇ ಕಾರಣಕ್ಕೂ ಅಚ್ಚುಕಟ್ಟು ಪ್ರದೇಶದ ಬೆಳೆಗಳಿಗೆ ಇದನ್ನು ಉಪಯೋಗಿಸಬಾರದು ಎಂದು ಆದೇಶದಲ್ಲಿ ತಿಳಿಸಲಾಗಿದೆ.

**ಅಕ್ರಮ ನೀರೆತ್ತುವುದು ನಿಷೇಧ:** ರೈತರು ನಾಲೆಯಿಂದ ಅಕ್ರಮವಾಗಿ ನೀರೆತ್ತುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ.

**ಸಾರ್ವಜನಿಕರಿಗೆ ಎಚ್ಚರಿಕೆ:** ನೀರು ಹರಿಯುವ ಅವಧಿಯಲ್ಲಿ ಸಾರ್ವಜನಿಕರು ಕಾಲುವೆಯಲ್ಲಿ ತಿರುಗಾಡುವುದಾಗಲಿ ಅಥವಾ ದನ, ಕರುಗಳನ್ನು ಕಾಲುವೆಗೆ ಇಳಿಸುವುದಾಗಲಿ ಮಾಡಬಾರದು ಎಂದು ಮುನ್ನೆಚ್ಚರಿಕೆ ನೀಡಲಾಗಿದೆ.

ಕುಡಿಯುವ ನೀರಿನ ಅಭಾವ ತಪ್ಪಿಸಲು ಕೈಗೊಳ್ಳಲಾಗಿರುವ ಈ ಕ್ರಮಕ್ಕೆ ಸಾರ್ವಜನಿಕರು ಹಾಗೂ ರೈತಬಾಂಧವರು ಇಲಾಖೆಯೊಂದಿಗೆ ಸಹಕರಿಸಬೇಕಾಗಿ ಭದ್ರಾ ಜಲಾಶಯ ಯೋಜನೆಯ ಕುಡಿಯುವ ನೀರಿನ ಸಮಿತಿ ವಿನಂತಿಸಿದೆ.

# ಜೈಲಿನೊಳಗೆ ಕೈದಿಗಳ ನಡುವೆ ಮಾರಾಮಾರಿ; ಜಗಳ ಬಿಡಿಸಲು ಹೋದ ಸಿಬ್ಬಂದಿ ಮೇಲೆಯೇ ಹಲ್ಲೆ

**• ಉದಯವಾಹಿನಿ, ಹಾಸನ:**

ಜೈಲಿನೊಳಗೇ ವಿಚಾರಣಾಧೀನ ಕೈದಿಗಳ ನಡುವೆ ಮಾರಾಮಾರಿ ನಡೆದಿದ್ದು, ಜಗಳ ಬಿಡಿಸಲು ಹೋದ ಜೈಲು ಸಿಬ್ಬಂದಿ ಮೇಲೂ ಹಲ್ಲೆ ನಡೆಸಿರುವ ಘಟನೆ ಹಾಸನ ನಗರದ ಸಂತೇಪೇಟೆಯಲ್ಲಿರುವ ಜಿಲ್ಲಾ ಕಾರಾಗೃಹದಲ್ಲಿ ನಡೆದಿದೆ.

ಫೋನ್ ಮಾಡಲು ಸರತಿ ಸಾಲಿನಲ್ಲಿ ನಿಂತಿದ್ದ ವಿಚಾರಣಾಧೀನ ಕೈದಿಗಳಾದ ಮೋಹನಕುಮಾರ ಹಾಗೂ ರಂಗಸ್ವಾಮಿ ನಡುವೆ ಮೊದಲು ಫೋನ್ ಕರೆ ಮಾಡುವ ವಿಚಾರಕ್ಕೆ ಜಗಳ ಶುರುವಾಗಿದೆ. ಬಳಿಕ ಜಗಳ ತಾರಕಕ್ಕೇರಿ ಇಬ್ಬರೂ ಪರಸ್ಪರ ಬಡಿದಾಡಿಕೊಂಡಿದ್ದಾರೆ. ಈ ವೇಳೆ ಜೈಲು ಮುಖ್ಯ ವೀಕ್ಷಕರಾದ ಪರಶುರಾಮ ಹಾಗೂ ವೀರೇಶ್ ಸಂಗಮದ್ ಜಗಳ ಬಿಡಿಸಲು ಮುಂದಾಗಿದ್ದಾರೆ. ಇದೇ ಸಂದರ್ಭದಲ್ಲಿ ಪಿಸಿಎಸ್ ಕೊಠಡಿಯೊಳಗೆ ಏಕಾಏಕಿ ನುಗ್ಗಿದ ಒಂಭತ್ತು ಮಂದಿ ವಿಚಾರಣಾಧೀನ ಕೈದಿಗಳು ರಂಗಸ್ವಾಮಿ ಮೇಲೆ ಹಲ್ಲೆ ನಡೆಸಿದ್ದಾರೆ.

ಶಶಿಧರ, ರಾಕೇಶ, ಯಲ್ಲಾಲಿಂಗ, ಆಕಾಶ, ಉಮೇಶ, ಸಾಯಿನಾಥ, ನಿರೂಪ್, ಭರತ ಹಾಗೂ ಚೇತನ್ ಸೇರಿ ರಂಗಸ್ವಾಮಿ ಮೇಲೆ ಹಲ್ಲೆ ನಡೆಸಿದ್ದಾರೆ. ಜಗಳ ಬಿಡಿಸಲು ಮುಂದಾದ ಜೈಲು ಸಿಬ್ಬಂದಿ ವೀರೇಶ್ ಸಂಗಮದ್, ಶಿವಕುಮಾರ ಹಾಗೂ ಪರಶುರಾಮ ಹೆಚ್. ಅವರ ಮೇಲೂ ಹಲ್ಲೆ ನಡೆದಿದೆ. ವೀರೇಶ್ ಸಂಗಮದ್ ಅವರನ್ನು ತಳ್ಳಿ ಕೆಳಗೆ ಬೀಳಿಸಿ ಆರೋಪಿಗಳು ಹಲ್ಲೆ ನಡೆಸಿದ್ದಾರೆ. ಹಲ್ಲೆಯಿಂದ ಗಾಯಗೊಂಡಿರುವ ಜೈಲು ವೀಕ್ಷಕ ವೀರೇಶ್ ಸಂಗಮದ್ ಅವರು ಹಾಸನ ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿದ್ದಾರೆ. ಹಲ್ಲೆ ನಡೆಸಿದ ಆರೋಪಿಗಳು ನಟೋರಿಯಸ್ ರೌಡಿಶೀಟರ್ ಮಂಜೇಶ್ ಕೊಲೆ ಪ್ರಕರಣದ ಆರೋಪಿಗಳಾಗಿದ್ದಾರೆ ಎಂದು ತಿಳಿದುಬಂದಿದೆ. ಘಟನೆ ಸಂಬಂಧ ಹಾಸನ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.


# ಪ್ರಮೋಷನ್ ನೀಡುವುದಾಗಿ 50 ಸಾವಿರ ರೂ. ಲಂಚ ಸೆಲ್ಫಿ ವೀಡಿಯೋ ಮಾಡಿಟ್ಟು ಬ್ಯಾಂಕ್ ಸಿಬ್ಬಂದಿ ಆತ್ಮಹತ್ಯೆ

**• ಉದಯವಾಹಿನಿ, ದಾವಣಗೆರೆ:**

ಪ್ರಮೋಷನ್ ನೀಡುವುದಾಗಿ 50 ಸಾವಿರ ರೂ. ಲಂಚ ಪಡೆದು ಪ್ರಮೋಷನ್ ನೀಡದ ಹಿನ್ನೆಲೆ ಸೆಲ್ಫಿ ವೀಡಿಯೋ ಮಾಡಿಟ್ಟು ಬ್ಯಾಂಕ್ ಸಿಬ್ಬಂದಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ದಾವಣಗೆರೆ ಜಿಲ್ಲೆಯ ಹೊನ್ನಾಳಿ ತಾಲ್ಲೂಕಿನ ಮಾದನಬಾವಿ ಗ್ರಾಮದ ಬಳಿ ನಡೆದಿದೆ. ಮೋಹನ್ ಕುಮಾರ್ ಮೃತ ಬ್ಯಾಂಕ್ ಸಿಬ್ಬಂದಿ. ಮೋಹನ್ ಐಡಿಎಫ್‌ಸಿ ಬ್ಯಾಂಕ್‌ನಲ್ಲಿ ಕೆಲಸ ಮಾಡುತ್ತಿದ್ದು, ಪ್ರಮೋಷನ್ ನೀಡುವುದಾಗಿ ಹೇಳಿ ಅಧಿಕಾರಿಗಳು ಮೋಹನ್ ಬಳಿ ನಕಲಿ ಅಂಕಪಟ್ಟಿಗೆ 50 ಸಾವಿರ ಲಂಚ ಪಡೆದಿದ್ದರು.

ಮೋಹನ್ ಸಾಲ ಮಾಡಿ ನಕಲಿ ಅಂಕಪಟ್ಟಿಗೆ ಹಣ ಕೊಟ್ಟಿದ್ದರು. ಕೊನೆಗೆ ಯಾವುದೇ ಪ್ರಮೋಷನ್ ನೀಡದೇ, ಇತ್ತ ಸಾಲ ಬಾಧೆ ಹೆಚ್ಚಾಗಿ ಮೋಹನ್ ನೊಂದಿದ್ದರು. ನನ್ನ ಸಾವಿಗೆ ಬ್ಯಾಂಕ್ ಸಿಬ್ಬಂದಿ ತಿಪ್ಪೇಸ್ವಾಮಿ, ನಕಲಿ ಅಂಕಪಟ್ಟಿ ಮಾಡಿಕೊಟ್ಟ ಕೊಟ್ರೇಶ್ ಕಾರಣ ಎಂದು ಸೆಲ್ಫಿ ವೀಡಿಯೋದಲ್ಲಿ ಮೋಹನ್ ಹೇಳಿದ್ದಾರೆ. ನನಗೆ ನ್ಯಾಯ ಒದಗಿಸುವಂತೆ ಸೆಲ್ಫಿ ವೀಡಿಯೋ ಮುಖಾಂತರ ಮಾಜಿ ಸಚಿವ ಎಂಪಿ ರೇಣುಕಾಚಾರ್ಯಗೆ ಮನವಿ ಕೂಡ ಮಾಡಿದ್ದಾರೆ. ಬಳಿಕ ಬೈಕ್ ಸಹಿತ ತುಂಗಾ ನಾಲೆಗೆ ಹಾರಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಸದ್ಯ ತುಂಗಾ ನಾಲೆಯಲ್ಲಿ ಮೋಹನ್ ಮೃತದೇಹಕ್ಕಾಗಿ ಅಗ್ನಿಶಾಮಕ ಸಿಬ್ಬಂದಿ ಶೋಧ ಕಾರ್ಯ ನಡೆಸುತ್ತಿದ್ದಾರೆ. ನಾಲೆಯಲ್ಲಿ ಬೈಕ್ ಪತ್ತೆಯಾಗಿದ್ದು, ಮೃತದೇಹಕ್ಕಾಗಿ ಹುಡುಕಾಟ ನಡೆಸಲಾಗುತ್ತಿದೆ. ನ್ಯಾಮತಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.


ಉದಯವಾಹಿನಿ ಚಿತ್ರ

# ದೌರ್ಜನ್ಯದ ರೂಪದಲ್ಲಿ ನನ್ನ ರಾಜೀನಾಮೆ ಪಡೆದಿದ್ದು ಬಹಳ ನೋವು ತಂದಿದೆ: ಬಸವರಾಜ ಹೊರಟ್ಟಿ

**• ಉದಯವಾಹಿನಿ, ಗದಗ:**


ಉದಯವಾಹಿನಿ ಚಿತ್ರ

ನನ್ನ ರಾಜೀನಾಮೆ ಪಡೆಯಲು ಸ್ವತಃ ಸಿಎಂ ಅವರೇ ಸ್ಪೀಕರ್ ಕಚೇರಿಗೆ ಬಂದು ಬಾಗಿಲು ಹಾಕಿಕೊಂಡು ಒಂದೂವರೆ ಗಂಟೆ ಕುಳಿತು, ದೌರ್ಜನ್ಯದ ರೀತಿಯಲ್ಲಿ ರಾಜೀನಾಮೆ ಪಡೆದರು. ಇದು ನನಗೆ ಬಹಳ ನೋವು ತಂದಿದೆ ಎಂದು ವಿಧಾನ ಪರಿಷತ್ ಮಾಜಿ ಸಭಾಪತಿ ಬಸವರಾಜ ಹೊರಟ್ಟಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಗದಗ ಜಿಲ್ಲೆಯ ಶಿರಹಟ್ಟಿ ತಾಲ್ಲೂಕಿನ ಬೆಳ್ಳಟ್ಟಿ ಗ್ರಾಮದಲ್ಲಿ ಕಾರ್ಯಕರ್ತರ ಜೊತೆ ಮಾತನಾಡಿದ ಹೊರಟ್ಟಿ, ಸಿಎಂ ಡಿ.ಕೆ. ಶಿವಕುಮಾರ್ ನಡೆ ಬಗ್ಗೆ ಬೇಸರ ವ್ಯಕ್ತಪಡಿಸಿದರು.

ಜುಲೈ 24ರಂದು ರಾತ್ರಿ 11 ಗಂಟೆಗೆ ಸಿಎಂ ಡಿ.ಕೆ. ಶಿವಕುಮಾರ್ ಕರೆ ಮಾಡಿ ಸ್ಪೀಕರ್ ಸ್ಥಾನಕ್ಕೆ ರಾಜೀನಾಮೆ ನೀಡುವಂತೆ ಸೂಚಿಸಿದ್ದರು. ಆದರೆ ಆಗಸ್ಟ್ 14ರಂದು ವಿಧಾನ ಪರಿಷತ್ ಅಧಿವೇಶನ ಕರೆದು, ಸದನದ ಸದಸ್ಯರಿಗೆ ಕೃತಜ್ಞತೆ ಹಾಗೂ ಧನ್ಯವಾದ ಅರ್ಪಿಸಿದ ಬಳಿಕ ರಾಜೀನಾಮೆ ನೀಡಲು ತಾವು ನಿರ್ಧರಿಸಿದ್ದೆ ಎಂದು ಹೇಳಿದರು. ಆದರೆ ತಮ್ಮ ಆಪ್ತ ಕಾರ್ಯದರ್ಶಿಯಿಂದ ರಾಜೀನಾಮೆ ಪತ್ರ ತರಿಸಿ, ಯಾವುದೇ ಕಾರಣ ನೀಡದೇ ಸಿಎಂ ಅವರೇ ಲೆಟರ್ ಟೈಪ್ ಮಾಡಿಸಿ ತಮ್ಮಿಂದ ಸಹಿ ಮಾಡಿಸಿಕೊಂಡರು ಎಂದು ಹೊರಟ್ಟಿ ಆರೋಪಿಸಿದರು. ರಾಜೀನಾಮೆ ಪಡೆಯಲು ಸಿಎಂ ಅವರೇ ಕಚೇರಿಗೆ ಬಂದು ಬಾಗಿಲು ಹಾಕಿಕೊಂಡು ಕುಳಿತಿದ್ದರು. ಒಂದೂವರೆ ಗಂಟೆ ಕುಳಿತು ದೌರ್ಜನ್ಯದ ರೀತಿಯಲ್ಲಿ ರಾಜೀನಾಮೆ ಪಡೆದಿದ್ದು ನನಗೆ ಬಹಳ ನೋವುಂಟು ಮಾಡಿದೆ ಎಂದು ಹೊರಟ್ಟಿ ಬೇಸರ ವ್ಯಕ್ತಪಡಿಸಿದರು

# ಸರ್ವರ್ ಡೌನ್ ಪಡಿತರ ಸಿಗದೆ ಬೆಳಗಾವಿ ಜಿಲ್ಲೆಯಾದ್ಯಂತ ಕಾರ್ಡುದಾರರ ಪರದಾಟ

**• ಉದಯವಾಹಿನಿ, ಬೆಳಗಾವಿ:**

ಉದಯವಾಹಿನಿ ಚಿತ್ರ


ಜಿಲ್ಲೆಯಾದ್ಯಂತ ಪಡಿತರ ವಿತರಣಾ ವ್ಯವಸ್ಥೆಯಲ್ಲಿ ಸರ್ವರ್ ವೈಫಲ್ಯ ತಲೆದೋರಿದ್ದು, ನ್ಯಾಯಬೆಲೆ ಅಂಗಡಿಗಳ ಮುಂದೆ ಸಾರ್ವಜನಿಕರು ಗಂಟೆಗಟ್ಟಲೆ ಸರತಿ ಸಾಲಿನಲ್ಲಿ ನಿಲ್ಲುವಂತಾಗಿದೆ. ಪಡಿತರ ಪಡೆಯಲು ಇಂದು ಕೊನೆಯ ದಿನವಾಗಿದ್ದು, ಬೆಳಗಾವಿ ಜಿಲ್ಲೆಯ ಗೋಕಾಕ ತಾಲ್ಲೂಕಿನ ಕೊಣ್ಣೂರು ಹಾಗೂ ಯರಗಟ್ಟಿ ತಾಲ್ಲೂಕಿನ ಮುಗಳಿಹಾಳ ಸೇರಿದಂತೆ ಹಲವೆಡೆ ಕಾರ್ಡುದಾರರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಸರ್ಕಾರ ಬಯೋಮೆಟ್ರಿಕ್ ಆಧಾರಿತ ಪಡಿತರ ವಿತರಣೆಯನ್ನು ಕಡ್ಡಾಯಗೊಳಿಸಿದೆ. ಆದರೆ, ತಾಂತ್ರಿಕ ಅಡಚಣೆಯಿಂದಾಗಿ ಸರ್ವರ್ ಸಂಪರ್ಕ ಅತ್ಯಂತ ನಿಧಾನಗತಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಯಂತ್ರದಲ್ಲಿ ಹೆಬ್ಬೆರಳಿನ ಗುರುತು ಸ್ವೀಕರಿಸುತ್ತಿಲ್ಲ. ತಾಂತ್ರಿಕ ದೋಷದ ಕಾರಣ ಇಲ್ಲಿಯವರೆಗೆ ಶೇ. 50ರಷ್ಟು ಕಾರ್ಡುದಾರರಿಗೆ ಮಾತ್ರ ಪಡಿತರ ತಲುಪಿದೆ. ಉಳಿದ ಅರ್ಧದಷ್ಟು ಜನ ಕಳೆದ ನಾಲ್ಕೈದು ದಿನಗಳಿಂದ ದಿನಸಿ ಸಿಗದೆ ಅಂಗಡಿಗಳ ಸುತ್ತ ಅಲೆಯುತ್ತಿದ್ದಾರೆ. ಬೆಳಗ್ಗೆಯಿಂದಲೇ ಸರತಿ ಸಾಲಿನಲ್ಲಿ ಕಾದು ನಿಲ್ಲುವ ಅನಿವಾರ್ಯತೆಯಿಂದಾಗಿ ಕೂಲಿ ಕೆಲಸಕ್ಕೆ ಹೋಗಲಾಗದೆ ದಿನದ ಸಂಪಾದನೆಯನ್ನು ಕಳೆದುಕೊಳ್ಳುವಂತಾಗಿದೆ ಎಂದು ಅಳಲು ತೋಡಿಕೊಂಡಿದ್ದಾರೆ. ಸರ್ವರ್ ಸಮಸ್ಯೆ ಮತ್ತು ಅಧಿಕಾರಿಗಳ ನಿರ್ಲಕ್ಷ್ಯದ ವಿರುದ್ಧ ಸಾರ್ವಜನಿಕರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದು, ತಕ್ಷಣವೇ ತಾಂತ್ರಿಕ ದೋಷ ಸರಿಪಡಿಸಿ ಎಲ್ಲರಿಗೂ ಸಮರ್ಪಕವಾಗಿ ಪಡಿತರ ತಲುಪಿಸಲು ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದ್ದಾರೆ.

# ಇನ್ನು ಕೇರಳಂ ರೈಲ್ವೆ ವಿಭಾಗ ಕೇರಳಂಗೆ ಮಾತ್ರ ಸೀಮಿತ ?

## 2017ರಲ್ಲಿ, ನಾಗರಕೋಯಿಲ್ ಮಾರ್ಗವನ್ನು ಮಧುರೈ ವಿಭಾಗದೊಂದಿಗೆ ವಿಲೀನಗೊಳಿಸಲು ಕ್ರಮ ಕೈಗೊಳ್ಳಲಾಗಿತ್ತು.

**• ಉದಯವಾಹಿನಿ, ಕಾಸರಗೋಡು:**

ಮಂಗಳೂರು ರೈಲ್ವೆ ನಿಲ್ದಾಣ ವ್ಯಾಪ್ತಿ ಪಾಲಕ್ಕಾಡ್ ವಿಭಾಗದಿಂದ ಬೇರ್ಪಟ್ಟಂತೆ, ತಮಿಳುನಾಡಿನ ರೈಲ್ವೆ ನಿಲ್ದಾಣ ವ್ಯಾಪ್ತಿ ಹೊಂದಿರುವ ತಿರುವನಂತಪುರ ಮತ್ತು ಪಾಲಕ್ಕಾಡ್ ವಿಭಾಗಗಳ ಪ್ರದೇಶಗಳನ್ನು ತಮ್ಮ ವಿಭಾಗಗಳಲ್ಲಿ ಸೇರಿಸಬೇಕೆಂದು ತಮಿಳುನಾಡಿನ ಸ್ಥಳೀಯ ಸಂಘಟನೆಗಳು ಬೇಡಿಕೆ ಮುಂದಿಟ್ಟಿವೆ.

**1 : ವಿಭಾಗಗಳು ಸೀಮಿತಗೊಳ್ಳುವ ಸಾಧ್ಯತೆ**
**2 : 6 ಪ್ಲಾಟ್ ಫಾಮ್‌ಗ್ಳನ್ನು ನಿರ್ಮಿಸಿದೆ**
**3 : ಪ್ರತಿ ಕೋಚ್‌ಗೆ 2 ಕಾರ್ಮಿಕರಿದ್ದರೆ**

ಪ್ರಸ್ತುತ ತಿರುವನಂತಪುರ ವಿಭಾಗದ ಭಾಗವಾಗಿರುವ ಕನ್ಯಾಕುಮಾರಿ ಜಿಲ್ಲೆಯ ರೈಲು ನಿಲ್ದಾಣಗಳನ್ನು ಮಧುರೈ ವಿಭಾಗದಲ್ಲಿ ಮತ್ತು ಪಾಲಕ್ಕಾಡ್ ವಿಭಾಗದ ಭಾಗವಾಗಿರುವ ಪೊಲ್ಲಾಚಿಯನ್ನು ಸೇಲಂ ವಿಭಾಗಕ್ಕೆ ಸೇರಿಸಬೇಕೆಂಬ ಬೇಡಿಕೆ ಮುಂದಿಟ್ಟು ಚರ್ಚೆ ಶುರು ಮಾಡಿದ್ದಾರೆ. ಈ ಬೇಡಿಕೆ ಈಡೇರಿದರೆ ಭವಿಷ್ಯದಲ್ಲಿ ಕೇರಳಂ ರೈಲ್ವೆ ವಿಭಾಗಗಳು ಕೇರಳಂ ಭೂ ಪ್ರದೇಶಕ್ಕೆ ಮಾತ್ರ ಸೀಮಿತವಾಗಲಿದೆ. ಕೇರಳಂಗೆ ಮಾತ್ರ ವಿಭಾಗಗಳು ಸೀಮಿತಗೊಳ್ಳುವ ಸಾಧ್ಯತೆ ಬಗ್ಗೆ ರಾಜಕೀಯ ವಲಯದಲ್ಲಿ ಭಾರಿ ಚರ್ಚೆಯಾಗುತ್ತಿದೆ. ಕೇರಳಂ ಅನ್ನು ಪ್ರತ್ಯೇಕಿಸುವ ಕೇಂದ್ರ ಹುನ್ನಾರ ಇದು ಎಂದು ಆಡಳಿತ ಯುಡಿಎಫ್ ಹಾಗೂ ಪ್ರತಿಪಕ್ಷ ಎಲ್‌ಡಿಎಫ್ ಆರೋಪಿಸುತ್ತಿವೆ. ಆದರೆ ಬಿಜೆಪಿ ಮಾತ್ರ ಇದು ರೈಲ್ವೆ ಅಭಿವೃದ್ಧಿಯ ಭಾಗವಾಗಿ ಕೇಂದ್ರ ಸರಕಾರ ಕೈಗೊಂಡ ನಿರ್ಧಾರ ಎಂದು ಹೇಳುತ್ತಿದೆ.

ಉದಯವಾಹಿನಿ ಚಿತ್ರ


> ಪಾಲಕ್ಕಾಡ್ ವಿಭಾಗವು ಮಲಬಾರ್ ಪ್ರದೇಶಕ್ಕೆ ಹೊಸ ರೈಲುಗಳನ್ನು ಓಡಿಸಲು ಸಾಧ್ಯವಾಗುವುದಿಲ್ಲ. ರೈಲ್ವೆ ಮಂಡಳಿಯ ಅಧ್ಯಕ್ಷರಿಗೂ ಈ ವಿಷಯದ ಗಂಭೀರತೆಯನ್ನು ಮನವರಿಕೆ ಮಾಡಿಕೊಡಲಾಗುವುದು ಎನ್ನುತ್ತಾರೆ.
> -ಎಂ.ಕೆ.ರಾಘವನ್, ಸಂಸದ, ಕೋಳಿಕ್ಕೋಡ್.

> ತಿರುವನಂತಪುರ ವಿಭಾಗವು ರೈಲುಗಳನ್ನು ಸ್ವಚ್ಛಗೊಳಿಸಲು ತನ್ನ ನಿಲ್ದಾಣಗಳನ್ನು ಬಳಸುತ್ತಿದೆ ಮತ್ತು ಆ ಉದ್ದೇಶಕ್ಕಾಗಿ ಅನೇಕ ಅನಗತ್ಯ ರೈಲುಗಳನ್ನು ಒತ್ತಾಯಿಸುತ್ತಿದೆ ಎಂಬ ಆರೋಪವಿದೆ. ಪೊಲ್ಲಾಚಿ ಮಾರ್ಗದಲ್ಲಿ ಹೆಚ್ಚಿನ ರೈಲುಗಳು ಓಡುತ್ತಿಲ್ಲ ಎಂಬುದು ಮತ್ತೊಂದು ದೂರು. ಇದೀಗ 9 ರೈಲುಗಳು ಪೊಲ್ಲಾಚಿ ಮೂಲಕ ಓಡುತ್ತಿವೆ.
> -ಸಂಸದ, ಕೋಳಿಕ್ಕೋಡ್

2017ರಲ್ಲಿ, ನಾಗರಕೋಯಿಲ್ ಮಾರ್ಗವನ್ನು ಮಧುರೈ ವಿಭಾಗದೊಂದಿಗೆ ವಿಲೀನಗೊಳಿಸಲು ಕ್ರಮ ಕೈಗೊಳ್ಳಲಾಗಿತ್ತು. ಆದರೆ ತೀವ್ರ ಪ್ರತಿರೋಧದಿಂದಾಗಿ ಅದು ಸಾಧ್ಯವಾಗಲಿಲ್ಲ.

ಕುಳಿತುರ ಪಶ್ಚಿಮದಿಂದ ತಿರುನಲ್ವೇಲಿಯ ಬಳಿಯ ಮೇಲೆಪಾಳಯಂ ವರೆಗಿನ ಮಾರ್ಗವನ್ನು ಮಧುರೈಗೆ ವರ್ಗಾಯಿಸುವ ಬದಲು, ಕೊಲ್ಲಂನಿಂದ ಭಗವತಿಪುರಂಗೆ ಕೊಲ್ಲಂ-ಸೆಂಕೋಟಾ ಮಾರ್ಗವನ್ನು ತಿರುವನಂತಪುರ ವಿಭಾಗದೊಂದಿಗೆ ವಿಲೀನಗೊಳಿಸುವ ಪ್ರಸ್ತಾಪವಿತ್ತು.

ಕನ್ಯಾಕುಮಾರಿಯಲ್ಲಿರುವ ಸಂಘಟನೆಗಳು ಕನ್ಯಾಕುಮಾರಿ ಮತ್ತು ನಾಗರಕೋಯಿಲ್ ಟರ್ಮಿನಲ್‌ಗಳಿಂದ ಕೇರಳ ಮೂಲಕ ತಮಿಳುನಾಡಿಗೆ ಹೋಗುವ ರೈಲುಗಳಿಗೆ ಅವಕಾಶ ನೀಡಬಾರದು ಎಂದು ಆಗ್ರಹಿಸಿದೆ. ತಿರುವನಂತಪುರ ವಿಭಾಗವು ಇತ್ತೀಚೆಗೆ ಕನ್ಯಾಕುಮಾರಿಯಲ್ಲಿ 6 ಪ್ಲಾಟ್ ಫಾಮ್‌ಗ್ಳನ್ನು ನಿರ್ಮಿಸಿದೆ. ನಾಗರಕೋಯಿಲ್ ಜಂಕ್ಷನ್‌ನಲ್ಲಿಯೂ ವ್ಯಾಪಕ ಸೌಲಭ್ಯಗಳನ್ನು ಕಲ್ಪಿಸಲಾಗುತ್ತಿದೆ. 5 ಪಿಟ್ ಲೇನ್‌ಗಳು, 9 ಸ್ಟೆಬಿಲೈಸಿಂಗ್ ಲೇನ್‌ಗಳು ಮತ್ತು 6 ಪ್ಲಾಟ್‌ಫಾಮ್‌ಗ್ಳಿವೆ.

> ತಿರುನಲ್ವೇಲಿ- ಬಿಲಾಸ್‌ಪುರ, ನಾಗರಕೋಯಿಲ್-ಶಾಲಿಮಾರ್ ಮತ್ತು ದಿಬ್ರುಗಢ- ಕನ್ಯಾಕುಮಾರಿ ವಿವೇಕ್ ರೈಲುಗಳನ್ನು ಕೇರಳದಲ್ಲಿ ಓಡಿಸುವುದನ್ನು ನಿಲ್ಲಿಸಬೇಕು ಮತ್ತು ಬದಲಿಗೆ ಕೊಂಕಣ ಮೂಲಕ ತಿರುವನಂತಪುರಕ್ಕೆ ಹೋಗುವ 3 ರೈಲುಗಳನ್ನು ನಾಗರಕೋಯಿಲ್‌ಗೆ ವಿಸ್ತರಿಸಬೇಕು ಎಂದು ಹೋರಾಟಗಾರರು ಒತ್ತಾಯಿಸುತ್ತಿದ್ದಾರೆ.

ಆದರೆ ನಾಗರಕೋಯಿಲ್‌ನಲ್ಲಿ ರೈಲ್ವೆಗಳು ಸಾಕಷ್ಟು ಸಿಬ್ಬಂದಿ ಒದಗಿಸುತ್ತಿಲ್ಲ ಎಂಬ ದೂರುಗಳಿವೆ. ತಿರುವನಂತಪುರ ಯಾರ್ಡ್‌ನಲ್ಲಿ ಪ್ರತಿ ಕೋಚ್‌ಗೆ 2 ಕಾರ್ಮಿಕರಿದ್ದರೆ, ನಾಗರಕೋಯಿಲ್‌ನಲ್ಲಿ 3 ಕೋಚ್‌ಗಳಿಗೆ ಒಬ್ಬ ಉದ್ಯೋಗಿ ಮಾತ್ರ ಇದ್ದಾರೆ.

ಕೇರಳಂ ಸಂಸದರನ್ನು ಚರ್ಚೆಗೆ ಕರೆಯಲು ರೈಲ್ವೆ ಇಲಾಖೆ ಸಿದ್ಧವಾಗಿಲ್ಲ. ಕೇರಳಂನೊಂದಿಗೆ ಸಮಾಲೋಚಿಸದೆ ವಿಭಾಗವನ್ನು ಕಡಿತಗೊಳಿಸುವುದು ದ್ರೋಹವಾಗಿದೆ.